ಸಂಪುಟ: ೦೭/ ಸಂಚಿಕೆ: ೨೧೫/ಶುಕ್ರವಾರ ದಿನಾಂಕ : ೧೭-೧೦-೨೦೨೫/ ಪುಟ: ೬/ ಬೆಲೆ ೨-೦೦

ಸತ್ಯಕ್ಕೆ ಕಿರಣ ಸುಳ್ಳಿಗೆ ಕಿಡಿ

ಕಛೇರಿ ದೂರವಾಣಿ ಸಂಖ್ಯೆ 0831-3564491

# ಬೆಳಗಿನ ಸೂರ್ಯೋದಯ

ಕನ್ನಡ ಪ್ರಾದೇಶಿಕ ದಿನಪತ್ರಿಕೆ

ಬೆಳಗಾವಿ ಧಾರವಾಡ ಬಾಗಲಕೋಟ ವಿಜಯಪುರ ಗದಗ ಕೊಪ್ಪಳ ಹಾವೇರಿ ಕಾರವಾರ

ಸಂಪಾದಕರು : ಗುರುರಾಜ ಈರಪ್ಪಾ. ಕದಮ, Editor : GURURAJ IRAPPA. KADAM Cell : 9620099959

Volume : 07/ ISSUE : 215/FRIDAY Date : 17-10-2025/ RNI No. KARKAN/2019/77640/ Postal Reg No. PMG/KA/NK/BM/135/2025-27 / POST AT Vantamury Colony Post Office / email : belaginasuryodaya@gmail.com / Page : 6 / Rs. 2.00

## ಸರಕಾರಿ ಜಾಗಗಳಲ್ಲಿ ಖಾಸಗಿ ಸಂಘಟನೆಗಳ ಚಟುವಟಿಕೆಗಳಿಗೆ ಪೂರ್ವಾನುಮತಿ ಕಡ್ಡಾಯ : ಸಚಿವ ಸಂಪುಟ ನಿರ್ಧಾರ



ಬೆಂಗಳೂರು, : ಸರಕಾರಿ ಜಾಗಗಳಲ್ಲಿ ಆರೆಸ್ಸೆಸ್ ಚಟುವಟಿಕೆಗಳಿಗೆ ಅವಕಾಶ ನೀಡಬಾರದು ಎಂದು ಸಚಿವ ಪ್ರಿಯಾಂಕ್ ಖರ್ಗೆ, ಮುಖ್ಯಮಂತ್ರಿ ಸಿದ್ದರಾಮಯ್ಯಗೆ ಪತ್ರ ಬರೆದಿರುವುದು ವ್ಯಾಪಕ ಚರ್ಚೆಯಾಗುತ್ತಿರುವ ಬೆನ್ನಲ್ಲೆ, ರಾಜ್ಯ ಸಚಿವ ಸಂಪುಟವು ಸರಕಾರಿ ಜಾಗಗಳಲ್ಲಿ ಖಾಸಗಿ ಸಂಘಟನೆಗಳು, ಸಂಸ್ಥೆಗಳು ಯಾವುದೇ ಬಗೆಯ ಚಟುವಟಿಕೆಗಳನ್ನು ನಡೆಸಬೇಕಿದ್ದರೂ ಸಂಬಂಧಪಟ್ಟ ಪ್ರಾಧಿಕಾರಗಳಿಂದ ಪೂರ್ವಾನುಮತಿ ಪಡೆಯುವುದು ಕಡ್ಡಾಯಗೊಳಿಸಲು ಮಹತ್ವದ ನಿರ್ಧಾರ ಕೈಗೊಂಡಿದೆ.

ಗುರುವಾರ ವಿಧಾನಸೌಧದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅಧ್ಯಕ್ಷತೆಯಲ್ಲಿ ನಡೆದ ಸಚಿವ ಸಂಪುಟ ಸಭೆಯಲ್ಲಿ ಕೈಗೊಂಡ ನಿರ್ಧಾರಗಳ ಕುರಿತು ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವ ಎಚ್.ಕೆ.ಪಾಟೀಲ್ ಸುದ್ದಿಗೋಷ್ಠಿಯಲ್ಲಿ ಮಾಹಿತಿ ಒದಗಿಸಿದರು.

ರಾಜ್ಯದಲ್ಲಿ ಹಲವಾರು ಖಾಸಗಿ ಸಂಸ್ಥೆಗಳು, ಸಂಘಗಳು ತಮ್ಮ ಚಟುವಟಿಕೆಗಳು, ಪ್ರಚಾರ, ತರಬೇತಿ, ಉತ್ಸವಗಳು ಹಾಗೂ ಸದಸ್ಯರ ಮತ್ತು ಬೆಂಬಲಿಗರ ಸಭೆಗಳು ನಡೆಸುವ ಉದ್ದೇಶದಿಂದ ಸಾರ್ವಜನಿಕ ಸ್ಥಳಗಳು, ಸರಕಾರದ ಆಸ್ತಿಗಳು, ಜಮೀನುಗಳು, ಆಟದ ಮೈದಾನಗಳು, ಸಾರ್ವಜನಿಕ ರಸ್ತೆಗಳು ಇತ್ಯಾದಿಗಳನ್ನು ಸರಕಾರ ಅಥವಾ ಸಂಬಂಧಿತ ಇಲಾಖೆಗೆ ಮುಂಚಿತವಾಗಿ ಅನುಮತಿ ಪಡೆಯದೆ, ಅನೇಕ ಸಂದರ್ಭಗಳಲ್ಲಿ ಮಾಹಿತಿ ನೀಡದೆ ಬಳಸಿಕೊಳ್ಳುತ್ತಿರುವುದು ಕಂಡು ಬಂದಿದೆ ಎಂದು ಎಚ್.ಕೆ.ಪಾಟೀಲ್ ಹೇಳಿದರು.

ಆದುದರಿಂದ, ಸಾರ್ವಜನಿಕ ಸ್ಥಳ ಹಾಗೂ ಸರಕಾರಿ ಜಾಗಗಳ ಬಳಕೆಗೆ ಸಂಬಂಧಿಸಿದಂತೆ ನಿಯಮಾವಳಿಗಳನ್ನು ರೂಪಿಸಲು ನಿರ್ಧರಿಸಲಾಗಿದೆ. ಈ ಸಂಬಂಧ ವಿವರವಾದ ಸರಕಾರಿ ಆದೇಶವನ್ನು ಹೊರಡಿಸಲಾಗುವುದು. ಸರಕಾರದ, ಸರಕಾರಿ ಸಾಮ್ಯದ ಶಾಲಾ-ಕಾಲೇಜುಗಳು, ಅನುದಾನಿತ ಶೈಕ್ಷಣಿಕ ಸಂಸ್ಥೆಗಳ ಆವರಣದಲ್ಲಿ ಚಟುವಟಿಕೆಗಳನ್ನು ನಡೆಸಲು ಉನ್ನತ ಶಿಕ್ಷಣ ಇಲಾಖೆ, ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆಯಿಂದ ಅನುಮತಿ ಪಡೆಯಬೇಕು ಎಂದು ಅವರು ತಿಳಿಸಿದರು.

ಉದ್ಯಾನವನಗಳು, ಆಟದ ಮೈದಾನಗಳು, ಇತರೆ ತೆರೆದ ಸ್ಥಳಗಳಲ್ಲಿ ಚಟುವಟಿಕೆಗಳನ್ನು ನಡೆಸಲು ನಗರಾಭಿವೃದ್ಧಿ ಇಲಾಖೆ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯಿಂದ ಅನುಮತಿ ಪಡೆಯಬೇಕು. ಸಾರ್ವಜನಿಕ ರಸ್ತೆಗಳು, ಸರಕಾರದ ಇತರೆ ಆಸ್ತಿ, ಸ್ಥಳಗಳ ಬಳಕೆಗೆ ಸಂಬಂಧಪಟ್ಟ ಜಿಲ್ಲಾಧಿಕಾರಿಗಳು, ಪೊಲೀಸ್ ಆಯುಕ್ತರು ಅಥವಾ ಪೊಲೀಸ್ ಅಧೀಕ್ಷಕರಿಂದ ಅನುಮತಿ ಪಡೆಯಬೇಕು ಎಂದು ಎಚ್.ಕೆ.ಪಾಟೀಲ್ ಹೇಳಿದರು.

ಸಕ್ಷಮ ಪ್ರಾಧಿಕಾರಗಳು ಅನುಮತಿ ನೀಡುವ ಸಂದರ್ಭದಲ್ಲಿ ಸಂವಿಧಾನ ಬದ್ಧವಾದ ನಾಗರಿಕರ ಹಕ್ಕುಗಳಿಗೆ ಚ್ಯುತಿ ಉಂಟಾಗದಂತೆ ಎಚ್ಚರಿಕೆ ವಹಿಸಲು ಅನುವಾಗುವಂತೆ ಸೂಕ್ತ, ವಿವರವಾದ ಮಾರ್ಗಸೂಚಿಯನ್ನು ಆಯಾ ಇಲಾಖೆಗಳು ಹೊರಡಿಸಬೇಕು ಎಂದು ಸಚಿವ ಸಂಪುಟ ನಿರ್ಣಯಿಸಿದೆ ಎಂದು ಅವರು ತಿಳಿಸಿದರು.

ನೂತನ ವಿಧೇಯಕ ಸಾಧ್ಯತೆ?: ಸರಕಾರಿ ಜಾಗಗಳಲ್ಲಿ ಖಾಸಗಿ ಸಂಘ, ಸಂಸ್ಥೆಗಳ ಚಟುವಟಿಕೆಗಳನ್ನು ನಿಯಂತ್ರಿಸುವ ಸಂಬಂಧ 'ಸರಕಾರಿ ಆವರಣ ಮತ್ತು ಆಸ್ತಿಗಳ ಬಳಕೆ ನಿಯಂತ್ರಣ ಮಸೂದೆ-2025' ಮಂಡಿಸಲು ಸರಕಾರ ಚಿಂತನೆ ನಡೆಸಿದೆ. ಈ ಸಂಬಂಧ ಕಾನೂನು ಇಲಾಖೆಯು ಕರಡು ಸಿದ್ಧಗೊಳಿಸಿದೆ ಎಂದು ತಿಳಿದು ಬಂದಿದೆ.

ಸರಕಾರ ಆದೇಶ ಉಲ್ಲಂಘಿಸಿ ಯಾರಾದರೂ ಚಟುವಟಿಕೆಗಳನ್ನು ನಡೆಸಿದರೆ ಅಂತಹ ಸಂಘ, ಸಂಸ್ಥೆಗಳಿಗೆ ದಂಡ ಹಾಗೂ ಜೈಲು ಶಿಕ್ಷೆ ವಿಧಿಸುವ ಅವಕಾಶವನ್ನು ಕಲ್ಪಿಸಿದೆ ಎಂದು ತಿಳಿದು ಬಂದಿದೆ. ಮೊದಲ ಬಾರಿ ನಿಯಮ ಉಲ್ಲಂಘನೆ ಮಾಡಿದರೆ ಎರಡು ವರ್ಷ ಜೈಲು ಶಿಕ್ಷೆ ಹಾಗೂ 50 ಸಾವಿರ ರೂ.ದಂಡ, ಪುನರಾವರ್ತಿತ ಉಲ್ಲಂಘನೆಗಳಿಗೆ ಮೂರು ವರ್ಷದವರೆಗೆ ಜೈಲು ಶಿಕ್ಷೆ ಹಾಗೂ 1 ಲಕ್ಷ ರೂ.ದಂಡ ವಿಧಿಸಲು ಮಸೂದೆಯಲ್ಲಿ ಅವಕಾಶ ಕಲ್ಪಿಸಲಾಗಿದೆ ಎನ್ನಲಾಗಿದೆ.

## ಸಾಮಾಜಿಕ- ಶೈಕ್ಷಣಿಕ ಸಮೀಕ್ಷೆ

### ಗಣತಿದಾರರಿಗೆ ಮಾಹಿತಿ ನೀಡಿದ ಮುಖ್ಯಮಂತ್ರಿ



ಬೆಂಗಳೂರು, : 'ನಮ್ಮ ಸರಕಾರವು ರಾಜ್ಯ ಹಿಂದುಳಿದ ವರ್ಗಗಳ ಶಾಶ್ವತ ಆಯೋಗದ ಮೂಲಕ ನಡೆಸುತ್ತಿರುವ 'ಸಾಮಾಜಿಕ ಹಾಗೂ ಶೈಕ್ಷಣಿಕ ಸಮೀಕ್ಷೆ'ಗಾಗಿ ನನ್ನ ಮನೆಗೆ ಭೇಟಿ ನೀಡಿದ ಸಮೀಕ್ಷಾ ಸಿಬ್ಬಂದಿಗೆ ಮಾಹಿತಿ ನೀಡಿ, ನನ್ನ ಕರ್ತವ್ಯವನ್ನು ಯಶಸ್ವಿಯಾಗಿ ಪೂರೈಸಿದೆ' ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದ್ದಾರೆ.

ಗುರುವಾರ ಈ ಕುರಿತು ಸಾಮಾಜಿಕ ಜಾಲತಾಣ ಎಕ್ಸ್ ನಲ್ಲಿ ಪೋಸ್ಟ್ ಹಾಕಿರುವ ಅವರು, 'ಅಸಮಾನತೆ, ಬಡತನವನ್ನು ನಿವಾರಣೆ ಮಾಡಿ ಸಮಸಮಾಜ ನಿರ್ಮಾಣ ಮಾಡುವ ಉದ್ದೇಶದೊಂದಿಗೆ ನಮ್ಮ ಸರಕಾರವು ಸಾಮಾಜಿಕ, ಶೈಕ್ಷಣಿಕ ಸಮೀಕ್ಷೆಯನ್ನು ಕೈಗೊಂಡಿದೆ. ಪ್ರತಿಯೊಬ್ಬರೂ ಈ ಸಮೀಕ್ಷೆಯಲ್ಲಿ ತಪ್ಪದೇ ಪಾಲ್ಗೊಂಡು, ತಮ್ಮ ಮಾಹಿತಿಯನ್ನು ಪ್ರಾಮಾಣಿಕವಾಗಿ ನೀಡಬೇಕು. ಆಗ ಮಾತ್ರ ಸಮಾಜದ ವಾಸ್ತವ ಸ್ಥಿತಿಗತಿಯ ಬಗೆಗೆ ನಿಖರ ಮಾಹಿತಿ ದೊರೆತು, ಆರ್ಥಿಕ, ಸಾಮಾಜಿಕ ಹಾಗೂ ಶೈಕ್ಷಣಿಕವಾಗಿ ಹಿಂದುಳಿದ ಜನರನ್ನು ಗುರುತಿಸಿ, ಅವರ ಪ್ರಗತಿಗೆ ಕಲ್ಯಾಣ ಕಾರ್ಯಕ್ರಮಗಳನ್ನು ರೂಪಿಸಲು ಸಾಧ್ಯ' ಎಂದು ಉಲ್ಲೇಖಿಸಿದ್ದಾರೆ.

'ಇದು ಯಾವುದೇ ಒಂದು ಜಾತಿಗೆ ಸೀಮಿತವಾದ ಸಮೀಕ್ಷೆಯಲ್ಲ, ರಾಜ್ಯದ ಪ್ರತಿಯೊಬ್ಬರ ಜೀವನದ ಮೇಲೆ ಬೆಳಕು ಚೆಲ್ಲುವ ಒಂದು ವೈಜ್ಞಾನಿಕ ಪ್ರಯತ್ನ. ಸಮೀಕ್ಷೆಯಲ್ಲಿ ಮಾಹಿತಿ ನೀಡುವುದರಿಂದ ನಿಮ್ಮ ವೈಯಕ್ತಿಕ ಮಾಹಿತಿ ದುರ್ಬಳಕೆ ಖಂಡಿತಾ ಆಗದು. ಚಿಂತೆ ಬಿಟ್ಟು, ಧೈರ್ಯವಾಗಿ ಸಿಬ್ಬಂದಿಗಳ ಜೊತೆ ಮಾಹಿತಿ ಹಂಚಿಕೊಳ್ಳಿ' ಎಂದು ಸಿದ್ದರಾಮಯ್ಯ ಇದೇ ವೇಳೆ ಮನವಿ ಮಾಡಿದ್ದಾರೆ.

ಗಣತಿದಾರರಿಗೆ ವಿವರ ನೀಡಿದ ಸಿಎಂ: ಇಲ್ಲಿನ ಕಾವೇರಿ ನಿವಾಸದಲ್ಲಿ ಸಾಮಾಜಿಕ ಮತ್ತು ಶೈಕ್ಷಣಿಕ ಸಮೀಕ್ಷೆಗೆ ಆಗಮಿಸಿದ್ದ ಗಣತಿದಾರರಿಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು 45 ನಿಮಿಷಕ್ಕೂ ಹೆಚ್ಚು ಕಾಲ ಸಮಾಧಾನದಿಂದ ಉತ್ತರಿಸಿದರು. ಗಣತಿದಾರರು ಕೇಳಿದ ಎಲ್ಲ ಪ್ರಶ್ನೆಗಳಿಗೂ ಮುಖ್ಯಮಂತ್ರಿ ಸಿದ್ದರಾಮಯ್ಯ ಉತ್ತರಿಸಿ ಸಂಪೂರ್ಣ ಮಾಹಿತಿ ನೀಡಿದರು.

ನಮ್ಮ ಸರ್ಕಾರವು ಹಿಂದುಳಿದ ವರ್ಗಗಳ ಆಯೋಗದ ಮೂಲಕ ನಡೆಸುತ್ತಿರುವ ಸಾಮಾಜಿಕ ಹಾಗೂ ಶೈಕ್ಷಣಿಕ ಸಮೀಕ್ಷೆಗಾಗಿ ನನ್ನ ಮನೆಗೆ ಭೇಟಿನೀಡಿದ ಸಿಬ್ಬಂದಿಗಳಿಗೆ ಮಾಹಿತಿ ನೀಡಿ, ನನ್ನ ಕರ್ತವ್ಯವನ್ನು ಯಶಸ್ವಿಯಾಗಿ ಪೂರೈಸಿದೆ.

*****

## ಮುಂದಿನ 7 ದಿನ ಕರ್ನಾಟಕದಲ್ಲಿ ಭಾರೀ ಮಳೆ: ಮುನ್ಸೂಚನೆ

ಬೆಂಗಳೂರು: ಕರ್ನಾಟಕದಾದ್ಯಂತ ಮಳೆ ಆರ್ಭಟ ಮುಂದುವರೆಯಲಿದೆ. ಇಂದಿನಿಂದ ಮುಂದಿನ 7 ದಿನ ಅಂದರೆ ಅ. 22ರವರೆಗೆ ಗುಡುಗು ಸಹಿತ ಭಾರೀ ಮಳೆಯಾಗಲಿದೆ ಎಂದು ಭಾರತೀಯ ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ. ಮುಂದಿನ 24 ಗಂಟೆಗಳಲ್ಲಿ ಬೆಂಗಳೂರು ಸುತ್ತಮುತ್ತ ಸಾಮಾನ್ಯವಾಗಿ ಮೋಡ ಕವಿದ ವಾತಾವರಣವಿದ್ದು, ಹಗುರದಿಂದ ಕುಡಿದ ಗುಡುಗು ಸಹಿತ ಸಾಧಾರಣ ಮಳೆಯಾಗುವ ಸಾಧ್ಯತೆ ಇದೆ.

ಚಾಮರಾಜನಗರ, ಕೋಲಾರ, ಹಾಸನ, ಮೈಸೂರು, ಬೆಂಗಳೂರು, ಬೆಂಗಳೂರು ಗ್ರಾಮಾಂತರ, ಚ್ಚಕಕಬಳಾಣಟಿಜಜಜಿಟಿಜಜಪುರ, ಚಿಕ್ಕಮಗಳೂರು, ಸಿ.ಬಿ.ಪುರ, ಮಂಡ್ಯ, ತುಮಕೂರು, ಬಳ್ಳಾರಿ, ದಾವಣಗೆರೆ, ಚಿತ್ರದುರ್ಗ, ಶಿವಮೊಗ್ಗ ಮತ್ತು ಹಾವೇರಿ ಮತ್ತು ರಾಮನಗರ ಜಿಲ್ಲೆಗಳಲ್ಲಿ ಅಲ್ಲಲ್ಲಿ ಹಗುರದಿಂದ ಸಾಧಾರಣ ಮಳೆಯಾಗುವ ಸಾಧ್ಯತೆಯಿದೆ.

ದಕ್ಷಿಣ ಒಳನಾಡು ಜಿಲ್ಲೆಗಳಲ್ಲಿ ಗುಡುಗು ಸಹಿತ ಜೋರಾದ ಗಾಳಿಯೊಂದಿಗೆ ಚದುರದಿಂದ ವ್ಯಾಪಕವಾಗಿ ಹಗುರದಿಂದ ಸಾಧಾರಣ ಮಳೆ ಹಾಗೂ ಅಲ್ಲಲ್ಲಿ ಭಾರೀ ಮಳೆ ಆಗಲಿದೆ.

ಕರಾವಳಿ, ಮಲೆನಾಡು ಮತ್ತು ಉತ್ತರ ಒಳನಾಡು ಜಿಲ್ಲೆಗಳಲ್ಲಿ ಅಲ್ಲಲ್ಲಿ ಚದುರಿದಂತೆ ಸಾಧಾರಣ ಮಳೆಯಾಗುವ ಸಾಧ್ಯತೆಯಿದೆ.

ಅದೇ ರೀತಿಯಾಗಿ ದಕ್ಷಿಣ ಕನ್ನಡ, ಉಡುಪಿ ಮತ್ತು ಉತ್ತರ ಕನ್ನಡ ಜಿಲ್ಲೆಗಳಲ್ಲಿ ಒಂದು ಅಥವಾ ಎರಡು ಸ್ಥಳಗಳಲ್ಲಿ ಗುಡುಗು ಸಹಿತ ಮಳೆಯಾಗುವ ಸಾಧ್ಯತೆ ಇದೆ.

ಉತ್ತರ ಒಳನಾಡು ಜಿಲ್ಲೆಗಳಾದ ಬೆಳಗಾವಿ, ಧಾರವಾಡ, ಗದಗ, ಹಾವೇರಿ, ಬಾಗಲಕೋಟೆ, ಬೀದರ್, ಕಲಬುರಗಿ, ಕೊಪ್ಪಳ, ರಾಯಚೂರು, ವಿಜಯಪುರ, ಯಾದಗಿರಿಯಲ್ಲಿ ಗುಡುಗು ಸಹಿತ ಹಗುರದಿಂದ ಕೂಡಿದ ಸಾಧಾರಣ ಮಳೆ ಆಗುವ ಸಾಧ್ಯತೆ ಇದೆ.

## ರೈತರಲ್ಲಿ ಬೆಳೆ ವಿಮೆ ಕುರಿತು ಅರಿವು ಮೂಡಿಸಿ : ಪಿ ಸಿ ಗದ್ದಿಗೌಡರ



ಬಾಗಲಕೋಟೆ : : ಬೆಳೆ ಹಾನಿ ಅಪಾಯ ತಪ್ಪಿಸಲು ರೈತರಲ್ಲಿ ಬೆಳೆ ವಿಮೆ ಬಗ್ಗೆ ಹೆಚ್ಚಿನ ಅರಿವು ಮೂಡಿಸುವ ಕಾರ್ಯ ಮಾಡಬೇಕು ಎಂದು ಸಂಸದ ಪಿ ಸಿ ಗದ್ದಿಗೌಡರ ಸೂಚಿಸಿದರು.

ಜಿಲ್ಲಾ ಪಂಚಾಯತ್ ನೂತನ ಸಭಾಂಗಣದಲ್ಲಿ ಗುರುವಾರದಂದು ಜರುಗಿದ 2025-26 ನೇ ಸಾಲಿನ ಎರಡನೇ ತ್ರೈಮಾಸಿಕ ದಿಶಾ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು ಜಿಲ್ಲೆಯಲ್ಲಿ ಈ ಬಾರಿ ಮೊದಲಿಗಿಂತ ಅಧಿಕ ಪ್ರಮಾಣದಲ್ಲಿ ಈರುಳ್ಳಿ, ದಾಳಿಂಬೆ ಬೆಳೆಯಲಾಗಿದ್ದು, ರೈತರು ಮೊದಲೇ ಬೆಳೆ ವಿಮೆ ಮಾಡಿಸಿಕೊಂಡಿದ್ದಲ್ಲಿ, ಬೆಳೆ ಹಾನಿಯಂತಹ ಅಪಾಯವನ್ನ ಸಮರ್ಥವಾಗಿ ಎದುರಿಸಬಹುದಾಗಿದೆ ಎಂದರು.

ಬಾಗಲಕೋಟೆ - ಕುಡಚಿ ರೈಲು ಮಾರ್ಗ ಕಾಮಗಾರಿ ಸ್ಥಿತಿಗತಿ ಪರಿಶೀಲಿಸಿ, ಕೇಂದ್ರದಲ್ಲಿ ಇದಕ್ಕೆ ಸಂಬಂಧಿಸಿದಂತೆ ಅನುದಾನ ಮತ್ತು ಸಂಪನ್ಮೂಲಕ್ಕೆ ಕೊರತೆ ಇರುವದಿಲ್ಲ, ಆದರೆ ಭೂ ಮಾಲೀಕರ ಕುಟುಂಬ ವಾಜ್ಯ ಮತ್ತು ಇತರೇ ಕೇಸ್ ವಿಚಾರದಿಂದ ಈಗಾಗಲೇ ಯೋಜನೆಯು ವಿಳಂಬವಾಗಿದೆ. ಸ್ಥಳಿಯ ಸಮಸ್ಯೆಗಳನ್ನ ಬೇಗ ಪರಿಹರಿಸಿಕೊಳ್ಳುವಂತೆ ಅವರು ಜಿಲ್ಲಾಡಳಿತ ಮತ್ತು ರೈಲ್ವೆ ಅಧಿಕಾರಿಗಳಿಗೆ ಸೂಚನೆ ನೀಡಿದರು.


ಜಲಜೀವನ ಮೀಶನ್ ಯೋಜನೆಯಡಿಯಲ್ಲಿ ಪೂರ್ಣಗೊಳಿಸಿರುವಂತಹ 608 ಕಾಮಗಾರಿಗಳಲ್ಲಿ ಯಾವುದಾದರೂ ಒಂದರ ಪೈಕಿ ದೂರು ಬಂದರೂ ಕೂಡ ತಕ್ಷಣ ಪರಿಶೀಲಿಸುವ ಕಾರ್ಯವಾಗಬೇಕು. ಪ್ರಧಾನಮಂತ್ರಿ ಆವಾಸ್ ಯೋಜನೆಗಳ ಮೊತ್ತವನ್ನ ಹೆಚ್ಚಳಗೊಳಿಸುವಂತೆ ಸರ್ಕಾರಕ್ಕೆ ಮನವಿ ಮಾಡಲಾಗುವುದು. ಎರಡನೇ ಹಂತದಲ್ಲಿರುವ ಪ್ರಧಾನ ಮಂತ್ರಿ ಆವಾಸ್ ಯೋಜನೆ ಫಲಾನುಭವಿಗಳ ಅಂಕಿ ಸಂಖ್ಯೆಗಳ ಕುರಿತು ಮಾಹಿತಿ ನೀಡುವಂತೆ ತಿಳಿಸಿದರು.

ಜಿಲ್ಲೆಯಲ್ಲಿ ಪೋಕ್ಸೋ ಪ್ರಕರಣಗಳ ನಿಯಂತ್ರಣಕ್ಕೆ ಸೂಕ್ತ ಜಾಗೃತಿಯು ಅಗತ್ಯವಾಗಿದೆ. ಪ್ರಕರಣಗಳಲ್ಲಿ ಶಿಕ್ಷೆಗೊಳಗಾದವರ ಮತ್ತು ದಂಡದ ಮೊತ್ತದ ಕುರಿತು ಪ್ರಚಾರ ನೀಡಿದಲ್ಲಿ, ಭಯದಿಂದ ಪ್ರಕರಣಗಳ ಸಂಖ್ಯೆ ಕಡಿಮೆಯಾಗುತ್ತವೆ. ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆಯೊಂದಿಗೆ ಸಂಬಂಧಿಸಿದ ಇಲಾಖೆಗಳು ಜಂಟಿಯಾಗಿ ಪ್ರಮುಖವಾಗಿ ಗ್ರಾಮೀಣ ಪ್ರದೇಶಗಳಲ್ಲಿ ಕಾನೂನಿನ ಕುರಿತು ಅರಿವು ಮೂಡಿಸುವ ಕೆಲಸ ಮಾಡಬೇಕು ಎಂದರು.

ಕಾರ್ಮಿಕ ಇಲಾಖೆಯ ವಿವಿಧ ಯೋಜನೆಗಳಿಗೆ ಸಾಕಷ್ಟು ಜನರು ನೊಂದಣಿಯಾಗಿದ್ದು, ನಿಜವಾದ ಕಾರ್ಮಿಕರನ್ನ ಗುರುತಿಸಿ, ಅರ್ಹ ಫಲಾನುಭವಿಗಳಿಗೆ ಸೌಲಭ್ಯ ನೀಡುವ ಕೆಲಸ ಅಧಿಕಾರಿಗಳಿಂದ ಆಗಬೇಕಿದೆ ಎಂದರು. ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರದ ಪ್ಯಾಕೆಜ್ 03 ಮತ್ತು 04ರ ಕಾಮಗಾರಿಯ ಪ್ರಗತಿ ಮತ್ತು ಸಮಸ್ಯೆಗಳ ಕುರಿತು ಚರ್ಚಿಸಲಾಯಿತು.

ಸಭೆಯಲ್ಲಿ ರಾಜ್ಯಸಭಾ ಸದಸ್ಯ ನಾರಾಯಣಸಾ ಕೆ. ಭಾಂಡಗೆ, ಜಿಲ್ಲಾಧಿಕಾರಿ ಸಂಗಪ್ಪ, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಶಶಿಧರ ಕುರೇರ್ ಸೇರಿದಂತೆ ಇನ್ನಿತರರು ಉಪಸ್ಥಿತರಿದ್ದರು.

## ಜನನ ಮರಣ ನೊಂದಣಿ ಕಾರ್ಯದಲ್ಲಿ ವಿಳಂಬವಾಗಬಾರದು : ಜಿಲ್ಲಾಧಿಕಾರಿ



ಕಾರವಾರ, ಜಿಲ್ಲೆಯಲ್ಲಿ ಸಂಭವಿಸುವ ಜನನ ಮತ್ತು ಮರಣದ ಕುರಿತು ನೊಂದಣಿಯನ್ನು ಕಡ್ಡಾಯವಾಗಿ 21 ದಿಗಳ ಒಳಗೆ ನೊಂದಣಿ ಮಾಡಬೇಕು, ವಿಳಂಬವಾಗಿ ನೊಂದಣಿಯಾಗದಂತೆ ಸಂಬಂದಪಟ್ಟ ಅಧಿಕಾರಿಗಳು ಎಚ್ಚರವಹಿಸುವಂತೆ ಜಿಲ್ಲಾಧಿಕರಿ ಕೆ.ಲಕ್ಷ್ಮೀಪ್ರಿಯ ಸೂಚಿಸಿದರು.

ಅವರು ಬುಧವಾರ ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ನಡೆದ ಜಿಲ್ಲಾ ಮಟ್ಟದ ಜನನ ಮರಣ ನೊಂದಣಿ ಸಮನ್ವಯ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ಎಲ್ಲಾ ತಾಲೂಕುಗಳು ಮತ್ತು ನಗರಸ್ಥಳೀಯ ಸಂಸ್ಥೆಗಳ ವ್ಯಾಪ್ತಿಯಲ್ಲಿ ಘಟಿಸುವ ಜನನ ಮತ್ತು ಮರಣ ಘಟನೆಗಳನ್ನು ನಿಗಧಿತ 21 ದಿನಗಳ ಅವಧಿಯೊಳಗೆ ಶೇ.100 ರಷ್ಟು ನೊಂದಣಿ ಮಾಡಬೇಕು,ಈ ನಿಗಧಿತ ಅವಧಿಯ ಕುರಿತಂತೆ ಸಾರ್ವಜನಿಕರಲ್ಲಿ ವ್ಯಾಪಕ ಅರಿವು ಮೂಡಿಸಲು ಕ್ರಮ ಕೈಗೊಳ್ಳಬೇಕು. ಮರಣ ಕಾರಣದ ಪ್ರಮಾಣಪತ್ರಗಳನ್ನು ಕಡ್ಡಾಯವಾಗಿ ನೀಡುವ ಕುರಿತಂತೆ ಆರೋಗ್ಯ ಇಲಾಖೆಯ ಮೂಲಕ ಜಿಲ್ಲೆಯಲ್ಲಿನ ಎಲ್ಲಾ ಆಸ್ಪತ್ರೆಗಳಿಗೆ ನಿರ್ದೇಶನ ನೀಡಬೇಕು ಹಾಗೂ ಜಿಲ್ಲೆಯ ಎಲ್ಲಾ ತಾಲೂಕುಗಳಲ್ಲಿ ತಹಸೀಲ್ದಾರ್‌ಗಳ ಅಧ್ಯಕ್ಷತೆಯಲ್ಲಿ ತಾಲೂಕುಮಟ್ಟದ ಸಮನ್ವಯ ಸಮಿತಿ ಸಭೆಗಳನ್ನು ತಪ್ಪದೇ ನಡೆಸಬೇಕು ಎಂದರು.

ಜಿಲ್ಲೆಯಲ್ಲಿ ಪ್ರಸಕ್ತ ಕ್ಯಾಲೆಂಡರ್ ವರ್ಷದಲ್ಲಿ ಇದುವರೆಗೆ 6494 ಗಂಡು ಮತ್ತು 6049 ಹೆಣ್ಣು ಮಗುವಿನ ಜನನವಾಗಿದ್ದು, 4771 ಪುರುಷರು ಮತ್ತು 3681 ಮಹಿಳೆಯರು ವಿವಿಧ ಕಾರಣಗಳಿಂದ ಮರಣ ಹೊಂದಿದ್ದಾರೆ. ಜನನ ಮರಣ ಪ್ರಮಾಣಪತ್ರಗಳನ್ನು ಕಡ್ಡಾಯವಾಗಿ ಡಿಜಿಟಲ್ ಸಹಿಯೊಂದಿಗೆ ವಿತರಿಸುವಂತೆ ಸೂಚಿಸಿದ ಅವರು ಡಿಜಿಟಲ್ ಸಿಗ್ನೇಚರ್ ಕಾರ್ಡ್‌ಗಳ ಅವಧಿ ಮೀರುವ ಮೊದಲೇ ಅವುಗಳನ್ನು ನವೀಕರಿಸಿಕೊಂಡು ನಿಗಧಿತ ಅವಧಿಯಲ್ಲಿ ಪ್ರಮಾಣಪತ್ರಗಳನ್ನು ವಿತರಿಸಬೇಕು ಎಂದರು.

ಜನನ ಮರಣದ ನೊಂದಣಿ ಸಮಯದಲ್ಲಿ ದಿನಾಂಕಗಳು ತಪ್ಪಾಗಿ ನಮೂದಾಗದೇ ಇರುವ ಕುರಿತ ಎಚ್ಚರಿಕೆ ವಹಿಸಬೇಕು, ತಾಲೂಕು ಮಟ್ಟದಲ್ಲಿ ಕಾರ್ಯನಿರ್ವಹಿಸುತ್ತಿರುವ ಎಲ್ಲಾ ಸಂರಕ್ಷಣಾಧಿಕಾರಿಗಳು, ನೊಂದಣಾಧಿಕಾರಿಗಳು, ಉಪ ನೊಂದಣಾಧಿಕಾರಿಗಳು, ಖಾಸಗಿ ಆಸ್ಪತ್ರೆಯ ವೈದ್ಯಾಧಿಕಾರಿಗಳು ಹಾಗೂ ಆಪರೇಟರ್‌ಗಳಿಗೆ ತರಬೇತಿಯನ್ನು ನೀಡುವಂತೆ ಸೂಚಿಸಿದರು.


ಜನನ ಮರಣದ ನೊಂದಣಿಯ ದಾಖಲೆಗಳನ್ನು ಶಾಶ್ವತವಾಗಿ ಕಾಯ್ದಿರಿಸುವ ಕುರಿತಂತೆ ಅವುಗಳನ್ನು ಸ್ಕ್ಯಾನಿಂಗ್ ಮತ್ತು ಡಿಜಿಟಲೈಶನ್ ಮಾಡುವ ಕುರಿತಂತೆ ಕ್ರಮ ಕೈಗೊಳ್ಳುವಂತೆ ಜಿಲ್ಲಾ ಸಂಖ್ಯಾ ಸಂಗ್ರಹಣಾಧಿಕಾರಿಗೆ ಸೂಚಿಸಿದರು.

ಸಭೆಯಲ್ಲಿ ಉಪ ವಿಭಾಗಾಧಿಕಾರಿ ಶ್ರವಣ ಕುಮಾರ್, ಜಿಲ್ಲಾ ಸಂಖ್ಯಾ ಸಂಗ್ರಹಣಾಧಿಕಾರಿ ಸೋಮಶೇಖರ್ ಮೇಸ್ತಾ, ಕ್ರಿಮ್ಸ್ ನ ಡೀನ್ ಡಾ.ಪೂರ್ಣಿಮಾ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ.ನೀರಜ್, ನಗರಾಭಿವೃದ್ಧಿ ಕೋಶದ ಯೋಜನಾ ನಿರ್ದೇಶಕ ಜಹೀರ್ ಅಬ್ಬಾಸ್, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಉಪ ನಿರ್ದೇಶಕ ಕೃಷ್ಣಪ್ಪ ಮತ್ತಿತರರು ಉಪಸ್ಥಿತರಿದ್ದರು.

## ಬೆಂಗಳೂರು : 14 ಲಕ್ಷ ಮೌಲ್ಯದ ನಕಲಿ ಸಿಗರೇಟ್‌ಗಳ ಜಪ್ತಿ

ಬೆಂಗಳೂರು,ಅ. : ಹೊರ ರಾಜ್ಯ ಹಾಗೂ ಹೊರ ದೇಶಗಳಿಂದ ನಕಲಿ ಸಿಗರೇಟ್‌ಗಳನ್ನು ತರಿಸಿಕೊಂಡು ಪ್ರತಿಷ್ಠಿತ ಕಂಪನಿಯ ಹೆಸರಿನಲ್ಲಿ ಮಾರಾಟ ಮಾಡುತ್ತಿದ್ದ ಇಬ್ಬರು ವಂಚಕರನ್ನು ಮಲ್ಲೇಶ್ವರಂ ಠಾಣೆ ಪೊಲೀಸರು ಬಂಧಿಸಿ ರೂ. 14 ಲಕ್ಷ ಮೌಲ್ಯದ 5,950 ನಕಲಿ ಸಿಗರೇಟ್ ಪ್ಯಾಕ್‌ಗಳನ್ನು ವಶಪಡಿಸಿಕೊಂಡಿದ್ದಾರೆ.

ಐಟಿಸಿ ಕಂಪನಿಯ ಹೆಸರಿನಲ್ಲಿ ನಕಲಿ ಸಿಗರೇಟ್‌ಗಳ ತಯಾರಿಕೆ, ವಿತರಣೆ ಮತ್ತು ಮಾರಾಟದಲ್ಲಿ ಕೆಲವರು ಹಾಗೂ ಕೆಲವು ಸಂಸ್ಥೆಗಳು ತೊಡಗಿರುವ ಬಗ್ಗೆ ಐಪಿಆರ್ ಸರ್ವೀಸಸ್ ಕಂಪನಿಯ ಡೆಪ್ಯೂಟಿ ಮ್ಯಾನೇಜರ್ ಪೊಲೀಸರಿಗೆ ದೂರು ನೀಡಿದ್ದರು. ಪ್ರಕರಣ ದಾಖಲಿಸಿಕೊಂಡು ತನಿಖೆ ಕೈಗೊಂಡ ಪೊಲೀಸರು ವಿವಿಧ ಆಯಾಮಗಳಲ್ಲಿ



ಮಾಹಿತಿಗಳನ್ನು ಕಲೆ ಹಾಕಿ ಖಚಿತ ಮಾಹಿತಿ ಮೇರೆಗೆ ಬೆಂಗಳೂರು ಕೆಂಪೇಗೌಡ ಇಂಟರ್‌ನ್ಯಾಷನಲ್ ಏರ್‌ಪೋರ್ಟ್ ಬಳಿ ಇಬ್ಬರನ್ನು ವಶಕ್ಕೆ ಪಡೆದು ವಿಚಾರಣೆಗೆ ಒಳಪಡಿಸಿದಾಗ ಪ್ರತಿಷ್ಠಿತ ಐಟಿಸಿ ಕಂಪನಿಯ ಹೆಸರಿನಲ್ಲಿ ಅಸಲಿ ಸಿಗರೇಟ್‌ಗಳೆಂದು ಸಾರ್ವಜನಿಕರಿಗೆ ಮಾರಾಟ ಮಾಡುತ್ತಿರುವುದು ಗೊತ್ತಾಗಿದೆ.

ಈ ಇಬ್ಬರನ್ನು ಹೆಚ್ಚಿನ ವಿಚಾರಣೆಗೆ ಒಳಪಡಿಸಿ ಅವರ ಬಳಿ ನಕಲಿ ಗೋಲ್ಡ ಪ್ಯಾಕ್ ಕಿಂಗ್ಸ 205 ಬಂಡಲ್‌ಗಳಲ್ಲಿ ಒಟ್ಟು 4100 ಸಿಗರೇಟ್ ಪ್ಯಾಕ್‌ಗಳು ಹಾಗೂ ನಕಲಿ ಮಾರ್ಲ್‌ಬೋರೋ ಗೋಲ್ಡ ಅಡ್ವಾನ್ಸನ ಒಟ್ಟು 185 ಬಂಡಲ್‌ಗಳು.ಪ್ರತಿ ಬಂಡಲ್‌ನಲ್ಲಿ 10 ಸಣ್ಣ ಸಣ್ಣ ಪ್ಯಾಕ್‌ಗಳಿರುವುದು ಕಂಡು ಬಂದಿದೆ.

ಒಟ್ಟು 1850 ನಕಲಿ ಸಿಗರೇಟ್‌ಗಳನ್ನು ವಶಪಡಿಸಿಕೊಳ್ಳಲಾಗಿದ್ದು, ಅವುಗಳ ಮೌಲ್ಯ 14 ಲಕ್ಷ ರೂ.ಗಳೆಂದು ಅಂದಾಜಿಸಲಾಗಿದೆ. ಈ ಕಾರ್ಯಾಚರಣೆಯನ್ನು ಇನ್‌ಸಪೆಕ್ಟರ್ ಜಗದೀಶ್ ಹಾಗೂ ಸಿಬ್ಬಂದಿ ತಂಡ ಕೈಗೊಂಡು ವಂಚಕರನ್ನು ಪತ್ತೆ ಹಚ್ಚಿ ಮಾಲನ್ನು ವಶಪಡಿಸಿಕೊಳ್ಳುವಲ್ಲಿ ಯಶಸ್ವಿಯಾಗಿದೆ.

## ಯಾರೂ ಹಸಿವಿನಿಂದ ಮಲಗಬಾರದು ಎನ್ನುವುದು ಸರ್ಕಾರದ ಬದ್ಧತೆ

# ಕಾಳಸಂತೆಯಲ್ಲಿ ಪಡಿತರ ಮಾರಾಟ ಕಂಡುಬಂದಲ್ಲಿ ಕಠಿಣ ಕ್ರಮ: ಮುಖ್ಯಮಂತ್ರಿ

ಬೆಂಗಳೂರು: ಯಾರೂ ಹಸಿವಿನಿಂದ ಮಲಗಬಾರದು ಎನ್ನುವುದು ನಮ್ಮ ಸರ್ಕಾರದ ಬದ್ಧತೆಯಾಗಿದ್ದು, ಅದಕ್ಕಾಗಿಯೇ ಅನ್ನಭಾಗ್ಯ ಯೋಜನೆಯನ್ನು ಜಾರಿಗೆ ತರಲಾಗಿದೆ. ಕಾಳಸಂತೆಯಲ್ಲಿ ಪಡಿತರ ಮಾರಾಟ ಕಂಡುಬಂದಲ್ಲಿ ಅಂತಹವರ ವಿರುದ್ಧ ಕಠಿಣ ಕ್ರಮಗಳನ್ನು ಕೈಗೊಳ್ಳಲಾಗುವುದು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಹೇಳಿದರು.

ಆಹಾರ ಮತ್ತು ನಾಗರಿಕ ಸರಬರಾಜು ಇಲಾಖೆ ವತಿಯಿಂದ ವಿಧಾನಸೌಧದ ಬ್ಯಾಂಕ್ವೆಟ್ ಸಭಾಂಗಣದಲ್ಲಿ ಗುರುವಾರದಂದು ಹಮ್ಮಿಕೊಳ್ಳಲಾದ ವಿಶ್ವ ಆಹಾರ ದಿನ - 2025 ರ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಅವರು, ನಮ್ಮ ಕವಿ ಸರ್ವಜ್ಞ ಅವರು ಹೇಳಿರುವಂತೆ "ಅನ್ನ ದೇವರ ಮುಂದೆ ಇನ್ನೂ ದೇವರುಂಟೆ, ಅನ್ನವಿರುವ ತನಕ ಪ್ರಾಣವು, ಜಗದೊಳಗೆ ಅನ್ನವೆ ದೈವ ಎಂದು ಹೇಳಿದ್ದಾರೆ. ಹಾಗೆಯೇ ಕವಿ ಬೇಂದ್ರೆಯವರು ರೈತರನ್ನು ಅನ್ನಬ್ರಹ್ಮ ಎಂದು ಕರೆದಿದ್ದಾರೆ ಎಂದರು.

ಬಹಳ ಜನರಿಗೆ ಅನ್ನದ ಮಹತ್ವವೇ ಗೊತ್ತಿಲ್ಲ, ಈ ಬಗ್ಗೆ ದೇಶದಾದ್ಯಂತ ಹೆಚ್ಚಿನ ಅರಿವು ಮೂಡಿಸಬೇಕು. ಪ್ರತಿನಿತ್ಯ ಜಗತ್ತಿನಲ್ಲಿ 19,700 ಮಂದಿ ಹಸಿವಿನಿಂದ ಸಾವನ್ನಪ್ಪುತ್ತಿದ್ದಾರೆ. ಆದರೆ ಅನ್ನದ ಮಹತ್ವವನ್ನು ಅರಿಯದೇ ಬಹಳಷ್ಟು ಮಂದಿ ಅನ್ನವನ್ನು ವಿನಾಕಾರಣ ವ್ಯರ್ಥ ಮಾಡುತ್ತಿದ್ದಾರೆ. ಬಹಳ ಹಿಂದೆಯೇ ಅನ್ನ ಮತ್ತು ರೈತರ ಬಗ್ಗೆ ವ್ಯಾಖ್ಯಾನ ನಡೆದಿದೆ ಆದ್ದರಿಂದ ಅನ್ನ ವ್ಯರ್ಥ ಮಾಡುವುದು, ಬಿಸಾಡುವುದು ಅನ್ನಬ್ರಹ್ಮನಿಗೆ ಮಾಡುವ ಅವಮಾನ. ನನಗೆ ಹಸಿವಿನ ಸಂಕಟ, ಅನ್ನದ ಮೌಲ್ಯ ಗೊತ್ತಿರುವುದರಿಂದ ಕರ್ನಾಟಕ ರಾಜ್ಯವನ್ನು ಹಸಿವು ಮುಕ್ತ ರಾಜ್ಯವನ್ನಾಗಿ ಮಾಡಲು ರಾಜ್ಯದಲ್ಲಿ ಅನ್ನಭಾಗ್ಯ ಯೋಜನೆ ಜಾರಿಗೆ ತರಲಾಗಿದೆ. ಮೊದಲು 5 ಕೆಜಿ ಅಕ್ಕಿ ನೀಡಲಾಗುತ್ತಿತ್ತು. ಈಗ 10 ಕೆಜಿ ಅಕ್ಕಿ ನೀಡಲಾಗುತ್ತಿದೆ ಎಂದರು.

ಐದು ಕೆಜಿ ಅಕ್ಕಿ ಜೊತೆಗೆ ಉಳಿದ ಐದು ಕೆಜಿ ಬೇಳೆ ಕಾಳು, ಸಕ್ಕರೆ, ಉಪ್ಪು, ಅಡುಗೆ ಎಣ್ಣೆ ಕೊಡಲು ತೀರ್ಮಾನ:

ಇತ್ತೀಚೆಗೆ ಕಾಳಸಂತೆಯಲ್ಲಿ ಅಕ್ಕಿ ಮಾರಾಟವಾಗುವುದು ಕಂಡು ಬಂದಿರುವುದರಿಂದ ಐದು ಕೆಜಿ ಅಕ್ಕಿ ಜೊತೆಗೆ ಉಳಿದ ಐದು ಕೆಜಿ ಬೇಳೆ ಕಾಳು, ಸಕ್ಕರೆ, ಉಪ್ಪು, ಅಡುಗೆ ಎಣ್ಣೆಯಂತಹ ಪೌಷ್ಠಿಕ ಆಹಾರ ಕೊಡಲು ತೀರ್ಮಾನಿಸಲಾಗಿದೆ. ಅನ್ನಭಾಗ್ಯದ ಅಕ್ಕಿಯನ್ನು ಸಂಗ್ರಹಿಸಿ ಕಾಳ ಸಂತೆಯಲ್ಲಿ ಮಾರಾಟ ಮಾಡುವವರ ವಿರುದ್ಧ ಕಠಿಣ ಕ್ರಮ ಕೈಗೊಳ್ಳಲಾಗುವುದು ಎಂದರು. ನಾವು ಒಂದು ಕಾಲದಲ್ಲಿ ಅನ್ನಕ್ಕಾಗಿ ಅಮೆರಿಕದ ಮೇಲೆ ಅವಲಂಬಿತರಾಗಿದ್ದೆವು. ಈಗ ವಿದೇಶಗಳಿಗೆ ರಫ್ತು ಮಾಡುವ ಮಟ್ಟಕ್ಕೆ ಪ್ರಗತಿ ಸಾಧಿಸಿದ್ದೇವೆ. ಇದರ ಜೊತೆಗೆ ಮದುವೆ, ಹೋಟೆಲ್, ಸಮಾರಂಭಗಳಲ್ಲಿ ಊಟ ವ್ಯರ್ಥ ಮಾಡುವ ಪ್ರಮಾಣವೂ ಹೆಚ್ಚಾಗುತ್ತಿರುವುದು ಬೇಸರದ ಸಂಗತಿ. ಜಿಕೆವಿಕೆ ವಿಶ್ವವಿದ್ಯಾಲಯದವರು ಅಧ್ಯಯನ ಮಾಡಿದ್ದಾರೆ. ಬೆಂಗಳೂರು ಒಂದರಲ್ಲೇ ಪ್ರತೀ ವರ್ಷ 943 ಟನ್ ಆಹಾರ ವ್ಯರ್ಥವಾಗುತ್ತಿದೆ. ಹೆಚ್ಚೂ-ಕಡಿಮೆ 360 ಕೋಟಿ ಮೌಲ್ಯದ ಆಹಾರವನ್ನು ವ್ಯರ್ಥ ಮಾಡುತ್ತಿದ್ದೇವೆ. ಅನ್ನದ ಮೇಲೆ ತೋರಿಸುವ ಅಹಂಕಾರ. ಅನ್ನ ವ್ಯರ್ಥ ಮಾಡುವುದು ಪಾಪದ ಕೆಲಸ ಎಂದು ಮಹಾತ್ಮ ಗಾಂಧಿ ಹೇಳಿದ್ದಾರೆ ಎಂದರು.



ಯಾರೂ ಹಸಿವಿನಿಂದ ಮಲಗಬಾರದು ಎನ್ನುವುದು ನಮ್ಮ ಸರ್ಕಾರದ ಬದ್ದತೆ :

ಯಾರೂ ಹಸಿವಿನಿಂದ ಮಲಗಬಾರದು ಎನ್ನುವುದು ಸರ್ಕಾರದ ಕಾಳಜಿ ಮತ್ತು ಬದ್ದತೆಯಾಗಿದೆ. ಹೀಗಾಗಿ ಬಡವರ ಪರವಾಗಿ ಕಾರ್ಯಕ್ರಮಗಳನ್ನು ಜಾರಿಗೆ ತಂದಿದ್ದು ನಮ್ಮ ಸರ್ಕಾರ. 2013ರಲ್ಲಿ ನಮ್ಮ ಪ್ರಧಾನ ಮಂತ್ರಿಗಳಾಗಿದ್ದ ದಿವಂಗತ ಡಾ. ಮನಮೋಹನ್ ಸಿಂಗ್ ಅವರು "ಆಹಾರ ಭದ್ರತೆ ಕಾಯ್ದೆ" ಯನ್ನು ಜಾರಿಗೆ ತಂದರು. ಆಹಾರದ ಬಗ್ಗೆ ಜಾಗ್ರತೆ, ಸಣ್ಣ ರೈತರ ರಕ್ಷಣೆ ಮಾಡುವುದು ನಮ್ಮೆಲ್ಲರ ಸಮಾಜದ ಜವಾಬ್ದಾರಿ ಎಂದು ಮುಖ್ಯಮಂತ್ರಿಗಳು ತಿಳಿಸಿದರು.

ಇದೇ ಸಂದರ್ಭದಲ್ಲಿ "ಅನ್ನ ಸುವಿಧಾ ಯೋಜನೆ" ಯ ಪೋಸ್ಟರ್ ಬಿಡುಗಡೆ ಮಾಡಿದರು.

ಕಾಯಕ್ರಮದಲ್ಲಿ ಗೌರವ ಉಪಸ್ಥಿತಿ ವಹಿಸಿದ್ದ ಉಪಮುಖ್ಯಮಂತ್ರಿ ಡಿ.ಕೆ.ಶಿಕುಮಾರ್ ಅವರು ಮಾತನಾಡಿ, ನಾವು ಪ್ರಕೃತಿ ನಿಯಮದಲ್ಲಿ ಬದುಕುತ್ತಿದ್ದೇವೆ. ಗಾಳಿ, ಸೂರ್ಯ, ನೀರಿನ ಜೊತೆಗೆ ಹೊಟ್ಟೆಗೆ ಆಹಾರ ಇಲ್ಲದಿದ್ದರೆ ನಿಲ್ಲಲು ಶಕ್ತಿ ಇರುವುದಿಲ್ಲ. ಆಹಾರ ಬಹಳ ಮುಖ್ಯ. ಹಸಿದವರಿಗೆ ಮಾತ್ರ ಗೊತ್ತು ಅದರ ಬೆಲೆ. ಇಂದು ನಾವೆಲ್ಲಾ ಮಾಡುವುದು ಗೇಣು ಹೊಟ್ಟೆಗಾಗಿ, ಗೇಣು ಬಟ್ಟೆಗಾಗಿ ಎಂದರು. ನಮ್ಮ ಸರ್ಕಾರವು ಜನರಿಗೆ ಪೌಷ್ಠಿಕಾಂಶ ಒದಗಿಸುವ ಉದ್ದೇಶದಿಂದ ವಿವಿಧ ಬಗೆಯ ಆಹಾರ ಪದಾರ್ಥಗಳುಳ್ಳ ಇಂದಿರಾ ಆಹಾರ ಕಿಟ್‌ನ್ನು ನೀಡಲು ತೀರ್ಮಾನಿಸಿದೆ. ಸರ್ಕಾರವು ಜಾರಿಗೊಳಿಸಿರುವ ಗ್ಯಾರಂಟಿ ಯೋಜನೆಗಳು ಮಹಿಳೆಯರಿಗೆ ಶಕ್ತಿ ನೀಡಿದೆ. ಅಲ್ಲದೆ ಆರ್ಥಿಕವಾಗಿ ಸದೃಢರಾಗುತ್ತಿದ್ದಾರೆ. ಅನೇಕ ಬಡವರಿಗೆ ಇದರಿಂದ ಸಹಾಯವಾಗುತ್ತಿದೆ. ಇಡೀ ದೇಶಕ್ಕೆ ಕರ್ನಾಟಕದ ಯೋಜನೆಗಳು ಮಾದರಿಯಾಗಿವೆ. ಕಾನೂನಿನ ಚೌಕಟ್ಟಿನಡಿಯಲ್ಲಿಯೆ ನಾವು ಕಾರ್ಯಕ್ರಮ ರೂಪಿಸುತ್ತಿದ್ದೇವೆ. ಒಂದು ಹನಿ ನೀರಿಗೆ ನೀಡುವ ಗೌರವವನ್ನು, ಒಂದು ಅಗಳು ಅನ್ನಕ್ಕೂ ನೀಡಬೇಕು ಎಂದರು.

ಪ್ರಾಸ್ತಾವಿಕ ನುಡಿಗಳನ್ನಾಡಿದ ಆಹಾರ, ನಾಗರಿಕ ಸರಬರಾಜು ಹಾಗೂ ಗ್ರಾಹಕ ವ್ಯವಹಾರಗಳು ಮತ್ತು ಕಾನೂನು ಮಾಪನಶಾಸ್ತ್ರ ಸಚಿವರಾದ ಕೆ.ಹೆಚ್. ಮುನಿಯಪ್ಪ ಅವರು, ವಿಶ್ವ ಆಹಾರ ದಿನಾಚರಣೆಯನ್ನು ಪ್ರತಿ ವರ್ಷ ಅಕ್ಟೋಬರ್ 16 ರಂದು ಆಹಾರ ಮತು ಕೃಷಿ ಸಂಸ್ಥೆಯ ಸ್ಥಾಪನೆಯ ನೆನಪಿಗಾಗಿ ಆಚರಿಸಲಾಗುತ್ತಿದೆ. ಈ ವರ್ಷ "ಉತ್ತಮ ಆಹಾರಗಳು ಮತ್ತು ಉತ್ತಮ ಭವಿಷ್ಯಕ್ಕಾಗಿ ಕೈ ಜೋಡಿಸಿ" ಎಂಬ ಧ್ಯೇಯದೊಂದಿಗೆ ಆಚರಿಸಲಾಗುತ್ತಿದೆ ಎಂದರು. ಭಾರತ ದೇಶದಲ್ಲಿಯೂ ಸಹ ಬಡವರಿಗೆ ಆಹಾರ ಭದ್ರತೆಯನ್ನು ಖಾತರಿಪಡಿಸಲು 2013 ರಲ್ಲಿ ಕೇಂದ್ರ ಯುಪಿಎ ಸರ್ಕಾರವು ಆಹಾರ ಭದ್ರತಾ ಕಾಯಿದೆಯನ್ನು ಜಾರಿಗೆ ತಂದಿತು. ಅದೇ ರೀತಿ ಕರ್ನಾಟಕದಲ್ಲಿ 2013ರಲ್ಲಿ ಅನ್ನಭಾಗ್ಯ ಯೋಜನೆಯನ್ನು ಜಾರಿಗೆ ತರಲಾಯಿತು. ಜುಲೈ 2023 ರಿಂದ ಅನ್ನಭಾಗ್ಯ ಯೋಜನೆಯಡಿ ಪ್ರತಿ ಮಾಹೆ 10 ಕೆಜಿ ಆಹಾರ ಧಾನ್ಯಗಳನ್ನು ಉಚಿತವಾಗಿ ನೀಡುತ್ತಿದ್ದು, ಈವರೆಗೆ ನಮ್ಮ ಸರ್ಕಾರವು 15134.88 ಕೋಟಿಗಳಷ್ಟು ವೆಚ್ಚ ಮಾಡಲಾಗಿದ್ದು, ಹಸಿವು ಮುಕ್ತ ಕರ್ನಾಟಕ ನಿರ್ಮಾಣ ಮಾಡಿ ಪೌಷ್ಠಿಕಾಂಶ ಆಹಾರ ಒದಗಿಸುವುದೇ ಇದರ ಉದ್ದೇಶವಾಗಿದೆ. ಅನ್ನ ಪೋಲಾಗುವುದನ್ನು ತಡೆಯಲು ಕಾನೂನು ರೂಪಿಸಬೇಕು ಎಂದರು.

ಕಾರ್ಯಕ್ರಮದಲ್ಲಿ ವಸತಿ, ವಕ್ಫ್, ಅಲ್ಪಸಂಖ್ಯಾತರ ಕಲ್ಯಾ ಇಲಾಖೆ ಸಚಿವ ಬಿ. ಝಡ್. ಜಮೀರ್ ಅಹಮದ್‌ಖಾನ್, ವಿಧಾನ ಪರಿಷತ್ ಸದಸ್ಯ ರವಿ, ಮುಖ್ಯಮಂತ್ರಿಗಳ ರಾಜಕೀಯ ಕಾರ್ಯದರ್ಶಿ ನಜೀರ್ ಅಹ್ಮದ್, ಶಾಸಕರಾದ ರವಿ, ಬಸವಣಗೌಡ ಬಾದರ್ಲಿ, ಶ್ರೀನಿವಾಸ್, ಆರ್ಯ ವೈಶ್ಯ ನಿಗಮದ ಅಧ್ಯಕ್ಷರಾದ ರಾಮಪ್ರಸಾದ್, ಆಹಾರ ಇಲಾಖೆಯ ಆಯುಕ್ತರಾದ ವಾಸಿ ರೆಡ್ಡಿ ಜೋತ್ಸನಾ, ವ್ಯವಸ್ಥಾಪಕ ನಿರ್ದೇಶಕರಾದ ಜಗದೀಶ್, ಕಾನೂನು ಮಾಪನ ಶಾಸ್ತ್ರ ಇಲಾಖೆಯ ನಿಯಂತ್ರಕ ಬಾಬು, ಮತ್ತಿತರ ಗಣ್ಯರು ಹಾಗೂ ಆಹಾರ ನಾಗರಿಕ ಸರಬರಾಜು ಮತ್ತು ಗ್ರಾಹಕ ವ್ಯವಹಾರಗಳ ಇಲಾಖೆಯ ಹಿರಿಯ ಅಧಿಕಾರಿಗಳು ಉಪಸ್ಥಿತರಿದ್ದರು.

# ಯಾರು ಭಾರತವನ್ನು ಪ್ರೀತಿಸುತ್ತಾರೋ ಅವರು ಆರ್.ಎಸ್.ಎಸ್ ಪ್ರೀತಿಸುತ್ತಾರೆ” ಪೋಸ್ಟರ್ ಅಭಿಯಾನ



**ಬೆಳಗಾವಿ.** ಬಿಜೆಪಿ ವತಿಯಿಂದ ಬೆಳಗಾವಿ ಗ್ರಾಮೀಣ ಮತಕ್ಷೇತ್ರದ ಬಾಳೇಕುಂದ್ರಿ ಕೆ.ಎಚ್ ಗ್ರಾಮದಲ್ಲಿ “ಯಾರು ಭಾರತವನ್ನು ಪ್ರೀತಿಸುತ್ತಾರೋ ಅವರು ಆರ್. ಎಸ್.ಎಸ್ ಪ್ರೀತಿಸುತ್ತಾರೆ” ಎಂಬ ಅಭಿಯಾನದ ಅಂಗವಾಗಿ ಈ ಪೋಸ್ಟರ್ ಬಿಡುಗಡೆ ಮಾಡಿ ಗ್ರಾಮದ ಮನೆ ಮನೆಗೆ ತೆರಳಿ ಗೋಡೆಗೆ ಪೋಸ್ಟರ್ ಅಂಟಿಸುವ ಮೂಲಕ ಬಿಜೆಪಿ ಜಿಲ್ಲಾಧ್ಯಕ್ಷ ಸುಭಾಷ್ ಪಾಟೀಲ ಹಾಗೂ ಮಾಜಿ ಶಾಸಕರಾದ ಸಂಜಯ್ ಪಾಟೀಲ್ ಅವರು ಅಭಿಯಾನಕ್ಕೆ ಚಾಲನೆ ನೀಡಿ ಮಾತನಾಡಿ ಆರೆಸ್ಎಸ್ ನಿಷೇಧ ಮಾಡುವ ಹೇಳಿಕೆ ನೀಡಿರುವ ಸಚಿವ ಪ್ರಿಯಾಂಕ್ ಖರ್ಗೆ ಅವರ ಹೇಳಿಕೆ ಬಾಲಿಷತನದಿಂದ ಕೂಡಿದೆ. ಈ ದೇಶದಲ್ಲಿ ಸ್ವತಂತ್ರವಾಗಿ ಮಾತನಾಡುವ, ಸಂಘ-ಸಂಸ್ಥೆಗಳ ಚಟುವಟಿಕೆಗಳನ್ನು ನಡೆಸುವ, ಸಂಘ-ಸಂಸ್ಥೆ ಸ್ಥಾಪಿಸುವ ಅಧಿಕಾರವನ್ನು ಭಾರತೀಯ ಸಂವಿಧಾನ ಕರುಣಿಸಿದೆ. ಆದರೆ ಜವಾಬ್ದಾರಿಯುತ ಸ್ಥಾನದಲ್ಲಿರುವ ಸಚಿವ ಪ್ರಿಯಾಂಕ್ ಖರ್ಗೆ ಸಂಘವನ್ನು ನಿಷೇಧ ಮಾಡಿ ಎಂದು ಹೇಳುವ ಮೂಲಕ ಭಾರತೀಯ ಸಂವಿಧಾನ ನೀಡಿರುವ ಹಕ್ಕುಗಳನ್ನೇ ಕಸಿದುಕೊಳ್ಳಲು ಹೊರಟಿರುವುದು ಸರಿಯಲ್ಲ ಎಂದು ಆಕ್ರೋಶ ವ್ಯಕ್ತಪಡಿಸಿದರು.

ಸುಖದ ಸುಪ್ಪತ್ತಿಗೆಯಲ್ಲಿ ಬೆಳೆದಿರುವ ಪ್ರಿಯಾಂಕ್ ಅವರಿಗೆ ಜನರ ನೋವು ಗೊತ್ತಿಲ್ಲ. ಹೀಗಾಗಿಯೇ ಈ ಬೇಜವಾಬ್ದಾರಿ ಹೇಳಿಕೆ ನೀಡುತ್ತಿದ್ದಾರೆ. ಸಂಘ ಪರಿವಾರದ ಜನಪರ ಕಾರ್ಯವನ್ನು, ದೇಶಭಕ್ತಿಯ ಅದಮ್ಯ ಭಾವನೆಯನ್ನು ಅವರು ಮೊದಲು ತಿಳಿದುಕೊಳ್ಳಲಿ. ಈ ರೀತಿ ಒಂದು ಜನಪರ, ದೇಶಭಕ್ತಿಯ ಸಂಘಟನೆಯ ಮೇಲೆ ಆರೋಪ ಮಾಡಿರುವ ಪ್ರಿಯಾಂಕ್ ಖರ್ಗೆ ಅವರನ್ನು ಕೂಡಲೇ ಸಚಿವ ಸಂಪುಟದಿಂದ ವಜಾಗೊಳಿಸಬೇಕು ಎಂದು ಒತ್ತಾಯಿಸಿದರು. ಈ ಸಂದರ್ಭದಲ್ಲಿ ಗ್ರಾಮೀಣ ಮಂಡಲ ಅಧ್ಯಕ್ಷ ಯುವರಾಜ್ ಜಾಧವ್, ಮುಖಂಡರಾದ ಮುರುಘೇಂದ್ರಗೌಡ ಪಾಟೀಲ, ವಿಠ್ಠಲ ಕರಿಗಾರ ಹಾಗೂ ಪ್ರಮುಖರು ಉಪಸ್ಥಿತರಿದ್ದರು.

***

# ದತ್ತಿ ಉಪನ್ಯಾಸ ಚನ್ನಬಸವಣ್ಣನವರು ಯುವಕರ ಹೆಗ್ಗುರುತು-ಡಿ ಎನ್ ಅಕ್ಕಿ



**ಇಂಡಿ:** ಪ್ರತಿಯೊಬ್ಬರೂ ಜ್ಞಾನಿಗಳಾಗಬೇಕೇ ಹೊರತು ಅಜ್ಞಾನಿಗಳಾಗಬಾರದು. ಚನ್ನಬಸವಣ್ಣನವರ ವಚನಗಳನ್ನು ಓದುತ್ತಿದ್ದರೆ ಉತ್ತಮ ಸಂಸ್ಕಾರಗಳು ಒಡಮೂಡಿ,ಉತ್ತಮ ವ್ಯಕ್ತಿತ್ವ ಅರಳಲು ಸಾಧ್ಯವಾಗುತ್ತದೆ ಎಂದು ಹಿರಿಯ ಸಂಶೋಧಕ ಡಿ ಎನ್ ಅಕ್ಕಿ ಹೇಳಿದರು.

ಗುರುವಾರದಂದು ಪಟ್ಟಣದ ಸರಕಾರಿ ಕೈಗಾರಿಕಾ ತರಬೇತಿ ಸಂಸ್ಥೆಯಲ್ಲಿ ತಾಲೂಕ ಶರಣ ಸಾಹಿತ್ಯ ಪರಿಷತ್ತಿನ ವತಿಯಿಂದ ಕದಳಿ ವೇದಿಕೆ ಯುವ ಘಟಕದ ಸಹಯೋಗದೊಂದಿಗೆ ಹಮ್ಮಿಕೊಂಡ ದತ್ತಿ ಉಪನ್ಯಾಸ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಸದಾಚಾರ, ಸದ್ವಿಚಾರಗಳನ್ನು ತಿಳಿಯುವುದು. ಸತ್ಯವನ್ನೇ ನುಡಿಯಬೇಕು, ಹಿಂಸೆಯನ್ನು ಮಾಡಬಾರದು, ಪರೋಪಕಾರ ಬುದ್ಧಿ ಇರಬೇಕು, ಕಾಯಕ ಶ್ರದ್ಧೆ ಬೆಳೆಸಿಕೊಳ್ಳಬೇಕು, ಯಾರಿಗೂ ಕೇಡು ಬಯಸಬಾರದು ಎಂಬ ಚನ್ನಬಸವಣ್ಣನವರ ಜೀವನ ಸಂದೇಶ ಇಂದಿನ ಯುವಪೀಳಿಗೆಗೆ ಪ್ರೇರಕವಾಗಿದೆ ಎಂದು ಹೇಳಿದರು.

ಶಿಕ್ಷಕ ಸಾಹಿತಿ ಸಂತೋಷ ಬಂಡೆ ಉಪನ್ಯಾಸ ನೀಡುತ್ತಾ ಮಾತನಾಡಿ, ಅರಿವು ಮತ್ತು ಆಚಾರದ ಮೂಲಕ ಶ್ರೇಷ್ಠ ವ್ಯಕ್ತಿತ್ವವನ್ನು ಹೊಂದಿದ್ದ ಚನ್ನಬಸವಣ್ಣನವರ ಬದುಕು ಬಹು ವಿಶಿಷ್ಟವಾದುದು. ಎಲ್ಲ ವರ್ಗದ, ಎಲ್ಲ ವಯಸ್ಸಿನ ಜನರಿಗೆ ಚನ್ನಬಸವಣ್ಣನವರ ಬದುಕು ಮತ್ತು ವಚನಗಳು ಹೆಗ್ಗುರುತು ಆಗಬೇಕಿದೆ ಎಂದು ಹೇಳಿದರು.

ಅರಿವು, ಆಚಾರ, ಅನುಭಾವಗಳ ಸಂಗಮವಾಗಿದ್ದರೆ ಹಿರಿಯತನ ತನ್ನಿಂದ ತಾನೇ ಬರುವುದು ಎನ್ನುವ ಚನ್ನಬಸವಣ್ಣನವರು ವ್ಯಕ್ತಿ ಸಂಸ್ಕಾರವಂತನಾಗಿ ತನ್ನಲ್ಲಿರುವ ಅವಗುಣಗಳನ್ನು ಕಳೆದುಕೊಂಡು ಸಾತ್ವಿಕ ಬದುಕು ಸಾಗಿಸಬೇಕೆನ್ನುವದು ಅವರ ಸಂದೇಶವಾಗಿದೆ ಎಂದು ಹೇಳಿದರು.

ಹಿರಿಯ ಉಪನ್ಯಾಸಕ ಜಿ ಎಸ್ ಭಾಗೇಳ್ಳಿ ಅಧ್ಯಕ್ಷತೆ ವಹಿಸಿ ಮಾತನಾಡಿದರು. ತಾಲೂಕ ಶರಣ ಸಾಹಿತ್ಯ ಪರಿಷತ್ತಿನ ಅಧ್ಯಕ್ಷ ಬಿ ಎಸ್ ಪಾಟೀಲ ಆಶಯ ನುಡಿಗಳನ್ನಾಡಿದರು. ಇಂಡಿ ಲಾಯನ್ಸ್ ಕ್ಲಬ್ ಅಧ್ಯಕ್ಷ ಐ ಬಿ ಸುರಪುರ, ಉಪಾಧ್ಯಕ್ಷ ಎಚ್ ಎಸ್ ಎಳೆಗಾಂವ, ಕದಳಿ ವೇದಿಕೆ ಉಪಾಧ್ಯಕ್ಷೆ ರಾಜಶ್ರೀ ಕ್ಷತ್ರಿ, ಡಾ ಸತೀಶ ಈಶ್ವರಗೊಂಡ, ಡಾ ಪ್ರಭು ಭೈರಜಿ, ಎಸ್ ಎಫ್ ಭೈರಜಿ ಮಾತನಾಡಿದರು. ಇದೇ ಸಂದರ್ಭದಲ್ಲಿ ರೇಷ್ಮೆ ಇಲಾಖೆಯ ನಿವೃತ್ತ ನೌಕರ ಪರುತಯ್ಯ ಮಠಪತಿ ಅವರನ್ನು ಸನ್ಮಾನಿಸಲಾಯಿತು. ಸಂಸ್ಥೆಯ ಉಪನ್ಯಾಸಕ ರಮೇಶ ಮೇತ್ರಿ ನಿರೂಪಿಸಿದರು.

ಬಿ ಕೆ ಶಿವೂರ ಸ್ವಾಗತಿಸಿ, ವಂದಿಸಿದರು. ಸಂತೋಷ ಹಟ್ಟಿ, ಭಾಗ್ಯಜ್ಯೋತಿ ಬಿರಾದಾರ ಸೇರಿದಂತೆ ವಿದ್ಯಾರ್ಥಿಗಳು ಭಾಗವಹಿಸಿದ್ದರು.

# ಪತ್ತಿನ ಸಂಘಗಳ ಸಹಕಾರ ಚಳವಳಿಗೆ ಹೊಸ ಚೈತನ್ಯ; ಡಾ ಸಂಜಯ ಹೊಸಮಠ



ಗೋಕಾಕ; ಮಹಾರಾಷ್ಟ್ರ ರಾಜ್ಯ ಸಹಕಾರ ಪತ್ತಿನ ಸಂಘಗಳ ಮಹಾಮಂಡಳ ಹಾಗೂ ಕರ್ನಾಟಕ ರಾಜ್ಯ ಸಹಕಾರ ಪತ್ತಿನ ಸಂಘಗಳ ಮಹಾಮಂಡಳದ ಸಹಕಾರ ಚಳವಳಿ ಹೊಸ ಚೈತನ್ಯ ತುಂಬುತ್ತಿದೆ ಎಂದು ಗೋಕಾಕ ನಗರದ ವ್ಯದ್ಯರಾದ ಡಾ ಸಂಜಯ ಪಂಚಾಕ್ಷರಿ ಹೊಸಮಠ ಅವರು ಅಭಿಪ್ರಾಯ ವ್ಯಕ್ತಪಡೆಸಿದರು.

ಮಹಾರಾಷ್ಟ್ರ ರಾಜ್ಯ ಸಹಕಾರ ಪತ್ತಿನ ಸಂಘಗಳ ಮಹಾಮಂಡಳ ಹಾಗೂ ಕರ್ನಾಟಕ ರಾಜ್ಯ ಸಹಕಾರ ಪತ್ತಿನ ಸಂಘಗಳ ಮಹಾಮಂಡಳದ ಸಂಯುಕ್ತ ಆಶ್ರಯದಲ್ಲಿ ಕಾರವಾರ ಜಿಲ್ಲೆಯ ಕುಮಟಾದಲ್ಲಿರುವ ಡೆನಿಸನ್ಸ್ ಬೀಚ್ ರೆಸಾರ್ಟ್‌ನಲ್ಲಿ ಜರುಗಿದ ಅಂತರರಾಜ್ಯ ಸಹಕಾರ ಸಭೆ ಹಾಗೂ ದೀಪಸ್ತಂಭ ಪುರಸ್ಕಾರ ಸಮಾರಂಭದ ಮುಖ್ಯ ಅತಿಥಿಗಳ ಪರವಾಗಿ ಮಾತನಾಡಿದ ಡಾ. ಸಂಜಯ್ ಹೊಸಮಠ ಅವರು, ಕರ್ನಾಟಕ ರಾಜ್ಯದ ಪತ್ತಿನ ಸಂಘಗಳ ಕಾರ್ಯಪದ್ಧತಿ, ಸವಾಲುಗಳು ಹಾಗೂ ಮಹಾಮಂಡಳವು ಪತ್ತಿನ ಸಂಘಗಳ ಮಾತೃ ಸಂಸ್ಥೆಯಾಗಿ ನಿಭಾಯಿಸುತ್ತಿರುವ ಪ್ರಮುಖ ಪಾತ್ರವನ್ನು ವಿವರಿಸಿದರು.

“ಪತ್ತಿನ ಸಂಘಗಳಲ್ಲಿ ಎದುರಾಗುತ್ತಿರುವ ಆದಾಯ ತೆರಿಗೆ ಮತ್ತು ನಿಯಂತ್ರಣ ಸಂಬಂಧಿತ ಸಮಸ್ಯೆಗಳನ್ನು ಪರಿಹರಿಸಲು ಮಹಾಮಂಡಳವು ಸರ್ಕಾರದೊಂದಿಗೆ ನಿರಂತರವಾಗಿ ಸಂವಾದ ನಡೆಸುತ್ತಿದೆ.” ಎಂದು ಹೇಳಿದರು.

ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಕರ್ನಾಟಕ ರಾಜ್ಯ ಸಹಕಾರ ಪತ್ತಿನ ಸಂಘಗಳ ಮಹಾಮಂಡಳದ ಅಧ್ಯಕ್ಷರಾದ, “ಕರ್ನಾಟಕ ರಾಜ್ಯ ಪತ್ತಿನ ಮಹಾಮಂಡಳ ಕಳೆದ ಹಲವು ವರ್ಷಗಳಿಂದ ಪತ್ತಿನ ಸಂಘಗಳ ಶಕ್ತೀಕರಣಕ್ಕೆ ಮುಂಚೂಣಿಯಲ್ಲಿದೆ. ಸಹಕಾರ ಚಳವಳಿಯನ್ನು ಗ್ರಾಮಮಟ್ಟದಿಂದ ರಾಜ್ಯಮಟ್ಟಕ್ಕೆ ತಲುಪಿಸುವ ಕಾರ್ಯದಲ್ಲಿ ಎಲ್ಲರ ಸಹಭಾಗಿತ್ವ ಅಗತ್ಯ.” ಎಂದು ಹೇಳಿದರು. ಅವರು ಮುಂದಿನ ಅಂತರರಾಜ್ಯ ಸಹಕಾರ ಸಭೆಯನ್ನು ಮೈಸೂರು ನಗರದಲ್ಲಿ ಆಯೋಜಿಸಲು ಆಹ್ವಾನ ನೀಡಿದರು.

ಜಂಟಿ ನಿಬಂಧಕ ಕಲ್ಲಪ್ಪ ಓಬನ್ನೋಗೋಳ ಅವರು ಕರ್ನಾಟಕ ರಾಜ್ಯದ ಸಹಕಾರ ಕಾಯ್ದೆಯ ವಿಶ್ಲೇಷಣೆ ಮಾಡಿ ಅದರ ನವೀಕರಣದ ಅಗತ್ಯವನ್ನು ಚರ್ಚಿಸಿದರು.

ಸಭೆಯ ಅಧ್ಯಕ್ಷತೆಯನ್ನು ಮಹಾರಾಷ್ಟ್ರ ರಾಜ್ಯ ಪತ್ತಿನ ಸಹಕಾರ ಮಹಾಮಂಡಳದ ಅಧ್ಯಕ್ಷರಾದ ಕಾಕಾಸಾಹೇಬ್ ಕೊಯ್ತೆ ಅವರು ವಹಿಸಿದ್ದರು.

ಸಂಚಾಲಕರಾಗಿ ಡಾ. ಸಂಜಯ್ ಪಂಚಾಕ್ಷರಿ ಹೊಸಮಠ, ಮಹಾಮಂಡಳದ ಉಪಾಧ್ಯಕ್ಷ ಧರಿಯಪ್ಪ ಅಲ್ಲೂಗ್ಗರ್, ನಿರ್ದೇಶಕರು ತಮ್ಮಣ್ಣ ಬಾಲಪ್ಪ ಕೆಂಚರೆಡ್ಡಿ, ಉಮೇಶ್ ಬಾಳಿ, ಮಹಾರಾಷ್ಟ್ರ ಫೆಡರೇಶನ್‌ನ ಸಂಚಾಲಕರು ಶಶಿಕಾಂತ್ ರಾಜೋಬಾ, ಭಾಸ್ಕರ್ ಬಂಗಾರ, ಬೆಳಗಾವಿ ಪ್ರಾಂತೀಯ ಸಹಕಾರಿ ಜಂಟಿ ನಿಬಂಧಕ ಕಲ್ಲಪ್ಪ ಓಬನ್ನೋಗೋಳ, ಹಾಗೂ ಮಹಾರಾಷ್ಟ್ರದ ಸಹಕಾರಿ ಅಪ್ಪರ್ ನಿಬಂಧಕ ವಾಡೆಕರ್ ವೇದಿಕೆ ಮೇಲೆ ಉಪಸ್ಥಿತರಿದ್ದರು.

# ನಗುವನ್ನು ಹಣ ಕೊಟ್ಟು ಕೊಂಡುಕೊಳ್ಳಲಾಗದು: ಡಾ. ಎಚ್. ಬಿ. ರಾಜಶೇಖರ



ಬೆಳಗಾವಿ – ಎಲ್ಲ ವಸ್ತುಗಳು ಮಾರಾಟಕ್ಕೆ ಸಿಗಬಹುದು ಆದರೆ ನಗುವನ್ನು ಹಣ ಕೊಟ್ಟು ಕೊಂಡುಕೊಳ್ಳಲಾಗದು. ನಗುವೆಂಬುದು ಹೃದಯದ ಭಾಷೆ. ಹಸನ್ಮುಖಿ ಸದಾಸುಖಿ ಎಂದು ಹಿರಿಯರು ಹೇಳುತ್ತಾರೆ ಆದರಂತೆ ಎಲ್ಲರೂ ನಗುತ್ತಲಿರೋಣವೆಂದು ನಾಡಹಬ್ಬ ಉತ್ಸವ ಸಮಿತಿ ಅಧ್ಯಕ್ಷ, ಖ್ಯಾತ ವೈದ್ಯರಾದ ಡಾ. ಎಚ್. ಬಿ. ರಾಜಶೇಖರ ಇಂದಿಲ್ಲಿ ಹೇಳಿದರು.

ನಗರದ ಹಾಸ್ಯಕೂಟ ಮತ್ತು ಕನ್ನಡ ಸಾಹಿತ್ಯ ಭವನ ವಿಶ್ವಸ್ತ ಮಂಡಳಿ ಸಂಯುಕ್ತ ಆಶ್ರಯದಲ್ಲಿ ಇದೇ ದಿ. 11 ರಂದು ನಗರದ ಚೆನ್ನಮ್ಮ ವೃತ್ತದ ಬಳಿಯಿರುವ ಕನ್ನಡ ಸಾಹಿತ್ಯ ಭವನದಲ್ಲಿ “ರಂಗಭೂಮಿಯ ರಸಪ್ರಸಂಗಗಳು” ಎಂಬ ಹಾಸ್ಯ ಕಾರ್ಯಕ್ರಮವನ್ನು ಹಮ್ಮಿಕೊಂಡಿದ್ದರು ಅಧ್ಯಕ್ಷತೆಯನ್ನು ವಹಿಸಿದ್ದ ಡಾ. ರಾಜಶೇಖರ ಅವರು ಮೇಲಿನಂತೆ ಅಭಿಪ್ರಾಯಪಟ್ಟರು.

ಮುಂದೆ ಮಾತನಾಡುತ್ತ ಅವರು ಮನುಷ್ಯ ಮಾತ್ರ ನಕ್ಕು ಆನಂದಿಸಬಲ್ಲ. ಪ್ರಾಣಿಗಳಿಂದ ಇದು ಸಾಧ್ಯವಿಲ್ಲ. ಹಾಸ್ಯಪ್ರಜ್ಞೆ ಇಲ್ಲದ ಮನುಷ್ಯನ ಬುದ್ಧಿಯು ಸರಿಯಾಗಿ ಬೆಳವಣಿಗೆಯಾಗಲಾರದೆಂಬುದನ್ನು ವಿಜ್ಞಾನವೇ ಪ್ರಯೋಗದಿಂದ ಸಿದ್ಧ ಪಡಿಸಿದೆ ಎಂದು ಹೇಳಿದರು.

ಪ್ರಾಯೋಜಕತ್ವವನ್ನುವಹಿಸಿಕೊಂಡಿದ್ದರಂಗಸಂಪದದ ಅಧ್ಯಕ್ಷ ಡಾ. ಅರವಿಂದ ಕುಲಕರ್ಣಿಯವರು ಮಾತನಾಡುತ್ತ ನನಗೆ ರಂಗಭೂಮಿಯಲ್ಲಿ ಸುಮಾರು ನಾಲ್ವತ್ತು ವರ್ಷಗಳ ಅನುಭವವಿದೆ.ಹಲವಾರು ನಾಟಕಗಳನ್ನು ಮಾಡಿದ್ದೇನೆ. ರಂಗಭೂಮಿಯಲ್ಲಿಯ ರಸಪ್ರಸಂಗಗಳನ್ನಿಂದು ನಗುತ್ತ ನಗಿಸುತ್ತ ನಿಮ್ಮ ಮುಂದೆ ಹಂಚಿಕೊಳ್ಳುತ್ತಿದ್ದೇನೆಯಾದರೂ ಅಂದು ನಾನು ಪಟ್ಟ ಕಷ್ಟ ನೋವು ನನಗೆ ಗೊತ್ತು. ಸಮಯ ಪ್ರಜ್ಞೆಯಿದ್ದ ಕಲಾವಿದ ಮಾತ್ರ ಸಿಲುಕುವ ಸಂಕಷ್ಟದಿಂದ ಪಾರಾಗಿ ಬರಲು ಸಾಧ್ಯವೆಂದು ಎಂದು ಹೇಳಿದ ಅವರು ರಂಗಭೂಮಿ ರಸಪ್ರಸಂಗಗಳನ್ನು ಹಂಚಿಕೊಂಡು ಜನರನ್ನು ನಗೆಗಡಲಲ್ಲಿ ತೇಲಿಸಿದರು.

ರಂಗಭೂಮಿ ರಸಪ್ರಸಂಗಗಳನ್ನು ನಟ ನಿರ್ದೇಶಕ ಶಿರೀಷ ಜೋಶಿ, ರಂಗಭೂಮಿ ಹವ್ಯಾಸಿ ಕಲಾವಿದರಾದ ಶ್ರೀಮತಿ ಪದ್ಮಾ ಕುಲಕರ್ಣಿ, ಶ್ರೀಮತಿ ಪವಿತ್ರಾ ರೇವಣಕರ, ರಾಮಚಂದ್ರ ಭಟ್ಟ, ಚಿದಂಬರ ಮುನವಳ್ಳಿ, ಕಲಾವಿದ ಭೀಮಾ ಗಜಪತಿ ಹಂಚಿಕೊಂಡರು. ಹಾಸ್ಯಕೂಟ ಸಂಚಾಲಕರಾದ ಗುಂಡೇನಟ್ಟಿ ಮಧುಕರ ಪ್ರಾಸ್ತಾವಿಕ ನುಡಿಗಳನ್ನಾಡಿದರು. ಅರವಿಂದ ಹುನಗುಂದ ನಿರೂಪಿಸಿದರು.

## ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಇಲಾಖೆ 14 ಫಲಾನುಭವಿ ಆಧಾರಿತ ಯೋಜನೆಗಳಿಗೆ ಅರ್ಜಿ ಸಲ್ಲಿಸಲು ಅ.31 ವರೆಗೆ ಅವಧಿ ವಿಸ್ತರಣೆ

ಧಾರವಾಡ ಅ.16: 2025-26 ನೇ ಸಾಲಿನಲ್ಲಿ ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಇಲಾಖೆಯಿಂದ 14 ಫಲಾನುಭವಿ ಆಧಾರಿತ ಯೋಜನೆಗಳಾದ ಪ್ರತಿಭಾವಂತ ಅಂಗವಿಕಲ ವಿದ್ಯಾರ್ಥಿಗಳಿಗೆ ಪ್ರೋತ್ಸಾಹಧನ, ಶಿಶುಪಾಲನಾ ಭತ್ಯೆ, ನಿರುದ್ಯೋಗ ಭತ್ಯೆ, ಸ್ವಯಂ ಉದ್ಯೋಗಕ್ಕಾಗಿ ಆಧಾರ ಯೋಜನೆ, ಗ್ರಾಮೀಣ ಪುನರ್ವಸತಿ ಕಾರ್ಯಕರ್ತರಿಗೆ ಮರಣ ಪರಿಹಾರ ನಿಧಿ, ಪ್ರತಿಭೆ ಯೋಜನೆ, ವೈದ್ಯಕೀಯ ಪರಿಹಾರ ನಿಧಿ ಯೋಜನೆ, ಅಂಧ ವಿದ್ಯಾರ್ಥಿಗಳಿಗೆ ಟಾಕಿಂಗ್ ಲ್ಯಾಪ್‌ಟಾಪ್, ದೈಹಿಕ ವಿಕಲಚೇತನರಿಗೆ ಯಂತ್ರಚಾಲಿತ ದ್ವಿಚಕ್ರ ವಾಹನ ಯೋಜನೆ, ಸಾಧನೆ ಸಲಕರಣೆ, ಶ್ರವಣದೋಷವುಳ್ಳ ವ್ಯಕ್ತಿಗಳಿಗೆ ಸ್ವಯಂ ಉದ್ಯೋಗಕ್ಕಾಗಿ ಹೊಲಿಗೆ ಯಂತ್ರ ಯೋಜನೆ. ದೃಷ್ಟಿದೋಷ ಹೊಂದಿರುವ ವಿಕಲಚೇತನರಿಗೆ ಬ್ರೈಲ್‌ಕಿಟ್ ಯೋಜನೆ, ವಿಕಲಚೇತನ ವ್ಯಕ್ತಿಗಳಿಗೆ ಬ್ಯಾಟರಿ ವ್ಹೀಲ್ ಚೇರ್, ಸಾಧನೆ ಯೋಜನೆಗಳಿಗೆ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿತ್ತು. ವಿಕಲಚೇತನ ಫಲಾನುಭವಿಗಳು ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಲು ಅಕ್ಟೋಬರ್ 15, 2025 ರವರೆಗೆ ನಿಗದಿಪಡಿಸಲಾಗಿತ್ತು. ಆದರೆ ಅರ್ಜಿ ಸಲ್ಲಿಸಲು ಅಕ್ಟೋಬರ್ 31, 2025 ರವರೆಗೆ ಅವಧಿ ವಿಸ್ತರಿಸಲಾಗಿದೆ.

ಹೆಚ್ಚಿನ ಮಾಹಿತಿಗಾಗಿ ತಾಲೂಕಾ ಪಂಚಾಯತಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ವಿವಿದೋದ್ದೇಶ ಪುನರ್ವಸತಿ ಕಾರ್ಯಕರ್ತರು (ಎಂ.ಆರ್.ಡಬ್ಲ್ಯೂ)ಗಳಾದ ಧಾರವಾಡ-ಬಸವರಾಜ ಬೆಳಾರದ (9742757903), ಹುಬ್ಬಳ್ಳಿ- ಮಹಾಂತೇಶ ಕುರ್ತಕೋಟಿ (9164347001, 8073194053), ಕಲಘಟಗಿ-ಕಲಾವತಿ ಹೊಸುರು (6363695794), ನವಲಗುಂದ-ಸರೋಜಾ ಮಾವಿನಕಾಯಿ (9663271200) ಮತ್ತು ಕುಂದಗೋಳ-ಸುಲೋಚನಾ ಇಟಗಿ (8880570833) ಹಾಗೂ ಕಛೇರಿ ದೂರವಾಣಿ ಸಂಖ್ಯೆ:0836-2744474 ಗೆ ಸಂಪರ್ಕಿಸಬಹುದು ಎಂದು ಜಿಲ್ಲಾ ಅಂಗವಿಕಲರ ಕಲ್ಯಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಬೀದಿಬದಿ ವ್ಯಾಪಾರಸ್ಥರಿಂದ ಅರ್ಜಿ ಆಹ್ವಾನ

ಗದಗ ಅ.16 : ಗದಗ-ಬೆಟಗೇರಿ ನಗರಸಭೆ ಬೀದಿ ಬದಿ ವ್ಯಾಪಾರಸ್ಥರಿಗೆ ಸಂಬಂಧಿಸಿದಂತೆ ತಾತ್ಕಾಲಿಕ ಪಟ್ಟಣ ಮಾರಾಟ ಸಮಿತಿ **(Provisional Town Vending committee)** ಯನ್ನು ರಚಿಸಲು ಅವಶ್ಯ ಇರುವದರಿಂದ ಸಮಿತಿಯನ್ನು ರಚನೆಗಾಗಿ ದಿನಾಂಕಃ-17-10-2025 ರಂದು ಬೆಳಿಗ್ಗೆ 10-30 ಗಂಟೆಗೆ ನಗರಸಭೆ ಪದವಿ ಪೂರ್ವ ಕಾಲೇಜನಲ್ಲಿ ಆಯ್ಕೆ ಪ್ರಕ್ರೀಯ ಕಾರ್ಯ ಕೈಗೊಳ್ಳಲಾಗಿದೆ.

ಈ ಸಮಿತಿ ರಚನೆ ಕಾರ್ಯದಲ್ಲಿ ಅರ್ಹ ಇರುವ ಗದಗ-ಬೆಟಗೇರಿ ನಗರಸಭೆ ವ್ಯಾಪ್ತಿಯಲ್ಲಿ ಬರುವ ಎಲ್ಲಾ ಬೀದಿ ಬದಿ ವ್ಯಾಪಾರಸ್ಥರು ಆಧಾರ ಕಾರ್ಡ, ಮತ್ತು ಬೀದಿ ಬದಿ ವ್ಯಾಪಾರಸ್ಥರ ಗುರುತಿನ ಚೀಟಿಯೊಂದಿಗೆ ಹಾಜರಾಗಿ ಸಮಿತಿ ರಚಿಸಲು ಸಹಕರಿಸುವಂತೆ ಈ ಮೂಲಕ ಕೋರಲಾಗಿದೆ. ಹೆಚ್ಚಿನ ಮಾಹಿತಿಗಾಗಿ ಡೇ-ನಲ್ಮ ವಿಭಾಗ ನಗರಸಭೆ ಗದಗ-ಬೆಟಗೇರಿ ಕಾರ್ಯಾಲಯದಲ್ಲಿ ಸಂಪರ್ಕಿಸಲು ಕೋರಿದೆ.

## ಸಾರ್ವಜನಿಕರ ಗಮನಕ್ಕೆ

ಗದಗ : ಗದಗ ಜಿಲ್ಲೆ ಮುಂಡರಗಿ ತಾಲೂಕಿನ 110 ಕೆ.ವ್ಹಿ. ಸಿಂಗಟಾಲುರು ವಿದ್ಯುತ್ ವಿತರಣಾ ಕೇಂದ್ರದಿಂದ ಕೂಡ್ಲಿಗಿ ತಾಲೂಕಿನ 74 ಕೆರೆಗಳಿಗೆ ನೀರುತುಂಬಿಸುವ ಯೋಜನೆಯ 18000 ಕೆವಿಎ ಸ್ಥಾವರಕ್ಕೆ ವಿದ್ಯುತ್ ಸಂಪರ್ಕ ಕಲ್ಪಿಸಲು ವಿದ್ಯುತ್ ಮಾರ್ಗವನ್ನು 5.6 ಕಿ.ಮೀ ದೂರದವರೆಗೆ ನಿರ್ಮಿಸುವ ಕಾಮಗಾರಿ ಪೂರ್ಣಗೊಂಡಿದ್ದು ಈ ವಿದ್ಯುತ್ ಮಾರ್ಗವು ಗದಗ ಜಿಲ್ಲೆ ಮುಂಡರಗಿ ತಾಲೂಕಿನ ಸಿಂಗಟಾಲುರು, ಹಮ್ಮಿಗಿ ಮತ್ತು ವಿಜಯನಗರ ಜಿಲ್ಲೆ ಹೂವಿನ ಹಡಗಲಿ ತಾಲೂಕಿನ ರಾಜವಾಳ ಗ್ರಾಮಗಳ ಮುಖಾಂತರ ಸರಹದ್ದಿನಲ್ಲಿ ಹಾದುಹೋಗುತ್ತದೆ. ಇದನ್ನು ದಿನಾಂಕ 17-10-2025 ರಂದು ಅಥವಾ ತದನಂತರ ಕಾರ್ಯಗತಗೊಳಿಸಲಾಗುವುದು.

ಸಾರ್ವಜನಿಕರು ಈ ವಿದ್ಯುತ್ ಮಾರ್ಗದಿಂತ ದೂರವಿರಬೇಕಾಗಿ ಕೋರಲಾಗಿದೆ, ದನ-ಕರುಗಳನ್ನು ವಿದ್ಯುತ್ ಗೋಪುರಗಳಿಗೆ ಕಟ್ಟುವುದಾಗಲಿ, ಮಾರ್ಗದ ಮೇಲೆ ಹಸಿ ದಂಟು-ತಂತಿಯನ್ನು ಎಸೆಯುವುದಾಗಲಿ ಗೋಪುರಗಳ ಮೇಲೆ ಹತ್ತುವುದಾಗಲಿ ಮಾಡಬಾರದು. ಒಂದು ವೇಳೆ ಮೇಲಿನ ಕಾರಣಗಳಿಂದ ವಿದ್ಯುತ್ ಅಪಘಾತಕ್ಕೆ ಒಳಪಟ್ಟರೆ ಕ.ನೀ.ನಿ.ನಿಯಮಿತವು/ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತ ಜವಾಬ್ದಾರಿಯಲ್ಲ ಎಂದು ಕರ್ನಾಟಕ ನೀರಾವರಿ ನಿಗಮ ನಿಯಮಿತದ ಪ್ರಕಟಣೆ ತಿಳಿಸಿದೆ.

# ಯುವಜನೋತ್ಸವಗಳು ಯುವಕರ ಸೃಜನಶೀಲತೆ ಮತ್ತು ವ್ಯಕ್ತಿತ್ವ ವಿಕಾಸದ ವೇದಿಕೆ: -ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಗುಂಜನ್ ಆರ್ಯ



ಧಾರವಾಡ : ಯುವಕರು ದೇಶದ ಶಕ್ತಿ ಮತ್ತು ಭವಿಷ್ಯ. ಸಮಾಜದ ಪ್ರಗತಿ ಯುವ ಪೀಳಿಗೆಯ ಚಿಂತನೆ ಮತ್ತು ನೈತಿಕತೆಗೆ ಅವಲಂಬಿತವಾಗಿದೆ. ಇಂತಹ ಯುವಜನೋತ್ಸವಗಳು ಯುವಕರಲ್ಲಿ ಸ್ಪರ್ಧಾತ್ಮಕ ಮನೋಭಾವನೆ, ಸೃಜನಶೀಲತೆ ಮತ್ತು ಸಾಮಾಜಿಕ ಹೊಣೆಗಾರಿಕೆಯನ್ನು ಬೆಳೆಸುವ ವೇದಿಕೆಗಳಾಗಿವೆ. ವಿದ್ಯಾಭ್ಯಾಸದ ಜೊತೆಗೆ ಕಲೆ, ಕ್ರೀಡೆ ಹಾಗೂ ಸಾಂಸ್ಕೃತಿಕ ಕ್ಷೇತ್ರಗಳಲ್ಲಿ ತೊಡಗಿಕೊಳ್ಳುವುದರಿಂದ ಉತ್ತಮ ವ್ಯಕ್ತಿತ್ವ ನಿರ್ಮಾಣವಾಗುತ್ತದೆ ಎಂದು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಗುಂಜನ್ ಆರ್ಯ ಅವರು ಹೇಳಿದರು.

ಅವರು ಇಂದು (ಅ.16) ಬೆಳಿಗ್ಗೆ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ ಹಾಗೂ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಸಹಯೋಗದಲ್ಲಿ ನಗರದ ಜೆ.ಎಸ್.ಎಸ್.ಕಾಲೇಜಿನ ಉತ್ಸವ ಕಲಾಕ್ಷೇತ್ರದಲ್ಲಿ ಆಯೋಜಿಸಿದ್ದ ಜಿಲ್ಲಾ ಯುವಜನೋತ್ಸವ ಉದ್ಘಾಟಿಸಿ, ಮಾತನಾಡಿದರು.

ಇಂದಿನ ತಂತ್ರಜ್ಞಾನ ಯುಗದಲ್ಲಿ ಯುವಕರು ತಮ್ಮ ಸಮಯ ಮತ್ತು ಶಕ್ತಿಯನ್ನು ಸಕಾರಾತ್ಮಕ ದಿಕ್ಕಿನಲ್ಲಿ ಬಳಸಿಕೊಳ್ಳಬೇಕು. ಸಾಮಾಜಿಕ ಮಾಧ್ಯಮ, ವಿಜ್ಞಾನ ಮತ್ತು ಹೊಸ ಆವಿಷ್ಕಾರಗಳನ್ನು ಸಮಾಜದ ಹಿತಕ್ಕಾಗಿ ಉಪಯೋಗಿಸಬೇಕು. ಇದರಿಂದ ಯುವಸಮುದಾಯದ ಸಬಲೀಕರಣವಾಗುತ್ತದೆ. ರಾಷ್ಟ್ರ ನಿರ್ಮಾಣದಲ್ಲಿ ಯುವಕರ ಪಾತ್ರ ಅತ್ಯಂತ ಮಹತ್ವದ್ದಾಗಿದೆ ಎಂದು ಅವರು ಹೇಳಿದರು.

ಆರೋಗ್ಯ ಚಟುವಟಿಕೆಗಳನ್ನು ಹೆಚ್ಚಿಸುವಲ್ಲಿ ಕ್ರೀಡಾ ಮನೋಬಾವನೆ ಮಹತ್ವದ ಪಾತ್ರ ವಹಿಸುತ್ತದೆ. ವಿವಿಧ ರೀತಿಯ ಕ್ರೀಡೆಗಳು ನಮ್ಮ ದೈಹಿಕ ಆರೋಗ್ಯದ ಜೊತೆಗೆ ಮಾನಸಿಕ ಆರೋಗ್ಯವನ್ನು ಸದೃಡಗೊಳಿಸುತ್ತದೆ. ದೈಹಿಕ ಆಯಾಸದಿಂದ ಉಂಟಾಗುವ ಸುಖ ನಿದ್ರೆಯು ದೈಹಿಕ ಸೌಂದರ್ಯವನ್ನು ಹೆಚ್ಚಿಸುತ್ತದೆ ಎಂದು ಅವರು ಹೇಳಿದರು.

ಯುವಜನೋತ್ಸವಗಳು ಯುವಕರಲ್ಲಿ ಒಗ್ಗಟ್ಟು, ಬದ್ಧತೆ ಮತ್ತು ಸ್ವಾಭಿಮಾನವನ್ನು ಹೆಚ್ಚಿಸುತ್ತವೆ. ಯುವಕ ಯುವತಿಯರಲ್ಲಿ ಅಡಗಿರುವ ಕ್ರೀಡಾ ಹಾಗೂ ಸಾಂಸ್ಕೃತಿಕ ಪ್ರತಿಭೆಗಳನ್ನು ಸಮಾಜಕ್ಕೆ ಪರಿಚಯಿಸುತ್ತವೆ ಎಂದು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಗುಂಜನ್ ಆರ್ಯ ಅವರು ತಿಳಿಸಿದರು.

ಹುಬ್ಬಳ್ಳಿ ಧಾರವಾಡ ಮಹಾನಗರ ಪಾಲಿಕೆಯ ಮಹಾಪೌರರಾದ ಜ್ಯೋತಿ ಪಾಟೀಲ ಅವರು ಮಾತನಾಡಿ, ಸರ್ಕಾರವು ಯುವಕರ ಬೆಳವಣಿಗೆಗಾಗಿ ವಿವಿಧ ಯೋಜನೆಗಳನ್ನು ರೂಪಿಸಿದೆ. ಅವುಗಳ ಕುರಿತು ಅರಿವು ಮೂಡಿಸುವುದು ಈ ಉತ್ಸವದ ಪ್ರಮುಖ ಉದ್ದೇಶ. ಕಲೆ, ಕ್ರೀಡೆ ಮತ್ತು ಸಂಸ್ಕೃತಿಯ ಚಟುವಟಿಕೆಗಳು ಯುವಕರಲ್ಲಿ ಆತ್ಮವಿಶ್ವಾಸ ಮತ್ತು ನಾಯಕತ್ವ ಗುಣಗಳನ್ನು ಬೆಳೆಸುತ್ತವೆ. ಪ್ರತಿಯೊಬ್ಬ ಯುವಕರು ತಮ್ಮ ಸಾಮರ್ಥ್ಯವನ್ನು ಸಮಾಜದ ಹಿತಕ್ಕಾಗಿ ಬಳಸಿಕೊಳ್ಳಬೇಕು ಎಂದು ಹೇಳಿದರು.

ಗ್ರಾಮೀಣ ಹಾಗೂ ನಗರ ಪ್ರದೇಶದ ಯುವಕರು ತಮ್ಮ ಪ್ರತಿಭೆಯನ್ನು ಗುರುತಿಸಿ ಬೆಳೆಸಿಕೊಳ್ಳಲು ಇಂತಹ ಯುವಜನೋತ್ಸವಗಳು ಉತ್ತಮ ವೇದಿಕೆಯಾಗಿವೆ. ಯುವಕರು ತಮ್ಮೊಳಗಿನ ಶಕ್ತಿಯನ್ನು ಅರಿತುಕೊಂಡು ಅದನ್ನು ಸಮಾಜಮುಖಿ ಕಾರ್ಯಗಳಿಗೆ ವಿನಿಯೋಗಿಸಿದಾಗ ರಾಷ್ಟ್ರದ ಅಭಿವೃದ್ಧಿಗೆ ಪೂರಕವಾದ ಸಬಲೀಕರಣವಾಗುತ್ತದೆ ಎಂದು ಹೇಳಿದರು.

ಕೇವಲ ಓದುವುದು ಮಾತ್ರವಲ್ಲದೆ, ಅದರ ಜೊತೆಗೆ ಕೌಶಲ್ಯಗಳನ್ನು ರೂಡಿಸಿಕೊಳ್ಳುವುದು ಅಷ್ಟೇ ಮುಖ್ಯವಾಗಿದೆ. ಹಾಗೂ ಯಾವುದೇ ಒಂದು ಕೆಲಸ ಮಾಡಬೇಕಾದರೆ ನಿರ್ದಿಷ್ಟವಾದ ಗುರಿ ಇಟ್ಟುಕೊಂಡು ಕೆಲಸ ಮಾಡಿದರೆ ಯಶಸ್ಸು ಸಾಧಿಸಲು ಸಾಧ್ಯವಾಗುತ್ತದೆ ಎಂದು ಹೇಳಿದರು.

ಜಿಲ್ಲಾ ಪಂಚಾಯತ ಉಪ ಕಾರ್ಯದರ್ಶಿ ಮಲ್ಲಿಕಾರ್ಜುನ ತೊದಲಬಾಗಿ ಅವರು ಮಾತನಾಡಿ, ಜೀವನದಲ್ಲಿ ಸೋಲು ಗೆಲುವು ಇದ್ದೇ ಇರುತ್ತವೆ. ಆದರೆ ಆ ಸೋಲುಗಳನ್ನು ಸಹ ಸಕಾರಾತ್ಮಕವಾಗಿ ತೆಗೆದುಕೊಂಡಾಗ ಮಾತ್ರ ಜೀವನದಲ್ಲಿ ಮುಂದೆ ಬರಲು ಸಾಧ್ಯ ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕ ಸದಾನಂದ ಅಮರಾಪೂರ ಅವರು ಸ್ವಾಗತಿಸಿ, ಪ್ರಾಸ್ತಾವಿಕವಾಗಿ ಮಾತನಾಡಿದರು. ಡಾ. ಜಿನ್ನಪ್ಪ ಅವರು ವಂದಿಸಿದರು.

ವೇದಿಕೆಯಲ್ಲಿ ಧಾರವಾಡ ತಾಲೂಕ ಪಂಚಾಯತ ಕಾರ್ಯನಿರ್ವಾಹಕ ಅಧಿಕಾರಿ ಡಾ. ಗಂಗಾಧರ ಕಂದಕೂರ, ಕರ್ನಾಟಕ ವಿಶ್ವವಿದ್ಯಾಲಯ ರಾಷ್ಟ್ರೀಯ ಸೇವಾ ಯೋಜನೆ ಕೋಶದ ಕಾರ್ಯಕ್ರಮ ಸಂಯೋಜಕ ಡಾ. ಎಂ. ಜಿ. ದಳಪತಿ, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಸಹಾಯಕ ನಿರ್ದೇಶಕ ಡಾ. ಎಸ್.ಎಂ ಹಿರೇಮಠ ಅವರು ಉಪಸ್ಥಿತರಿದ್ದರು.

ಕಾರ್ಯಕ್ರಮದಲ್ಲಿ ವಿವಿಧ ಶಾಲಾ ಕಾಲೇಜಿನ ಪ್ರಾಧ್ಯಾಪಕರು, ಶಿಕ್ಷಕರು, ಎನ್.ಎಸ್.ಎಸ್. ಸ್ವಯಂ ಸೇವಕರು, ಯುವಕ ಯುವತಿ ಮಂಡಳಗಳ ಸದಸ್ಯರು, ವಿದ್ಯಾರ್ಥಿಗಳು ಭಾಗವಹಿಸಿದ್ದರು.

****

# ಕರ್ನಾಟಕ ಅಲ್ಪಸಂಖ್ಯಾತರ ಅಭಿವೃದ್ಧಿ ನಿಗಮ: ವಿವಿಧ ಯೋಜನೆಗಳಡಿ ಅರ್ಜಿ ಸಲ್ಲಿಕೆ ಅವಧಿ ವಿಸ್ತರಣೆ

ಕೊಪ್ಪಳ : ಕರ್ನಾಟಕ ಅಲ್ಪಸಂಖ್ಯಾತರ ಅಭಿವೃದ್ಧಿ ನಿಗಮವು 2025-26 ನೇ ಸಾಲಿಗೆ ಮತೀಯ ಅಲ್ಪಸಂಖ್ಯಾತರಾದ ಮುಸ್ಲಿಂ, ಜೈನ್, ಬೌದ್ಧರು, ಸಿಖ್ಖರು ಮತ್ತು ಪಾರ್ಸಿ ಸಮುದಾಯದವರಿಗೆ ವಿವಿಧ ಯೋಜನೆಗಳಡಿ ಸಾಲ ಸೌಲಭ್ಯ ಒದಗಿಸುತ್ತಿದ್ದು, ಅರ್ಹ ಫಲಾನುಭವಿಗಳಿಂದ ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಕೆ ಅವಧಿಯನ್ನು ವಿಸ್ತರಿಸಲಾಗಿದೆ.

ನಿಗಮದಿಂದ ಶ್ರಮಶಕ್ತಿ ಸಾಲ ಯೋಜನೆ, ವೃತ್ತಿ ಪ್ರೋತ್ಸಾಹ ಯೋಜನೆ, ಸ್ವಾವಲಂಬಿ ಸಾರಥಿ ಯೋಜನೆ (ಟ್ಯಾಕ್ಸಿ, ಗೂಡ್ಸ್ ವಾಹನ ಖರೀದಿಗೆ ಸಹಾಯಧನ), ವ್ಯಾಪಾರ, ಉದ್ಯಮಗಳಿಗೆ ನೇರ ಸಾಲ ಯೋಜನೆ, ವಿದೇಶಿ ವ್ಯಾಸಂಗಕ್ಕಾಗಿ ಸಾಲ ಯೋಜನೆ, ಅಲ್ಪಸಂಖ್ಯಾತರ ಸಮುದಾಯದ ಮಹಿಳಾ ಸ್ವ-ಸಹಾಯ ಗುಂಪುಗಳಿಗೆ ಸಹಾಯಧನ ಯೋಜನೆ, ಸಾಂತ್ವನ ಯೋಜನೆ, ರೇಷ್ಮೆ ನೂಲು ಬಿಚ್ಚಾಣಿಕೆ ಉದ್ಯಮಕ್ಕೆ ಪ್ರೋತ್ಸಾಹ ಯೋಜನೆಯಡಿ ಸಾಲ ಸೌಲಭ್ಯ ಒದಗಿಸಲಾಗುತ್ತದೆ. ಈ ಯೋಜನೆಗಳಡಿ ಅರ್ಜಿ ಸಲ್ಲಿಸಲು ಅಕ್ಟೋಬರ್ 16 ಕೊನೆಯ ದಿನವಾಗಿತ್ತು. ಅರ್ಜಿದಾರರ ಅನುಕೂಲಕ್ಕಾಗಿ ಅರ್ಜಿ ಸಲ್ಲಿಕೆ ಅವಧಿಯನ್ನು ಅಕ್ಟೋಬರ್ 21 ರವರೆಗೆ ವಿಸ್ತರಿಸಲಾಗಿದೆ. ಆಸಕ್ತ ಹಾಗೂ ಅರ್ಹ ಫಲಾನುಭವಿಗಳು ವೆಬ್‌ಸೈಟ್: **kmdconline.karnataka.gov.in** ಮೂಲಕ ಆನ್‌ಲೈನ್ ಅರ್ಜಿ ಸಲ್ಲಿಸಬಹುದು.

ಫಲಾನುಭವಿಗಳು ರಾಜ್ಯದಲ್ಲಿ ಕನಿಷ್ಠ 10 ವರ್ಷ ವಾಸವಾಗಿರಬೇಕು. 18 ರಿಂದ 55 ವರ್ಷ ವಯೋಮಿತಿ ಒಳಗಿರಬೇಕು. ಯೋಜನೆಗಳ ಕುರಿತಾದ ಹೆಚ್ಚಿನ ವಿವರ ಹಾಗೂ ಮಾಹಿತಿಗಾಗಿ ಜಿಲ್ಲಾ ವ್ಯವಸ್ಥಾಪಕರ ಕಛೇರಿ, ದೂ.ಸಂ: 08539-225008 ಗೆ ಸಂಪರ್ಕಿಸಬಹುದು ಎಂದು ನಿಗಮದ ಜಿಲ್ಲಾ ವ್ಯವಸ್ಥಾಪಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

****

# ದೀಪಾವಳಿ ಹಬ್ಬದಲ್ಲಿ ಹಸಿರು ಪಟಾಕಿ ಸಿಡಿಸುವ ಮೂಲಕ ಪರಿಸರ ರಕ್ಷಣೆಗೆ ಮನವಿ

ಕೊಪ್ಪಳ : ಪ್ರತಿ ವರ್ಷದಂತೆ ಈ ಬಾರಿಯೂ ಬೆಳಕಿನ ಹಬ್ಬ ದೀಪಾವಳಿಯನ್ನು ಪರಿಸರ ಸ್ನೇಹಿ ಹಸಿರು ಪಟಾಕಿ ಬಳಕೆಯೊಂದಿಗೆ ಆಚರಿಸಿ ಮಾಲಿನ್ಯ ನಿಯಂತ್ರಣಕ್ಕೆ ಮುಂದಾಗಬೇಕು ಎಂದು ಜಿಲ್ಲಾ ಪರಿಸರ ಅಧಿಕಾರಿಗಳು ತಿಳಿಸಿದ್ದಾರೆ. ಜಿಲ್ಲಾ ವ್ಯಾಪ್ತಿಯಲ್ಲಿ ಪಟಾಕಿಗಳ ಮಾರಾಟ ಮತ್ತು ನಿಯಂತ್ರಿಸುವ ಕುರಿತು ಈಗಾಗಲೇ ಹಸಿರು ಪಟಾಕಿ ಮಾರಾಟಕ್ಕೆ ಮಾತ್ರ ಅವಕಾಶವಿದ್ದು, ಹಸಿರು ಪಟಾಕಿ ಅವುಗಳ ಪ್ಯಾಕೆಟ್ ಮೇಲೆ ಹಸಿರು ಪಟಾಕಿಯ ಚಿಹ್ನೆ ಇದ್ದು ಕ್ಯೂಆರ್ ಕೋಡ್ ಇರುವ ಪಟಾಕಿಗಳನ್ನೇ ಉಪಯೋಗಿಸಬೇಕು. ಸುಪ್ರೀಂ ಕೋರ್ಟ್ ಆದೇಶದಂತೆ ಹಸಿರು ಪಟಾಕಿಗಳ ಹೊರತು ಪಡಿಸಿ ಉಳಿದ ಪಟಾಕಿಗಳನ್ನು ಬಳಕೆ ಮಾಡಬಾರದು. ರಾತ್ರಿ 8 ರಿಂದ 10 ಗಂಟೆಯವರೆಗೆ ಮಾತ್ರ ಪಾಟಾಕಿ ಸಿಡಿಸಲು ಅವಕಾಶವಿದ್ದು, ದೀಪಾವಳಿ ಹಬ್ಬದ ಆಚರಣೆಯ ಸಂದರ್ಭದಲ್ಲಿ ಹಸಿರು ಪಟಾಕಿಗಳನ್ನು ಮಾತ್ರ ಬಳಸಬೇಕು. ಇವುಗಳನ್ನು ಬಳಸುವಾಗ ಪ್ರಾಣಿ ಪಕ್ಷಿಗಳು ಮಕ್ಕಳು ಮತ್ತು ವೃದ್ದರಿಗೆ ತೊಂದರೆಯಾಗದಂತೆ ಬಳಸಬೇಕು. ಆಸ್ಪತ್ರೆ, ಶಿಕ್ಷಣ ಸಂಸ್ಥೆ ಸುತ್ತಮುತ್ತ ಹಾಗೂ ನಿಷೇಧಿತ ಪ್ರದೇಶಗಳಲ್ಲಿ ಯಾವುದೇ ರೀತಿಯ ಸಿಡಿಮದ್ದುಗಳನ್ನು ಸ್ಫೋಟಿಸುವಂತಿಲ್ಲ.

ತಾತ್ಕಾಲಿಕವಾಗಿ ಪಟಾಕಿ ಮಳಿಗೆಗಳನ್ನು ತೆರೆಯುವ ಮಾಲೀಕರು ಅಗತ್ಯ ಮುನ್ನೆಚ್ಚರಿಕಾ ಕ್ರಮಗಳನ್ನು ಕೈಗೊಂಡು ಅನುಮತಿ ಪತ್ರದಲ್ಲಿ ನೀಡಿದ ಷರತ್ತುಗಳನ್ನು ತಪ್ಪದೇ ಪಾಲಿಸಬೇಕು. ಸಾರ್ವಜನಿಕರಿಗೆ ಮತ್ತು ಮಕ್ಕಳಲ್ಲಿ ಅರಿವು ಮೂಡಿಸಲು ಪರಿಣಾಮಕಾರಿಯಾಗಿ ಜಾಗೃತಿ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಬೇಕು.

ಸಾಂಪ್ರದಾಯಿಕ ಪಟಾಕಿಗಳಿಗಿಂತ ಹಸಿರು ಪಟಾಕಿಗಳು ಕಡಿಮೆ ಗಾತ್ರದಲ್ಲಿದ್ದು, ಇವುಗಳ ತಯಾರಿಕೆಯಲ್ಲಿ ಬಳಸುವ ರಾಸಾಯನಿಕವು ಶೇ.30 ರಿಂದ 40 ರಷ್ಟು ಕಡಿಮೆ ಪ್ರಮಾಣದಲ್ಲಿರುತ್ತದೆ. ಪಟಾಕಿ ಸಿಡಿಸುವ ಸಂದರ್ಭದಲ್ಲಿ ಹೊರಸೂಸುವ ರಾಸಾಯನಿಕ ಹೊಗೆಯಲ್ಲಿ ಧೂಳಿನ ಕಣಗಳು, ಖಂ2 ಮತ್ತು **No2** ಅಂಶಗಳ ಪ್ರಮಾಣವು ಶೇ.30 ರಷ್ಟು ಕಡಿಮೆ ಇರುತ್ತದೆ.

ನಗರ ಮತ್ತು ಪಟ್ಟಣದ ಚಿಕ್ಕ ಚಿಕ್ಕ ಬೀದಿಗಳಲ್ಲಿ ಪಟಾಕಿ ಮತ್ತು ಸಿಡಿಮದ್ದುಗಳನ್ನು, ಬಾಣ ಬಿರುಸುಗಳನ್ನು ಉಪಯೋಗಿಸುವುದರಿಂದ ಅಲ್ಲಿನ ನಿವಾಸಿಗಳಿಗೆ ಹಾನಿಯುಂಟಾಗುವ ಅಥವಾ ಬೆಂಕಿ ಹಾಗೂ ಸ್ಫೋಟದಿಂದ ಅಪಾಯಗಳು ಆಗುವ ಸಾಧ್ಯತೆ ಇರುವುದರಿಂದ ಸಾರ್ವಜನಿಕರು ಪಟಾಕಿ ಹಾಗೂ ಸಿಡಿಮದ್ದುಗಳನ್ನು ವಸತಿ ಪ್ರದೇಶಗಳಲ್ಲಿ ಉಪಯೋಗಿಸುವ ಬದಲು ಮೈದಾನಗಳಲ್ಲಿ ಒಟ್ಟಾಗಿ ಸೇರಿ ಸಿಡಿಸಲು ವಿನಂತಿಸಲಾಗಿದೆ. ಅಲ್ಲದೇ ದೀಪಾವಳಿ ಹಬ್ಬವನ್ನು ಸಿಡಿಮದ್ದು, ಪಟಾಕಿಗಳನ್ನು ಉಪಯೋಗಿಸದೇ ದೀಪಾವಳಿ ಹಬ್ಬವನ್ನು ದೀಪದ ಹಬ್ಬವನ್ನಾಗಿ ಆಚರಿಸುವಂತೆ ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿಯ ಕೊಪ್ಪಳ ಪ್ರಾದೇಶಿಕ ಕಚೇರಿಯ ಜಿಲ್ಲಾ ಪರಿಸರ ಅಧಿಕಾರಿ ವೈ.ಎಸ್. ಹರಿಶಂಕರ್ ಅವರು ಪ್ರಕಟಣೆಯಲ್ಲಿ ಕೋರಿದ್ದಾರೆ.

# ಮುಂದೊಮ್ಮೆ ವಿಶ್ವ ಸಂಸ್ಥೆಯಿಂದಲೂ ಬಸವಣ್ಣನವರಿಗೆ ಮನ್ನಣೆ -ಡಾ.ಅವಿನಾಶ್ ಕವಿ



ಬೆಳಗಾವಿ; ಅದ್ವಿತೀಯವಾದ ನಾಯಕತ್ವದ ಗುಣಗಳನ್ನು ಹೊಂದಿರುವ ಬಸವಣ್ಣನವರಿಗೆ ಮುಂದೊಮ್ಮೆ ವಿಶ್ವಸಂಸ್ಥೆ ಕೂಡ ಮನ್ನಣೆ ನೀಡುತ್ತದೆ ಎಂದು ಡಾ.ಅವಿನಾಶ್ ಕವಿ ಹೇಳಿದರು.

ಅವರು ಬೆಳಗಾವಿಯಲ್ಲಿ ದಾನಮ್ಮದೇವಿ ಮರಿಪುರಾಣ ಕಾರ್ಯಕ್ರಮದಲ್ಲಿ ಮಾತನಾಡುತ್ತಿದ್ದರು. 1948ರಲ್ಲಿ ವಿಶ್ವಸಂಸ್ಥೆ ಮಾನವ ಹಕ್ಕುಗಳ ವಿಭಾಗವು ಒಬ್ಬ ನಾಯಕನಲ್ಲಿ ಇರಬೇಕಾದ ಗುಣಗಳ ಬಗ್ಗೆ 30 ಅಂಶ ಕಾರ್ಯಕ್ರಮಗಳ ಘೋಷಣೆ ಮಾಡಿತು. ಅದರಲ್ಲಿರುವ ಎಲ್ಲಾ ಅಂಶಗಳು ಬಸವಣ್ಣನವರಲ್ಲಿವೆ, ಅದೇ ರೀತಿ ಜಾಗತಿಕ ಮಟ್ಟದ ವಿಶ್ವವಿದ್ಯಾಲಯಗಳು ಕೂಡ ನಾಯಕತ್ವದ ಗುಣಗಳ ಪಟ್ಟಿಯನ್ನು ತಯಾರಿಸಿದವು ಆ ಎಲ್ಲ ಗುಣಗಳು ಕೂಡ ಬಸವಣ್ಣನವರಲ್ಲಿವೆ, ಹೀಗಾಗಿ ಬಸವಣ್ಣನವರು ಕೇವಲ ಕರ್ನಾಟಕದ ಸಾಂಸ್ಕೃತಿಕ ನಾಯಕರಲ್ಲ ಅವರು ಇಡೀ ಭಾರತ ದೇಶದ ಸಾಂಸ್ಕೃತಿಕ ನಾಯಕ ಅಷ್ಟೇ ಅಲ್ಲ ಅವರು ಸಮಸ್ತ ಮಾನವ ಕುಲ ಕೋಟಿಗೆ ಸಾಂಸ್ಕೃತಿಕ ನಾಯಕನಾಗುವ ಅರ್ಹತೆಗಳನ್ನು ಹೊಂದಿದ್ದಾರೆ ಹೀಗಾಗಿ ಮುಂದೊಂದು ದಿನ ಅವರನ್ನು ಇಡೀ ಭಾರತ ದೇಶವು ಗುರುತಿಸುತ್ತದೆ ಅಷ್ಟೇ ಅಲ್ಲ ಇಡೀ ವಿಶ್ವವೇ ಗುರುತಿಸುತ್ತದೆ. ವಿಶ್ವಸಂಸ್ಥೆಯಿಂದಲೂ ಬಸವಣ್ಣನವರಿಗೆ ಮನ್ನಣೆ ಸಿಗುತ್ತದೆ ಎಂದವರು ಹೇಳಿದರು.

ಇದೆಲ್ಲಕ್ಕಿಂತಲೂ ಮುಂಚೆ ನಮ್ಮಲ್ಲಿರುವ ಗೊಂದಲಗಳಿಂದ ಹೊರ ಬರಬೇಕು. ಬಸವಣ್ಣನವರ ಹಿರಿಮೆ ಗರಿಮೆಗಳನ್ನು ತತ್ವಗಳನ್ನು ಒಪ್ಪಿಕೊಳ್ಳುವಂತಾಗಬೇಕು ಅದಕ್ಕೆ ಪೂರ್ವಾಗ್ರಹ ಪೀಡೆಯಿಂದ ಹೊರಬಂದು ಆಳವಾದ ಅಧ್ಯಯನವನ್ನು ಮಾಡಬೇಕು, ಬಸವಣ್ಣ ಧರ್ಮಗುರು ಯಾಕೆ,ವಚನ ಸಾಹಿತ್ಯ ಧರ್ಮ ಗ್ರಂಥ ಯಾಕೆ, ಎಂಬ ವಾಸ್ತವ ಅಂಶಗಳನ್ನು ತಿಳಿದುಕೊಳ್ಳಬೇಕು.

ಕಾನೂನಿನಿಂದ ಕ್ರಾಂತಿ ಸಾಧ್ಯವಿಲ್ಲ, ಆಚಾರ ಮತ್ತು ವಿಚಾರಗಳಿಂದ ಸಾಧ್ಯವಿದೆ, ನುಡಿದಂತೆ ನಡೆದಾಗ ಮಾತ್ರ ಕ್ರಾಂತಿ ಸಾಧ್ಯವಿದೆ, ಸಂವೇದನೆಯಿಂದ ಮುತ್ತು ಆಲೋಚನೆಗಳಲ್ಲಿ ಬದಲಾವಣೆಯಾದಾಗ ಮಾತ್ರ ಕ್ರಾಂತಿ ಸಾಧ್ಯ, ಆ ಕ್ರಾಂತಿ ಬಸವಣ್ಣನವರಿಂದಾಯಿತು ಸಾಹಿತ್ಯದಲ್ಲಿ ದೊಡ್ಡ ಪಲ್ಲಟವನ್ನೇ ಮಾಡಿದರು, ಜನಸಾಮಾನ್ಯರ ಭಾಷೆಯಾದ ಕನ್ನಡದಲ್ಲಿ ಸಾಹಿತ್ಯ ರಚನೆ ಆರಂಭ, ಅಲ್ಲಿ ಹುಟ್ಟಿದ್ದೇ ಶರಣ ಸಾಹಿತ್ಯ, ಪರ್ಯಾಯ ಸಂಸ್ಕೃತಿಯನ್ನು ಹುಟ್ಟು ಹಾಕಿದರು ಅದೇ ಶರಣ ಸಂಸ್ಕೃತಿ, ಬಸವಾದಿ ಪ್ರಮಥರ ಸ್ತುತಿಯೇ ಗುಗ್ಗುಳೋತ್ಸವ, ಕಾಯಕದಿಂದಲೇ ಮೋಕ್ಷವೆಂದು ತೋರಿಕೊಟ್ಟರು, ದಾಸೋಹ ಪರಂಪರೆಯ ಮೂಲ ಬಂದಿದ್ದೆ ಅಲ್ಲಿಂದ. ಹೀಗೆ ಜಗದ ದಾರ್ಶನಿಕರೆಲ್ಲರ ಗುಣಗಳನ್ನು ಬಸವಣ್ಣನವರಲ್ಲಿ ಕಾಣಬಹುದು ಎಂದು ಎಳೆ ಎಳೆಯಾಗಿ ವಿವಸಿದ ಅವರು ಇಷ್ಟಲಿಂಗ ಸಂಸ್ಕಾರ ದೀಕ್ಷಾ ಕಾರ್ಯಕ್ರಮಗಳು ಎಲ್ಲ ಬಸವಪರ ಸಂಘಟನೆಗಳಿಂದಾಗಬೇಕು "ಶ್ರೀ ಗುರು ಬಸವ ಲಿಂಗಾಯ ನಮಃ" ಎಂಬುದು ಸ್ವಸ್ತಿ ಮಂತ್ರವಾಗಬೇಕು ಎಂದರು.

ಕಾರ್ಯಕ್ರಮದ ಸಾನಿಧ್ಯ ವಹಿಸಿದ್ದ ಬೆಳಗಾವಿ ನಾಗನೂರು ರುದ್ರಾಕ್ಷಿ ಮಠದ ಪೀಠಾಧಿಕಾರಿ ಡಾ.ಅಲ್ಲಮಪ್ರಭು ಮಹಾಸ್ವಾಮಿಗಳು ಆಶೀರ್ವಚನ ನೀಡಿ ಹೆಣ್ಣು ಮಕ್ಕಳ ಸ್ವಾತಂತ್ರ್ಯಕ್ಕಾಗಿ ಬಸವಣ್ಣನವರು ತಮ್ಮ ಮನೆಯನ್ನು ತೊರೆದರು, ಅವರಿಂದಾಗಿಯೇ ಇಂದು ಹೆಣ್ಣು ಮಕ್ಕಳು ಮನೆಯಿಂದ ಹೊರ ಬಂದು ಸಮಾಜದ ಚಟುವಟಿಕೆಗಳಲ್ಲಿ ತೊಡಗಿಕೊಳ್ಳುವಂತಾಗಿದೆ. ಇಂದು ಸಂಸ್ಕೃತಿ ಮತ್ತು ಪರಂಪರೆ ಉಳಿದಿದ್ದರೆ ಅದು ಹೆಣ್ಣು ಮಕ್ಕಳಿಂದ ಮಾತ್ರ ಆದರೆ ಬದಲಾದ ವಾತಾವರಣದಲ್ಲಿ ಹೆಣ್ಣು ಮಕ್ಕಳು ಕೂಡ ಬಹಳಷ್ಟು ಬದಲಾಗುತ್ತಿದ್ದಾರೆ ಅದು ಮಾತ್ರ ಆಗಬಾರದು ಸಂಸ್ಕಾರ ಮತ್ತು ಸಂಸ್ಕೃತಿ ಶಾಶ್ವತವಾಗಿ ಉಳಿಯಬೇಕಾದರೆ ಅದು ಮಹಿಳೆಯರಿಂದ ಮಾತ್ರ ಸಾಧ್ಯ, ತಾಯಂದಿರಿಂದ ಮಾತ್ರ ಸಾಧ್ಯ ಅಷ್ಟಾವರಣ, ಪಂಚಾಚಾರ, ಷಟಸ್ಥಲ ಮತ್ತು ಇಷ್ಟಲಿಂಗ ಪರಂಪರೆಗಳನ್ನು ಉಳಿಸುವ ಮಹತ್ತರ ಜವಾಬ್ದಾರಿ ಮಹಿಳೆಯರ ಮೇಲಿದೆ ಎಂದವರು ನುಡಿದರು.

ಬಸವಣ್ಣನವರ ಸಪ್ತ ಸೂತ್ರಗಳಲ್ಲಿ ಒಂದನ್ನು ಸರಿಯಾಗಿ ಪಾಲಿಸಿದರೂ ಸಾಕು ಉನ್ನತ ಸ್ತರಕ್ಕೆ ಏರಲು ಸಾಧ್ಯ. ಲಂಡನ್ ನಲ್ಲಿ ಬಸವ ಮೂರ್ತಿಯ ಉದ್ಘಾಟನೆಗೆ ಪ್ರಧಾನಿಯಾಗಿ ಅಲ್ಲ ಬಸವ ಭಕ್ತನಾಗಿ ಬಂದಿದ್ದೇನೆ ಎಂದು ಮೋದಿ ಅವರು ಹೇಳಿದ್ದು ಬಸವಣ್ಣನವರ ಹಿರಿಮೆಯನ್ನು ತೋರುತ್ತದೆ ಎಂದರು.

ಪ್ರವಚನಕಾರ ಶ್ರೀ. ಚನ್ನವೀರ ಸ್ವಾಮಿ ಹಿರೇಮಠ ಪ್ರವಚನ ನೀಡಿದರು.

ದಾನಮ್ಮ ದೇವಿ ದೇವಸ್ಥಾನದ ಟ್ರಸ್ಟ್ ಅಧ್ಯಕ್ಷ ಚಂದ್ರಶೇಖರ್ ಬೆಂಬಳಗಿ ಸ್ವಾಗತಿಸಿದರು, ಪ್ರಧಾನ ಕಾರ್ಯದರ್ಶಿ ಸಿ.ಎಂ. ಕಿತ್ತೂರು ವಂದಿಸಿದರು, ಶ್ರೀಮತಿ. ರೋಹಿಣಿ ಬೆಂಬಳಗಿ ಮತ್ತು ಶ್ರೀಮತಿ.ರಾಜಶ್ರೀ ದೇಯಣ್ಣವರ್ ಕಾರ್ಯಕ್ರಮ ನಿರ್ವಹಿಸಿದರು. ಟ್ರಸ್ಟ್ ಕಾರ್ಯದರ್ಶಿ ಮೃತ್ಯುಂಜಯ ಬೋಳಮಲ್ಲ ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದರು.

# ರೋಗಗಳು ಮನುಷ್ಯನಲ್ಲಿ ಸಲಿಸಾಗಿ ಆವರಿಸಿಕೊಳ್ಳುತ್ತಿವೆ : ಲವನಕುಮಾರ



ಉಗರಗೋಳ : ಇಂದಿನ ಜೀವನದಲ್ಲಿ ಜಂಜಾಟದ ಮನುಷ್ಯ ಆರೋಗ್ಯದ ಬಗ್ಗೆ ಕಾಳಜಿವಹಿಸದೇ ನಿರ್ಲಕ್ಷವಹಿಸಿದ್ದರಿಂದ ಭಯಂಕರವಾದ ರೋಗಗಳು ಮನುಷ್ಯನಲ್ಲಿ ಸಲಿಸಾಗಿ ಆವರಿಸಿಕೊಳ್ಳುತ್ತಿವೆ ಎಂದು ಯೋಜನಾಧಿಕಾರಿ ಲವನಕುಮಾರ ಹೇಳಿದರು.

ಸವದತ್ತಿ ತಾಲೂಕಿನ ಉಗರಗೋಳ ಗ್ರಾಮದ ಶ್ರೀರಾಮಾರೂಢ ಮಠದಲ್ಲಿ ಗುರುವಾರ ಶ್ರೀಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ ಬಿ.ಸಿ ಟ್ರಸ್ಟ್ ಸವದತ್ತಿ ಹಾಗೂ ಎಮ್ ಎಮ್ ಜೋಷಿ ಹಾಗೂ ವಿಜ್ಞಾನ ಸಂಸ್ಥೆ ಹುಬ್ಬಳ್ಳಿ ಇವರ ಸಂಯುಕ್ತ ಆಶ್ರಯದಲ್ಲಿ ಒಂದು ದಿನದ ಉಚಿತ ಕಣ್ಣಿನ ತಪಾಸಣೆ ಹಾಗೂ ಆರೋಗ್ಯ ತಪಾಸಣಾ ಶಿಬಿರದಲ್ಲಿ ಮಾತನಾಡಿದ ಅವರು.

ಕಲಬೇರಿಕೆ ಆಹಾರವನ್ನು ನಿರಂತರವಾಗಿ ಸೇವಿಸುವದರಿಂದ ಬಿಪಿ, ಸುಗರ, ಕಣ್ಣಿನ ದೃಷ್ಟಿ ಮತ್ತು ಮಾನಸಿಕ ರೋಗಗಳಿಗೆ ಅವ್ಹಾಣ ನೀಡಿದಂತಾಗಿದ್ದು. ಹಿತಮಿತವಾದ ಆಹಾರ ಸೇವನೆ, ವ್ಯಾಯಾಮ ವಾಯುವಿಹಾರ, ಹಾಗೂ ಧೂಮಪಾನದಿಂದ ದೂರ ಉಳಿದು ಆರೋಗ್ಯವಂತರಾಗಬೇಕೆಂದು ಕರೆ ನೀಡಿದರು.

ಉಗರಗೋಳ ಆರೋಗ್ಯ ಕೇಂದ್ರದ ವ್ಯಧ್ಯಾಧಿಕಾರಿ ಡಾ, ಜ್ಯೋತಿ ಬಸರಿ ಮಾತನಾಡಿ, ಪ್ರತಿಯೊಂದು ಗ್ರಾಮಗಳಲ್ಲಿ ರೋಗಿಗಳ ಸಂಖ್ಯೆ, ದಿನದಿಂದ ದಿನಕ್ಕೆ ಹೆಚ್ಚಾಗುತ್ತ ಸಾಗಿದ್ದು, ಇದನ್ನು ತಡೆಯಲು ಇಂಧಿನ ಯುವಕರು ದುಷ್ಠ ಚಟಗಳ ದಾಸರಾಗದೆ ವಿಧ್ಯಾ ಸಂಪತ್ತು ಜೋತೆಗೆ ದೇಹ ಸಂಪತ್ತನ್ನು ಗಳಿಸಿ ದೇಶದ ಆಸ್ತಿಯಾಗಬೇಕೆಂದ ಅವರು ಸಾರ್ವಜನಿಕರು ಈ ಶಿಬಿರದ ಲಾಭ ಪಡೆದುಕೋಳ್ಳುವಂತೆ ಕೋರಿದರು.

ಉಗರಗೋಳ ರಾಮಾರೂಢಮಠದ ಬ್ರಹ್ಮಾರೂಢ ಶ್ರೀಗಳು, ಡಾ, ಶಾನೂರ ದಫೇದಾರ, ಒಕ್ಕೂಟದ ಅಧ್ಯಕ್ಷೆ ನಿಂಗಮ್ಮ ಹಳ್ಳಿ, ಶಂಕ್ರೇಮ್ಮ ಮುದ್ರಗಣಿ, ಎನ್ ಎ ಪ್ರಜೇರ, ಸುಬ್ರಾಯ್ ನಾಯ್ಕ, ಮಮತಾ ವೈದ್ಯ, ನಿರ್ಮಲಾ ಕಳಸನಗೌಡರ, ಪೂಜಾ ಸೋಮನ್ನವರ, ಅಶ್ವೀನಿ ಬಾವಿಕಟ್ಟಿ, ಗಂಗಮ್ಮ ಮಡಿವಾಳರ, ಶೀಲ್ಪಾ ಕುರಿ, ನೀಲಮ್ಮ ಜ್ಯೋತೇನ್ನವರ, ಸುಶ್ಮೀತಾ ನರಗುಂದ, ಮಡಿವಾಳಪ್ಪ ತೇಗೂರ ಭಾಗ್ಯ ಹನಶಿ ಹಾಗೂ ಗ್ರಾಮಸ್ಥರು ಉಪಸ್ಥಿತರಿದ್ದರು.

# ಸಂಸ್ಕೃತಿಯಿಂದ ಯುವಜನ ವಿಮುಖ, ವಿಷಾದ -ಡಾ. ಜಾವಿದ ಜಮಾದಾರ

ವಿಜಯಪುರ – ಭಾರತ ಶ್ರೀಮಂತ ಸಂಸ್ಕೃತಿ ಪೋಷಿಸುತ್ತ ಸಾರ್ವತ್ರಿಕ ಮೌಲ್ಯಗಳನ್ನು ಜಗತ್ತಿಗೆ ಬಿತ್ತರಿಸುತ್ತಿದೆ. ಅಂತಹ ಮೌಲ್ಯಾಧಾರಿತ ಸಂಸ್ಕೃತಿಯನ್ನು ಮೈಗೂಡಿಸಿಕೊಳ್ಳಲು ಇಂದಿನ ಯುವ ಜನಾಂಗ ಹಿಂದೇಟು ಹಾಕುತ್ತಿರುವುದು ವಿಷಾದನೀಯ ಸಂಗತಿ ಎಂದು ರಾಷ್ಟ್ರ ಪ್ರಶಸ್ತಿ ಪುರಸ್ಕೃತರ ಫೆಡರೇಶನದ ರಾಷ್ಟ್ರೀಯ ಅಧ್ಯಕ್ಷ ಡಾ. ಜಾವೀದ ಜಮಾದಾರ ಹೇಳಿದರು.

ನಗರದ ಬಿ.ಎಲ್.ಡಿ.ಈ. ಅಸೋಶಿಯೇಶನ್ ಎ.ವಿ.ಎಫ್. ಆಯುರ್ವೇದ ಮಹಾವಿದ್ಯಾಲಯದಲ್ಲಿ ಜಿಲ್ಲಾಡಳಿತ ಜಿಲ್ಲಾ ಪಂಚಾಯತ, ನೆಹರು ಯುವ ಕೇಂದ್ರ ರಾಷ್ಟ್ರೀಯ ಸೇವಾ ಯೋಜನೆ ಹಾಗೂ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಆಶ್ರಯದಲ್ಲಿ ಏರ್ಪಡಿಸಿದ 2025ನೇ ಸಾಲಿನ ವಿಜಯಪುರ ಜಿಲ್ಲಾ ಮಟ್ಟದ ಯುವಜನೋತ್ಸವ ಸಮಾರಂಭ ಉದ್ಘಾಟಿಸಿ ಅವರು ಮಾತನಾಡಿದರು. ಪಾಶ್ಚಾತ್ಯ ಸಂಸ್ಕೃತಿಯ ಅತಿಯಾದ ವ್ಯಾಮೋಹದಿಂದ ಯುವಜನತೆ ನಮ್ಮ ಸಂಸ್ಕೃತಿಯ ಬಗ್ಗೆ ಒಲವು ಬೆಳೆಸಿಕೊಳ್ಳುತ್ತಿಲ್ಲ. ಪಾಶ್ಚಾತ್ಯ ಸಂಸ್ಕೃತಿಯನ್ನು ಅನುಕರಣೆ ಮಾಡುವದಕ್ಕಿಂತ ನಮ್ಮ ನೆಲದ ಭವ್ಯ ಸಂಸ್ಕೃತಿಯನ್ನು ಅಳವಡಿಸಿಕೊಳ್ಳಬೇಕು ಎಂದರು. ಜಾನಪದ ಸಂಸ್ಕೃತಿ ಉಳಿಸಿ ಬೆಳೆಸಲು ಪ್ರತಿಯೊಬ್ಬರು ಪಣತೊಡಬೇಕಾಗಿದೆ. ಜನಪದ ಕಲೆಗಳು ಮಾನವೀಯ ಸಂಬಂಧದ ಸರಪಳಿ ಜಾನಪದ ಕಲೆ ನಮ್ಮ ಪೂರ್ವಜರು ನೀಡಿದ ಅನುಪಮ ಕೊಡುಗೆ, ಯುವಜನರು ಕಲೆ, ಸಾಹಿತ್ಯ ಆರಾಧಕರಾಗಿರಬೇಕು. ಹಾಗೂ ಸಾಂಸ್ಕೃತಿಕ ರಾಯಭಾರಿಗಳಾಗಿ ತನ್ಮೂಲಕ ದೇಶದ ಕೀರ್ತಿ ಬೆಳೆಸಬೇಕೆಂದರು. ನಮ್ಮ ದೇಶದ ಭವ್ಯವಾದ ಕಲೆ, ಸಾಂಸ್ಕೃತಿ, ಜನಪದ ಸೇರಿದಂತೆ ಎಲ್ಲ ಕಲಾ ಪ್ರಕಾರಗಳನ್ನು ಯುವಜನತೆ ಉಳಿಸಿ ಬೆಳೆಸಲು ಮುಂದಾಗಬೇಕೆಂದು ಸಲಹೆ ನೀಡಿದರು.

ಅತಿಥಿಗಳಾಗಿ ಮಾತನಾಡಿದ ರಾಜ್ಯ ಯುವ ಪ್ರಶಸ್ತಿ ಪುರಸ್ಕೃತ ಅರವಿಂದ ಕೊಪ್ಪ ಮಾತನಾಡಿ ವಿಜಯಪುರ ಜಿಲ್ಲೆ ಜನಪದ ಕಲೆಗಳ ತವರೂರು ಇಲ್ಲಿನ ಯುವಕ ಯುವತಿಯರು ಜನಪದ ಕಲೆಗಳನ್ನು ಪ್ರೀತಿಸಬೇಕು. ಯುವಜನರು ಮನಸ್ಸು ಮಾಡಿದರೆ ದೇಶದ ಚಿತ್ರಣವನ್ನೇ ಬದಲಿಸಬಹುದು. ಬದಲಾದ ಜೀವನ ಶೈಲಿ ಒತ್ತಡಗಳಿಂದ ಜೀವನ ಮೌಲ್ಯಗಳು ಅಪಾಯದ ಅಂಚಿಗೆ ಸರಿಯುತ್ತಿದೆ. ಯುವಜನರು ಸಾಂಸ್ಕೃತಿಕವಾಗಿ ವಿಮುಖರಾಗಬಾರದೆಂದರು.

ಸಮಾರಂಭದ ಅಧ್ಯಕ್ಷತೆಯನ್ನು ಆಯುರ್ವೇದ ಮಹಾವಿದ್ಯಾಲಯದ ಪ್ರಾಚಾರ್ಯ ಅಶೋಕ ಪಾಟೀಲ ಮಾತನಾಡುತ್ತ ನಮ್ಮ ಸಂಸ್ಕೃತಿ ಬಗ್ಗೆ ಒಲವು ಬೆಳೆಸಿಕೊಳ್ಳಬೇಕು. ಜನಪದ ಕಲಿಕೆಗಾಗಿ ಹೆಚ್ಚಿನ ಒತ್ತನ್ನು ನೀಡಬೇಕಾಗಿದೆ. ಯುವಕರಿಗೆ ಶಿಕ್ಷಣದ ಜೊತೆಗೆ ಸಂಸ್ಕೃತಿ, ಕ್ರೀಡೆ, ಜೀವನ ಮೌಲ್ಯಗಳ ಬಗ್ಗೆ ಹೆಚ್ಚಿನ ಒತ್ತನ್ನು ನೀಡಬೇಕಾಗಿದೆ. ಶಾಲಾ ಕಾಲೇಜುಗಳಲ್ಲಿ ನಮ್ಮ ಕಲೆ, ಸಂಸ್ಕೃತಿಯನ್ನು ಬಿಂಬಿಸುವ ಕಾರ್ಯಕ್ರಮಗಳು ಹೆಚ್ಚಾಗಿ ನಡೆಯಬೇಕಿದೆ ಎಂದರು.

ಕಾರ್ಯಕ್ರಮದಲ್ಲಿ ಸಹಾಯಕ ನಿರ್ದೇಶಕ ರಾಜಶೇಖರ ದೈವಾಡಿ ಸ್ವಾಗತಿಸಿ ಪ್ರಾಸ್ತಾವಿಕವಾಗಿ ಮಾತನಾಡಿದರು ರಾಜ್ಯ ಯುವ ಪ್ರಶಸ್ತಿ ಪುರಸ್ಕೃತ ಸಂಜು ಕೋತ, ಎಕ್ಸಲೆಂಟ್ ಕಾಲೇಜಿನ ಪ್ರಾಚಾರ್ಯ ಶ್ರೀಕಾಂತ, ಡಾ. ಡಿ.ಎನ್. ಧರಿ ಉಪಸ್ಥಿತರಿದ್ದರು. ವಿಜಯಪುರ ನಗರ ಹಾಗೂ ಜಿಲ್ಲೆಯಿಂದ ಅಪಾರ ಸಂಖ್ಯೆಯಲ್ಲಿ ವಿದ್ಯಾರ್ಥಿಗಳು, ಪ್ರಾಚಾರ್ಯರು ಹಾಗೂ ಕ್ರೀಡಾ ತರಬೇತುದಾರರು ಆಯುರ್ವೇದ ಮಹಾವಿದ್ಯಾಲಯದ ವಿದ್ಯಾರ್ಥಿನಿಯರು ಪಾಲ್ಗೊಂಡಿದ್ದರು. ಜಾನಪದ ನೃತ್ಯದ ಸ್ಪರ್ಧೆಯೊಂದಿಗೆ ಕಾರ್ಯಕ್ರಮವನ್ನು ಪ್ರಾರಂಭಿಸಲಾಯಿತು. ಕಚೇರಿ ಅಧ್ಯಕ್ಷರು ಸಿಬ್ಬಂದಿ ವರ್ಗದವರು ಕೋಚ್ ರವರು ಮಾರ್ಕರ್ ಉಪಸ್ಥಿತರಿದ್ದರು

# ಬಸವರಾಜ ಕಟ್ಟಿಮನಿ ಅವರ ಕಥೆಗಳಲ್ಲಿ ಗಾಢವಾದ ಜೀವನಾನುಭವ ಶಿದ್ಲಿಂಗ ಗಾಳಿ ಅಭಿಪ್ರಾಯ



ರಾಮದುರ್ಗ: ಪ್ರಗತಿಶೀಲ ಸಾಹಿತ್ಯ ಪಂಥದ ಪ್ರಮುಖ ಕಥೆಗಾರರಾದ ಬಸವರಾಜ ಕಟ್ಟಿಮನಿ ಅವರ ಕಥೆಗಳಲ್ಲಿ ಗಾಢವಾದ ಜೀವನಾನುಭವ, ಹಳೆಯ ಸಂಪ್ರದಾಯಕ್ಕೆ ಮನಿಯದೇ ಹೊಸದನ್ನು ಹುಟ್ಟುಹಾಕುವ, ಸಮಾಜ ಸುಧಾರಣೆಯ ಧೀರತನದ ಮನೋಭಾವನೆಗಳು ಸ್ಪಷ್ಟವಾಗಿ ಎದ್ದು ಕಾಣುತ್ತವೆ ಎಂದು ಯರಗಟ್ಟಿ ಸಿ.ಎಂ ಮಾಮನಿ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ಕನ್ನಡ ಪ್ರಾಧ್ಯಾಪಕ ಶಿದ್ಲಿಂಗ ಗಾಳಿ ಅಭಿಪ್ರಾಯ ವ್ಯಕ್ತಪಡಿಸಿದರು.

ಸ್ಥಳೀಯ ಈರಮ್ಮ ಯಾದವಾಡ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ಐಕ್ಯೂಎಸಿ, ಕನ್ನಡ ವಿಭಾಗ ಮತ್ತು ಬೆಳಗಾವಿ ಬಸವರಾಜ ಕಟ್ಟಿಮನಿ ಪ್ರತಿಷ್ಠಾನದ ಸಂಯುಕ್ತ ಆಶ್ರಯದಲ್ಲಿ ಬುಧವಾರ ಜರುಗಿದ ಕಟ್ಟಿಮನಿ ಕಥೆ ಹೇಳೂಣು ಕಾರ್ಯಕ್ರಮದ ಮುಖ್ಯ ಅತಿಥಿಯಾಗಿ ಅವರು ಮಾತನಾಡಿದರು.

ಕಟ್ಟಿಮನಿ ಅವರ ಕಥೆಗಳಲ್ಲಿ ಖಡ್ಗದ ಹರಿತ, ಬೆಂಕಿಯಂಥ ಕಿಡಿಗಳು, ಮಿಂಚಿನಂಥ ಹೊಳಪು ಮತ್ತು ವಜ್ರದಂತ ಕಾಠಿಣ್ಯತೆಗಳನ್ನು ಕಾಣುತ್ತೇವೆ. ಅವರ ಕಥೆಗಳ ವಸ್ತುವಿನ ಆಯ್ಕೆಯಲ್ಲಿ ಸ್ಪಷ್ಟತೆ, ಖಚಿತವಾದ ಧೋರಣೆಗಳಿದ್ದು, ಸಣ್ಣ–ಸಣ್ಣ ಘಟನಾವಳಿಗಳನ್ನು ಅತ್ಯಂತ ಮಾರ್ಮಿಕವಾಗಿ ಸಮಾಜಮುಖಿಯಾಗಿ ಕಥೆಗಳನ್ನು ರಚಿಸುವ ಮೂಲಕ ಅವರು ಒಬ್ಬ ಶ್ರೇಷ್ಠ ಕಥೆಗಾರರಾಗಿ ಕನ್ನಡ ಸಾಹಿತ್ಯದಲ್ಲಿ ಶಾಶ್ವತವಾಗಿ ಉಳಿದಿದ್ದಾರೆ ಎಂದರು.

ಬಸವರಾಜ ಕಟ್ಟಿಮನಿ ಪ್ರತಿಷ್ಠಾನದ ಸದಸ್ಯ ಪ್ರೊ. ಎಸ್.ಜಿ. ಚಿಕ್ಕನರಗುಂದ ಮಾತನಾಡಿ, ಬಸವರಾಜ ಕಟ್ಟಿಮನಿ ಓರ್ವ ಜಾತ್ಯತೀತ ವ್ಯಕ್ತಿಯಾಗಿ ಬದುಕಿದವರು. ಬದುಕಿದಂತೆ ಬರೆದವರು. ಅವರ ಕಥೆಗಳೆಲ್ಲವೂ ವಾಸ್ತವತೆಯ ಪ್ರತಿನಿಧಿಗಳಾಗಿವೆ ಎಂದರು.

ಕಾಲೇಜಿನ ಐಕ್ಯುಎಸಿ ಸಂಯೋಜಕ ಪ್ರೊ. ಸಂಜಯ ಹಾದಿಮನಿ ಪ್ರಾಸ್ತಾವಿಕ ಮಾತನಾಡಿದರು. ಪ್ರಾಚಾರ್ಯ ಡಾ.ಎಂ. ಡಿ. ಕಮತಗಿ ಅಧ್ಯಕ್ಷತೆ ವಹಿಸಿದ್ದರು.

ಕಟ್ಟಿಮನಿ ಕಥೆ ಹೇಳೂಣು ಸ್ಪರ್ಧೆಯಲ್ಲಿ ಸುಮಾರು 25ಕ್ಕೂ ಹೆಚ್ಚು ಸ್ಪರ್ಧಾರ್ಥಿಗಳು ಭಾಗವಹಿಸಿದ್ದು, ಅಜಯ ಬಿರಾದರ ಪಾಟೀಲ (ಪ್ರಥಮ), ರಕ್ಷಿತಾ ಕಾಳೆ (ದ್ವಿತೀಯ), ಶಿವಾನಂದ ಕಳ್ಳಿಮನಿ (ತೃತೀಯ ) ಹಾಗೂ ಪೂರ್ಣಿಮಾ ಶಿಪ್ರಿ ಸಮಾಧಾನಕರ ಬಹುಮಾನ ಪಡೆದುಕೊಂಡರು.

ಕನ್ನಡ ವಿಭಾಗದ ಮುಖ್ಯಸ್ಥ ಡಾ. ಎಮ್. ಆರ್ ದೊಡ್ಡಮನಿ, ಡಾ. ವೆಂಕಟೇಶ, ಪರಶುರಾಮ ಮುಕಾರಿ, ಡಾ.ವಾಯ. ಎಸ್. ಹೊಸಮನಿ, ಯಲ್ಲಪ್ಪ ಕುರಿ, ಮಾರುತಿ ಸುಳಿಕೇರಿ, ಸೋಮೇಶ ಹೊಸಕೋಟಿ, ಡಾ. ಮಹಾಲಕ್ಷ್ಮೀ ಭೂಶಿ ಸೇರಿದಂತೆ ಕಾಲೇಜಿನ ಪ್ರಾಧ್ಯಾಪಕರು ಉಪಸ್ಥಿತರಿದ್ದರು.

ಡಾ.ರಾಜು ಕಂಬಾರ ಸ್ವಾಗತಿಸಿದರು. ಕೃತಿಕಾ ಚಿಕ್ಕೊರಮಠ ನಿರೂಪಿಸಿದರು. ಶಿವಲೀಲಾ ಹಡಪದ ವಂದಿಸಿದರು.

# ಬೀದಿಬದಿ ವ್ಯಾಪಾರಸ್ಥರಿಗಾಗಿ ಹಮ್ಮಿಕೊಂಡ ಆರ್ಥಿಕ ಸಾಕ್ಷರತೆ ಕಾರ್ಯಕ್ರಮ




ರಾಮದುರ್ಗ: ಭಾರತ ಸರಕಾರ ಪಿ.ಎಂ ಸ್ವನಿಧಿ ಯೋಜನೆ ಅಡಿಯಲ್ಲಿ ಬೀದಿಬದಿ ವ್ಯಾಪಾರಸ್ಥರಿಗೆ ಆರ್ಥಿಕ ಸಬಲೀಕರಣಕ್ಕಾಗಿ ಬ್ಯಾಂಕುಗಳ ಮೂಲಕ ಸಾಲಸೌಲಭ್ಯಗಳಿದ್ದು, ಸಾಲ ಯೋಜನೆ ಸದುಪಯೋಗ ಪಡೆಸಿಕೊಳ್ಳಬೇಕೆಂದು ಕೆನರಾ ಬ್ಯಾಂಕ್ ಸಿನಿಯರ್ ಮ್ಯಾನೇಜರ ಅಜಿತ್ ರಾಜನ್ನವರ ಹೇಳಿದರು.

ಸ್ಥಳೀಯ ಪುರಸಭೆಯಲ್ಲಿ ಕೆನರಾ ಬ್ಯಾಂಕ ಹಾಗೂ ಅಮೂಲ್ಯ ಆರ್ಥಿಕ ಸಾಕ್ಷರತೆ ಕೇಂದ್ರದ ಸಹಯೋಗದಲ್ಲಿ ಬೀದಿಬದಿ ವ್ಯಾಪಾರಸ್ಥರಿಗಾಗಿ ಹಮ್ಮಿಕೊಂಡ ಆರ್ಥಿಕ ಸಾಕ್ಷರತೆ ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಯಾಗಿ ಅವರು ಮಾತನಾಡಿದರು.

ಪಿ.ಎಂ ಸ್ವನಿಧಿ ಯೋಜನೆ 2018 ರಿಂದ ಪ್ರಾರಂಭವಾಗ ಬೀದಿಬದಿ ವ್ಯಾಪಾರಿಗಳಿಗೆ 10 ಸಾವಿರ ಸಾಲ ನೀಡಲಾಗಿತ್ತಿತ್ತು. ಆದರೆ ಈಗ ಸಾಲದ ಪ್ರಮಾಣವನ್ನು 15 ಸಾವಿರಕ್ಕೆ ಹೆಚ್ಚಿಸಲಾಗಿದೆ. ನಿಗದಿತ ಅವಧಿಯಲ್ಲಿ ಸಾಲ ಮರುಪಾವತಿ ಮಾಡಿದರೆ 2ನೇ ಹಂತದಲ್ಲಿ 25 ಸಾವಿರ ಹಾಗೂ 3 ಹಂತದಲ್ಲಿ 50 ಸಾವಿರ ರೂ. ಸಾಲ ದೊರೆಯಲಿದೆ. ತಂತ್ರಜ್ಞಾನದ ಮೂಲಕ ನಗದು ರಹಿತವಾಗಿ ಸಾಲ ಮರುಪಾವತಿ ಮಾಡಿದರೆ ಕ್ಯಾಶ್‌ಬ್ಯಾಕ್ ಲಭಿಸಲಿದೆ ಎಂದು ತಿಳಿಸಿದರು.

ಅಮೂಲ್ಯ ಆರ್ಥಿಕ ಸಾಕ್ಷರತೆ ಕೇಂದ್ರದ ಸಮಾಲೋಚಕ ಮಲ್ಲಿಕಾರ್ಜುನರಡ್ಡಿ ಗೊಂದಿ ಮಾತನಾಡಿ, ಸಾಮಾಜಿಕ ಸುರಕ್ಷಾ ವಿಮಾ ಯೋಜನೆಗಳು, ಸೈಬರ್ ಸೆಕ್ಯುರಿಟಿ, ಕ್ಯಾನ್ಸರ್ ಕೇರ್ ಎಂಜೆಲ್ ಖಾತೆ ಹಾಗೂ ಪೊಂಜಿ ಸ್ಕೀಮ್ ಬಗ್ಗೆ ಮಾಹಿತಿ ನೀಡಿದರು.

ಇದೆ ಸಂದರ್ಭದಲ್ಲಿ ಕೆನರಾ ಬ್ಯಾಂಕಿನಿಂದ ಸ್ತ್ರೀಶಕ್ತಿ ಸಂಘಗಳಿಗೆ ಹಾಗೂ ಬೀದಿಬದಿ ವ್ಯಾಪಾರಿಗಳಿಗೆ ಕೆನರಾ ಬ್ಯಾಂಕ ಮ್ಯಾನೇಜರ್ ಅಜಿತ ರಾಜನ್ನವರ ಸಾಲ ಮಂಜೂರಾತಿ ಪತ್ರವನ್ನು ವಿತರಿಸಿದರು.

ಪುರಸಭೆಯ ಡೇನಲ್ಮ್ ವಿಸ್ತರಣಾಧಿಕಾರಿ ಗೀತಾ ಬೆಳಗಲಿ, ಪುರಸಭೆ ಸದಸ್ಯರು ಹಾಗೂ ಬೀದಿಬದಿ ವ್ಯಾಪಾರಸ್ಥರು ಉಪಸ್ಥಿತರಿದ್ದರು.

# ಕರ್ನಾಟಕ ಈಶಾನ್ಯ ಶಿಕ್ಷಕರ ಕ್ಷೇತ್ರದ ಮತದಾರರ ಪಟ್ಟಿ: ಹೆಸರು ನೋಂದಾಯಿಸಲು ಸೂಚನೆ

ಕೊಪ್ಪಳ ಭಾರತ ಚುನಾವಣಾ ಆಯೋಗದ ನಿರ್ದೇಶನದಂತೆ ಕರ್ನಾಟಕ ಈಶಾನ್ಯ ಶಿಕ್ಷಕರ ಕ್ಷೇತ್ರದ ಮತದಾರರ ಪಟ್ಟಿಯನ್ನು ಸಿದ್ಧಪಡಿಸಲಾಗುತ್ತಿದ್ದು, ಅರ್ಹ ಮತದಾರರಿಂದ ಹೆಸರು ನೋಂದಾಯಿಸಲು ಸೂಚಿಸಿದೆ.

ಭಾರತ ಚುನಾವಣಾ ಆಯೋಗವು ಕಲಬುರಗಿ ವಿಭಾಗದ ಪ್ರಾದೇಶಿಕ ಆಯುಕ್ತರನ್ನು ಕರ್ನಾಟಕ ಈಶಾನ್ಯ ಶಿಕ್ಷಕರ ಕ್ಷೇತ್ರದ ಮತದಾರರ ನೋಂದಣಾಧಿಕಾರಿಯನ್ನಾಗಿ ಹಾಗೂ ಚುನಾವಣಾ ಕ್ಷೇತ್ರ ವ್ಯಾಪ್ತಿಯಲ್ಲಿ ಕೊಪ್ಪಳ ಜಿಲ್ಲೆಗೆ ಸಂಬಂಧಿಸಿದಂತೆ ಜಿಲ್ಲಾಧಿಕಾರಿಗಳು ಹಾಗೂ ವಿವಿಧ ಅಧಿಕಾರಿಗಳನ್ನು ಸಹಾಯಕ ಮತದಾರರ ನೋಂದಣಾಧಿಕಾರಿಯನ್ನಾಗಿ ಹಾಗೂ ನಿಯೋಜಿತ ಅಧಿಕಾರಿಗಳನ್ನಾಗಿ ನೇಮಿಸಿರುತ್ತದೆ.

ಅರ್ಹತಾ ದಿನಾಂಕ: 01.11.2025 ಕ್ಕೆ ಅನ್ವಯಿಸುವಂತೆ ಕರ್ನಾಟಕ ಈಶಾನ್ಯ ಶಿಕ್ಷಕರ ಕ್ಷೇತ್ರದ ಮತದಾರರ ಪಟ್ಟಿಯನ್ನು ನೂತನವಾಗಿ ಸಿದ್ಧಪಡಿಸುವ ಕಾರ್ಯವು ಸೆಪ್ಟೆಂಬರ್ 30 ರಿಂದ ಪ್ರಾರಂಭವಾಗಿರುತ್ತದೆ. ಭಾರತ ಚುನಾವಣಾ ಆಯೋಗವು ದಿನಾಂಕ 12.09.2025 ರ ಪತ್ರದನ್ವಯ ಕರ್ನಾಟಕ ಈಶಾನ್ಯ ಶಿಕ್ಷಕರ ಕ್ಷೇತ್ರದ ಮತದಾರರ ಪಟ್ಟಿಯನ್ನು ಹೊಸದಾಗಿ ಸಿದ್ಧಪಡಿಸಲಾಗುತ್ತಿರುವುದರಿಂದ ಈ ಹಿಂದಿನ ಮತದಾರರ ಪಟ್ಟಿಯಲ್ಲಿ ಹೆಸರು ಇರುವ ಮತದಾರರು ಸಹ ನಮೂನೆ 19 ರಲ್ಲಿ ಹೊಸದಾಗಿ ಅರ್ಜಿ ಸಲ್ಲಿಸಬೇಕಾಗಿರುತ್ತದೆಂದು ನಿರ್ದೇಶನ ನೀಡಿರುತ್ತಾರೆ.

ಈಶಾನ್ಯ ಶಿಕ್ಷಕರ ಕ್ಷೇತ್ರದ ಮತದಾರರ ಪಟ್ಟಿಯನ್ನು ಸಿದ್ಧಪಡಿಸಿಕೊಳ್ಳಲು ವೇಳಾಪಟ್ಟಿಯನ್ನು ನಿಗದಿಪಡಿಸಲಾಗಿದೆ. ಅರ್ಜಿ ನಮೂನೆ 19 ರಲ್ಲಿ ಅರ್ಜಿಯನ್ನು ಸ್ವೀಕರಿಸಲು ನವೆಂಬರ್ 6ರ ಗುರುವಾರ ಕೊನೆಯ ದಿನವಾಗಿದೆ. ಕರಡು ಮತದಾರರ ಪಟ್ಟಿಯನ್ನು ನವೆಂಬರ್ 25 ರ ಮಂಗಳವಾರದಂದು ಪ್ರಕಟಿಸಲಾಗುವುದು. ಹಕ್ಕು ಮತ್ತು ಆಕ್ಷೇಪಣೆಗಳನ್ನು ಸಲ್ಲಿಸಲು ನವೆಂಬರ್ 25 ರಿಂದ ಡಿಸೆಂಬರ್ 10 ರವರೆಗೆ ಅವಕಾಶ ಕಲ್ಪಸಿದೆ. ಅಂತಿಮ ಮತದಾರರ ಪಟ್ಟಿಯನ್ನು ಡಿಸೆಂಬರ್ 30 ರಂದು ಪ್ರಕಟಿಸಲಾಗುವುದು.

ಕರ್ನಾಟಕ ಈಶಾನ್ಯ ಶಿಕ್ಷಕರ ಕ್ಷೇತ್ರದ ಮತದಾರರ ಪಟ್ಟಿಯಲ್ಲಿ ಹೆಸರು ನೋಂದಾಯಿಸಲು ಚುನಾವಣಾ ಆಯೋಗದ ಮಾರ್ಗಸೂಚಿಗಳನ್ನು ಅನುಸರಿಸುವುದು ಕಡ್ಡಾಯವಾಗಿದೆ. ಭಾರತದ ಪ್ರಜೆಯಾಗಿರುವ, ಆಯಾ ಮತಕ್ಷೇತ್ರದ ವ್ಯಾಪ್ತಿಯಲ್ಲಿ ಸಾಮಾನ್ಯ ನಿವಾಸಿಯಾಗಿರುವ ಹಾಗೂ 1ನೇ ನವೆಂಬರ್ 2025 ಕ್ಕೆ ಮೊದಲ 6 ವರ್ಷಗಳ ಅವಧಿಯಲ್ಲಿ ದರ್ಜೆಯಲ್ಲಿ ಪ್ರೌಢ ಶಾಲೆಗಿಂತ ಕಡಿಮೆ ಇಲ್ಲದ ನಿರ್ದಿಷ್ಟ ಪಡಿಸಿದಂತಹ ರಾಜ್ಯದೊಳಗಿನ ಸರ್ಕಾರದಿಂದ ಮಾನ್ಯತೆ ಪಡೆದ ಯಾವುದೇ ಶೈಕ್ಷಣಿಕ ಸಂಸ್ಥೆಗಳಲ್ಲಿ ಒಟ್ಟು ಕನಿಷ್ಠ 3 ವರ್ಷ ಬೋಧನಾ ವೃತ್ತಿಯಲ್ಲಿ ನಿರತವಾಗಿರುವ ಪ್ರತಿಯೊಬ್ಬ ವ್ಯಕ್ತಿಯು ಮತದಾರರ ಪಟ್ಟಿಯಲ್ಲಿ ತನ್ನ ಹೆಸರನ್ನು ಸೇರಿಸಲು ಅರ್ಹರಾಗಿರುತ್ತಾರೆ. ಹಾಗೆಯೇ ನಿರ್ದಿಷ್ಟಪಡಿಸಿದ ಶೈಕ್ಷಣಿಕ ಸಂಸ್ಥೆಗಳ ಪಟ್ಟಿಯು ಆಯಾ ಸಹಾಯಕ ಮತದಾರರ ನೋಂದಣಾಧಿಕಾರಿಗಳ ಕಛೇರಿಗಳಲ್ಲಿ ಲಭ್ಯವಿರುತ್ತದೆ.

ಖುದ್ದಾಗಿ ಅಥವಾ ಅಂಚೆ ಮುಖಾಂತರ ಗುಚ್ಛಗಳಲ್ಲಿ (ಬಲ್ಕ್) ಸಲ್ಲಿಸಿದ ಅರ್ಜಿಗಳನ್ನು ಮತದಾರರ ನೋಂದಣಾಧಿಕಾರಿಯು ಮತದಾರರ ಪಟ್ಟಿಯಲ್ಲಿ ಸೇರ್ಪಡೆಗಾಗಿ ಪರಿಗಣಿಸತಕ್ಕದ್ದಲ್ಲ. ಆದರೆ ಸಂಸ್ಥೆಯ ಮುಖ್ಯಸ್ಥರು ಅವರ ಮತದಾರರ ಸಿಬ್ಬಂದಿಯವರ ಎಲ್ಲಾ ಅರ್ಜಿಗಳನ್ನು ಒಟ್ಟಾಗಿ ನೋಂದಣಾಧಿಕಾರಿಗಳಿಗೆ ಕಳುಹಿಸಬಹುದು. ಒಂದೇ ಕುಟಂಬದ ಎಲ್ಲಾ ಸದಸ್ಯರು ನಮೂನೆ 19 ರಲ್ಲಿ ಅರ್ಜಿಗಳನ್ನು ಕುಟುಂಬದ ಯಾವುದಾದರೂ ಸದಸ್ಯರು ಸಲ್ಲಿಸಬಹುದು ಹಾಗೂ ಪ್ರತಿ ಸದಸ್ಯನಿಗೆ ಸಂಬಂಧಿಸಿದಂತೆ ಮೂಲ ಪ್ರಮಾಣ ಪತ್ರಗಳನ್ನು ಒದಗಿಸಿ, ಪ್ರಮಾಣ ಪತ್ರವನ್ನು ಪರಿಶೀಲಿಸಿಕೊಳ್ಳತಕ್ಕದ್ದು.

ಅರ್ಜಿದಾರರು ನಮೂನೆ–19 ರ ಅರ್ಜಿಯೊಂದಿಗೆ ಆಧಾರ್ ಕಾರ್ಡ್, ಚುನಾವಣಾ ಗುರುತಿನ ಚೀಟಿ ಹಾಗೂ ಬಿಳಿ ಬಣ್ಣದ ಹಿನ್ನೆಲೆ ಹೊಂದಿದ 2 ಪಾಸ್‌ಪೋರ್ಟ್ ಅಳತೆಯ ಭಾವಚಿತ್ರಗಳನ್ನು ಸಲ್ಲಿಸಬೇಕು. ಅರ್ಜಿದಾರರು ಅರ್ಜಿಯೊಂದಿಗೆ ಲಗತ್ತಿಸಿದ ಆಧಾರ್ ಕಾರ್ಡಿನ ಗೌಪ್ಯತೆಯನ್ನು ಕಾಪಾಡುವ ದೃಷ್ಠಿಕೋನದಿಂದ ಆಧಾರ್ ಸಂಖ್ಯೆಯ ಪ್ರಥಮ 8 ಸಂಖ್ಯೆಯನ್ನು ಮಾಸ್ಕ್ ಮಾಡಲು ಹಾಗೂ ಅರ್ಜಿದಾರರ ಖಾಸಗಿತ್ವದ ದಾಖಲೆ ಹಾಗೂ ಮೊಬೈಲ್ ಸಂಖ್ಯೆಯನ್ನು ಯಾರಿಗೂ ನೀಡಬಾರದೆಂದು ಕಡ್ಡಾಯವಾಗಿ ಸೂಚಿಸಿದೆ.


ಅರ್ಜಿಯಲ್ಲಿನ ತಪ್ಪು ಅಥವಾ ತಪ್ಪೆಂದು ಅವನು ತಿಳಿದಿರುವ ಅಥವಾ ನಂಬುವಂತಹ ಅಥವಾ ಸತ್ಯವೆಂದು ನಂಬಲಾಗದಿರುವಂತಹ ಹೇಳಿಕೆಗಳನ್ನು ಅಥವಾ ಘೋಷಣೆಗಳನ್ನು ಮಾಡುವ ಯಾವುದೇ ವ್ಯಕ್ತಿಯನ್ನು ಪ್ರಜಾಪ್ರಾತಿನಿಧ್ಯ ಅಧಿನಿಯಮ 1950 ರ 31 ನೇ ಪ್ರಕರಣದ ಮೇರೆಗೆ ಶಿಕ್ಷೆಗೆ ಗುರಿಪಡಿಸಲಾಗುವುದು. ಈಶಾನ್ಯ ಶಿಕ್ಷಕರ ಕ್ಷೇತ್ರದ ಮತದಾರರ ಪಟ್ಟಿಯಲ್ಲಿ ಹೆಸರು ಸೇರ್ಪಡೆ ಬಯಸುವ ಪ್ರತಿಯೊಬ್ಬರು ಅರ್ಜಿ ನಮೂನೆ 19 ನ್ನು ಭರ್ತಿಮಾಡಿ ಅದರೊಂದಿಗೆ ಶೈಕ್ಷಣಿಕ ಸಂಸ್ಥೆಗಳಲ್ಲಿ 1 ನೇ ನವೆಂಬರ್ 2025 ಕ್ಕೆ ಮೊದಲು 6 ವರ್ಷಗಳ ಅವಧಿಯಲ್ಲಿ ಒಟ್ಟು ಕನಿಷ್ಠ 3 ವರ್ಷ ಬೋಧನಾ ವೃತಿಯಲ್ಲಿ ನಿರತವಾಗಿರುವ ಬಗ್ಗೆ ಶೈಕ್ಷಣಿಕ ಸಂಸ್ಥೆಗಳಿಂದ ಅನುಬಂಧ–2 ರಲ್ಲಿ ಪ್ರಮಾಣ ಪತ್ರ ಸಲ್ಲಿಸಬೇಕು.

ಆಯೋಗವು ದಿನಾಂಕ:25–10–2021 ರಂದು ನೀಡಿದ ಮಾರ್ಗಸೂಚಿಗಳನ್ವಯ ಗುಣವಾಗಿ ಅರ್ಹ ಮತದಾರರು ಅವರು ಕಾರ್ಯನಿರ್ವಹಿಸುತ್ತಿರುವ ಸ್ಥಳದಲ್ಲಿ ನೋಂದಾಯಿಸಕೂಡದೆಂದು ತಿಳಿಸುತ್ತಾ, ಅವರು ಸಾಮಾನ್ಯ ನಿವಾಸಿಯಾಗಿ ವಾಸಿಸುತ್ತಿರುವ ಸ್ಥಳೀಯ ಕ್ಷೇತ್ರದಲ್ಲಿ ಅವರ ಹೆಸರನ್ನು ಮತದಾರರ ಪಟ್ಟಿಯಲ್ಲಿ ನೋಂದಾಯಿಸಲು ತಿಳಿಸಿದೆ. ಈ ಕ್ಷೇತ್ರ ವ್ಯಾಪ್ತಿಯ ಹೊರಗೆ ಸೆಕೆಂಡರಿ ಶಿಕ್ಷಣ ಸಂಸ್ಥೆಗಳಿಗಿಂತಲೂ ಕಡಿಮೆ ಇಲ್ಲದ ಶಿಕ್ಷಣ ಸಂಸ್ಥೆಯಲ್ಲಿ ಕಾರ್ಯನಿರ್ವಹಿಸಿ ಮತದಾರನಾಗಲು ಆಯೋಗದ ಮಾರ್ಗಸೂಚಿಗಳನ್ನು ಪೂರೈಸಿ ಅವರು ಈ ಚುನಾವಣಾ ಕ್ಷೇತ್ರ ವ್ಯಾಪ್ತಿಯ ಸಮಾನ್ಯ ನಿವಾಸಿಯಾಗಿ ಇದಕ್ಕೆ ಪೂರಕವಾಗಿರುವಂತಹ ದಾಖಲೆಗಳನ್ನು ಅರ್ಜಿಯೊಂದಿಗೆ ಸಲ್ಲಿಸಿದ್ದಲ್ಲಿ ಅಂತಹ ಅರ್ಜಿದಾರರು ಮತದಾರರ ಪಟ್ಟಿಯಲ್ಲಿ ನೋಂದಣಿಗಾಗಿ ಅರ್ಹರಿರುತ್ತಾರೆ.

ಆಯೋಗವು ಮುಂಬರುವ ದಿನಗಳಲ್ಲಿ ನಮೂನೆ 19 ರ ಅರ್ಜಿಗಳನ್ನು ಇಖಒಖ ನಲ್ಲಿ ಅಳವಡಿಸಲು ಉದ್ದೇಶಿಸಿದೆ. ಕರ್ನಾಟಕ ಈಶಾನ್ಯ ಶಿಕ್ಷಕರ ಕ್ಷೇತ್ರದ ಮತದಾರರ ಪಟ್ಟಿ ಸಿದ್ದಪಡಿಸಿಕೊಳ್ಳುವ ಕುರಿತು ಹಾಗೂ ಚುನಾವಣಾ ಪೂರ್ವ ತಯಾರಿ ಮಾಡಿಕೊಳ್ಳುವಂತೆ ಈಗಾಗಲೇ ವಿಭಾಗದ ಎಲ್ಲಾ ಜಿಲ್ಲಾಧಿಕಾರಿಗಳಿಗೂ ಹಾಗೂ ಸಂಬಂಧಪಟ್ಟವರಿಗೂ ಈ ಕಾರ್ಯಾಲಯದಿಂದ ನಿರ್ದೇಶನ ನೀಡಲಾಗಿದೆ. ಕರ್ನಾಟಕ ಈಶಾನ್ಯ ಶಿಕ್ಷಕರ ಮತದಾರರ ಪಟ್ಟಿಗೆ ಸಂಬಂಧಿಸಿದಂತೆ ಆಕ್ಷೇಪಣೆಗಳಿದ್ದಲ್ಲಿ ಮತದಾರರ ನೋಂದಣಾಧಿಕಾರಿಗಳು ಹಾಗೂ ಸಹಾಯಕ ಮತದಾರರ ನೋಂದಣಾಧಿಕಾರಿಗಳ ಕಚೇರಿಯಲ್ಲಿ ಹಾಗೂ ಸಂಬಂಧಪಟ್ಟ ವಿಧಾನಸಭಾ ಸಹಾಯಕ ಮತದಾರರ ನೋಂದಣಾಧಿಕಾರಿಗಳಲ್ಲಿ ನಿಗದಿಪಡಿಸಿದ ಕಾಲಮಿತಿಯಲ್ಲಿ ಸಲ್ಲಿಸಬೇಕು.

ಅರ್ಹ ಶಿಕ್ಷಕರು ಹೆಚ್ಚಿನ ಆಸಕ್ತಿ ವಹಿಸಿ ಈ ಕ್ಷೇತ್ರದ ಮತದಾರರ ಪಟ್ಟಿಯಲ್ಲಿ ತಮ್ಮ ಹೆಸರನ್ನು ನೋಂದಾಯಿಸಿಕೊಂಡು, ಸುಭದ್ರ ಹಾಗೂ ಪ್ರಜಾಪ್ರಭುತ್ವ ವ್ಯವಸ್ಥೆಯನ್ನು ಬಲಪಡಿಸುವಲ್ಲಿ ಸಕ್ರಿಯವಾಗಿ ಪಾಲ್ಗೊಳ್ಳಬೇಕೆಂದು ಈ ಮೂಲಕ ಎಲ್ಲಾ ಅರ್ಹ ಮತದಾರರಲ್ಲಿ ಕಲಬುರಗಿ ವಿಭಾಗದ ಪ್ರಾದೇಶಿಕ ಆಯುಕ್ತರು ಹಾಗೂ ಚುನಾವಣಾಧಿಕಾರಿ ಮತ್ತು ಕರ್ನಾಟಕ ಈಶಾನ್ಯ ಶಿಕ್ಷಕರ ಕ್ಷೇತ್ರದ ಮತದಾರರ ನೋಂದಣಾಧಿಕಾರಿ ಜಹೀರಾ ನಸೀಮ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ರೈತ ಆತ್ಮಹತ್ಯೆ ಕುಟುಂಬದ ಮನೆಗೆ ಕಂದಾಯ ಅಧಿಕಾರಿ ಭೇಟಿ ನೀಡಿ ಸಾಂತ್ವನ



ಮುದ್ದೇಬಿಹಾಳ: ತಾಲ್ಲೂಕಿನ ನೆರಬೆಂಚಿ ಗ್ರಾಮದ ರೈತ ಯಲಗುರೇಶ ಬಸಪ್ಪ ನಾಯಕಮಕ್ಕಳು (36) ಆತ್ಮಹತ್ಯೆ ಮಾಡಿಕೊಂಡ ಘಟನೆ ನಡೆದಿದೆ.

ರೈತ ಸಹಕಾರಿ ಬ್ಯಾಂಕ್ ಸಾಲ 75 ಸಾವಿರ ರೂಪಾಯಿ ಮಾಡಿಕೊಂಡಿದ್ದ,1 ಲಕ್ಷ ರೂ ಖಾಸಗಿ ಸಾಲವನ್ನು ಮಾಡಿದ್ದರಿಂದ ನೊಂದ ಆತ್ಮಹತ್ಯೆ ಮಾಡಿಕೊಂಡಿದ್ದ ಅವರ ಕುಟುಂಬಕ್ಕೆ ಮನೆ ನಾಲತವಾಡ ಕಂದಾಯ ನಿರೀಕ್ಷಕ ವೆಂಕಟೇಶ್ ಅಂಬಿಗರ ಭೇಟಿ ಸಾಂತ್ವನ ನೀಡಿದರು. ಸರಕಾರದಿಂದ ಬರುವ ಪರಿಹಾರ ಕೊಡಿಸುವ ಪ್ರಯತ್ನ ಮಾಡಲಾಗುವುದು ಎಂದು ಹೇಳಿದರು.

ಈ ಸಂದರ್ಭದಲ್ಲಿ ಗ್ರಾಮಾಡಳಿತಧಿಕಾರಿ ಚಂದ್ರಶೇಖರ ಚವ್ಹಾಣ, ಗ್ರಾಪಂ ಕಾರ್ಯದರ್ಶಿ ಅಯ್ಯಪ್ಪ ಮಲಗಲದಿನ್ನಿ, ಗ್ರಾಮ ಸಹಾಯಕ ರಾಮಣ್ಣ ಅರಸನಾಳ, ಸೇರಿದಂತೆ ಉಪಸ್ಥಿತರಿದ್ದರು.

# ದಿ. ರಾಜು ತಾಳಿಕೋಟಿ ಯವರಿಗೆ ಚಿತ್ರ ನಮನ




ಮುದ್ದೇಬಿಹಾಳ :ಉತ್ತರ ಕರ್ನಾಟಕದ ಹಿರಿಯ ಹಾಸ್ಯ ಚತುರ,ವೃತ್ತಿ ರಂಗಭೂಮಿಯ ,ಚಲನ ಚಿತ್ರನಟ,ಹಾಗೂ ಕಲಿಯುಗದ ಕುಡುಕ ಕ್ಯಾಸೆಟ್ ಕಿಂಗ್ ಹಾಗೂ ಧಾರವಾಡ ರಂಗಾಯಣದ ನಿರ್ದೇಶಕರಾದ ಮತ್ತು ಇಂದು ನಿಧನರಾದ ಡಾ.ರಾಜು ತಾಳಿಕೋಟಿ ಇವರಿಗೆ ವಿಜಯಪುರ ಜಿಲ್ಲೆಯ ಮುದ್ದೇಬಿಹಾಳ ತಾಲ್ಲೂಕಿನ ಯರಗಲ್ಲ ಗ್ರಾಮದ ಚಿತ್ರಕಲಾವಿದ ಬಸವರಾಜ ಹಣಮಪ್ಪ ಹಡಪದ ರವರು ಡಾ.ರಾಜು ತಾಳಿಕೋಟಿಯವರ ಭಾವಚಿತ್ರ ಬಿಡಿಸುವ ಮೂಲಕ ಶ್ರದ್ಧಾಂಜಲಿ ಸಲ್ಲಿಸಲಾಯಿತು.

## ಆರ್‌ಎಸ್‌ಎಸ್ ಪಥಸಂಚಲನದಲ್ಲಿ ಗಣವೇಷಧಾರಿಯಾಗಿ ಮಿಂಚಿದ 3 ವರ್ಷದ ಪುಟಾಣಿ ಶ್ರೀರಾಜ ಪ್ರಮೋದ ದೇಸಾಯಿ



ರಾಯಬಾಗ:ಪಟ್ಟಣದಲ್ಲಿ ಇತ್ತೀಚೆಗೆ ನಡೆದ ರಾಷ್ಟ್ರೀಯ ಸ್ವಯಂಸೇವಕ ಸಂಘದ ಪಥಸಂಚಲನದಲ್ಲಿ ಕೇವಲ ಮೂರು ವರ್ಷದ ಪುಟಾಣಿ ಶ್ರೀರಾಜ ಪ್ರಮೋದ ದೇಸಾಯಿ (ಸರಕಾರ) ಗಣವೇಷ ಧಾರಿಯಾಗಿ ಗಮನ ಸೆಳೆದ.
ಹಸ್ತದಲ್ಲಿ ಕೇಸರಿ ಧ್ವಜ ಹಿಡಿದು ಹಿರಿಯ ಸ್ವಯಂಸೇವಕರ ಜೊತೆಗೆ ಶಿಸ್ತಿನಿಂದ ಹೆಜ್ಜೆ ಹಾಕಿದ ಈ ಪುಟಾಣಿಯ ಉತ್ಸಾಹವನ್ನು ಜನರು ಮೆಚ್ಚಿದರು.
ಪೂರ್ತಿ ಪಥಸಂಚಲನದಲ್ಲಿ ಶಿಸ್ತಿನೊಂದಿಗೆ ಭಾಗವಹಿಸಿದ ಶ್ರೀರಾಜನ ಕಾರ್ಯಶೈಲಿ ಎಲ್ಲರ ಮೆಚ್ಚುಗೆಗೆ ಪಾತ್ರವಾಯಿತು.
ಸ್ಥಳೀಯ ಸ್ವಯಂಸೇವಕರು ಹಾಗೂ ನಾಗರಿಕರು "ಈ ತರಹದ ಬಾಲಕರ ಭಾಗವಹಿಸುವಿಕೆ ಸಂಘದ ಸಾಂಸ್ಕೃತಿಕ ಮೌಲ್ಯಗಳನ್ನು ಮುಂದಿನ ತಲೆಮಾರಿಗೆ ಸಾರುವ ಪ್ರಯತ್ನ" ಎಂದು ಸಂತೋಷ ವ್ಯಕ್ತಪಡಿಸಿದರು.

# ಶಿಕ್ಷಣದ ಮೌಲ್ಯ ದೀಪಗಳಿದ್ದಂತೆ-ಪೋತೆ




ತಾಳಿಕೋಟೆ, ಪಟ್ಟಣದ ವೀರಶೈವ ವಿದ್ಯಾವರ್ಧಕ ಸಂಘದ ಶ್ರೀ ಖಾಸ್ಗತೇಶ್ವರ ಕಲಾ, ವಾಣಿಜ್ಯ ಹಾಗೂ ವಿಜ್ಞಾನ ಮಹಾವಿದ್ಯಾಲಯದಲ್ಲಿ ಕರ್ನಾಟಕ ಸಾಹಿತ್ಯ ಅಕಾಡೆಮಿ ಬೆಂಗಳೂರು. ಚಕೋರ ಸಾಹಿತ್ಯ ವಿಚಾರ ವೇದಿಕೆ ವಿಜಯಪುರ ಶ್ರೀಖಾಸ್ಗತೇಶ ಕಲಾ, ವಾಣಿಜ್ಯ ಹಾಗೂ ವಿಜ್ಞಾನ ಮಹಾವಿದ್ಯಾಲಯ ತಾಳಿಕೋಟಿ ಹಾಗೂ ಕನ್ನಡ ವಿಭಾಗ ಇವರ ಸಹಯೋಗದಲ್ಲಿ ವಿಶೇಷ ಉಪನ್ಯಾಸ ಕಾರ್ಯಕ್ರಮ ಏರ್ಪಡಿಸಲಾಗಿತ್ತು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ವ್ಹಿ.ವ್ಹಿ.ಸಂಘ ಹಾಗೂ ಎಸ್.ಕೆ.ಮಹಾವಿದ್ಯಾಲಯದ ಅಧ್ಯಕ್ಷರಾದ ವ್ಹಿ.ಸಿ.ಹಿರೇಮಠ ಅವರು ವಹಿಸಿದ್ದರು.

ವಿಶೇಷ ಉಪನ್ಯಾಸ ಕಾರ್ಯಕ್ರಮವನ್ನು ಉದ್ಘಾಟಿಸಿದ ಹಿರಿಯ ಪ್ರಾಧ್ಯಾಪಕರು ನಿರ್ದೇಶಕರು ಕನ್ನಡ ಅಧ್ಯಯನ ಸಂಸ್ಥೆ ಕಲಬುರಗಿ ವಿಶ್ವವಿದ್ಯಾಲಯದ ಪ್ರೋ. ಎಚ್.ಟಿ.ಪೋತೆ ಅವರು ಮಾತನಾಡಿ ಬುದ್ದ ಹಾಗೂ ಬಸವ, ಅಂಬೆಡ್ಕರ ಮೂರು ಶಕ್ತಿಗಳು ಸಮ ಸಮಾಜದ ನಿರ್ಮಾಣಕರಾಗಿದ್ದಾರೆ ಉತ್ತರ ಕರ್ನಾಟಕದ ಜನರು ಕನ್ನಡ ಸಾಹಿತ್ಯಕ್ಕೆ ಮಹತ್ವದ ಕೊಡುಗೆಯನ್ನು ನೀಡಿದ್ದಾರೆ ಶರಣರ ಮೂಲಕ ಸಾಹಿತ್ಯಕ್ಕೆ ದೊಡ್ಡ ಕೊಡುಗೆ ಸಿಕ್ಕಂತಾಗಿದೆ ಎಂದರು.

ವಿಶೇಷ ಉಪನ್ಯಾಸಕರಾಗಿ ಆಗಮಿಸಿದ ಸಾಹಿತಿ ಡಾ. ಸಂಗಮೇಶ ಮೈತ್ರಿ ಅವರು ಮಾತನಾಡಿ ಶಿಕ್ಷಣದ ಮೌಲ್ಯಗಳು ದೀಪಗಳಿದಂತೆ ಇವು ಜಗತ್ತಿಗೆ ಬೆಳಕು ನೀಡುತ್ತವೆ. ಕನ್ನಡ ಸಾಹಿತ್ಯದಲ್ಲಿ ಮಾನವಿಯ ಶಿಕ್ಷಣ ಇದೆ ಶರಣರು, ದಾಸರು, ಸಂತರು ಕವಿಗಳು ಮಾನವಿಯ ಮೌಲ್ಯಗಳನ್ನು ಈ ಜಗತ್ತಿಗೆ ನೀಡಿದ್ದಾರೆಂದರು.

ಶ್ರೀಮಹಾದೇವ ಬಸರಕೋಡ ಸದಸ್ಯರು ಕನಾಟಕ ಅಕಾಡೆಮಿ ಬೆಂಗಳೂರ ಅವರು ಶಿಕ್ಷಣ ಮೌಲ್ಯಗಳನ್ನು ಕುರಿತು ಶಿವಪಾರ್ವತಿಯರ ಕಥೆ ಮೂಲಕ ಹೇಳಿದರು. ಹಾಗೆ ಕನ್ನಡ ಸಾಹಿತ್ಯವನ್ನು ಮನೆ ಮನಗಳಿಗೆ ಮುಟ್ಟಿಸುವ ಕೆಲಸ ಈ ನಮ್ಮಕನ್ನಡ ಸಾಹಿತ್ಯ ಅಕಾಡೆಮಿ ಮಾಡುತ್ತಿದೆ ಎಂದು ಆಶಯನುಡಿಗಳನ್ನಾಡಿದರು.

ಮುಖ್ಯ ಅತಿಥಿಗಳಾಗಿ ಆಗಮಿಸಿದ ಡಾ.ಶ್ರೀಶೈಲ ನಾಗರಾಳ ಅವರು ಸಾಹಿತ್ಯದಲ್ಲಿ ಜೀವನದ ಮೌಲ್ಯಗಳು ಇವೆ ಹಾಗೆ ಜನಪದ ತಾಯಂದರಲ್ಲಿ ಶಿಕ್ಷಣ ಮೌಲ್ಯಗಳು ಇವೆ ಎಂದರು.

ಎಸ್‌ಕೆ ಮಹಾವಿದ್ಯಾಲಯದ ಪ್ರಾಚಾರ್ಯರಾದ ಡಾ. ದಯಾನಂದ ಬಿ. ಮೂಗಡ್ಲಿಮಠ ಅವರು ಮಾತನಾಡಿ ಶಿಕ್ಷಣವು ಮಾನವಿಯ ಮೌಲ್ಯಗಳು ಕಳೆದುಕೊಳ್ಳತ್ತಿದೆ ಶಿಕ್ಷಣವು ಮಾನವಿಯ ಮೌಲ್ಯಗಳನ್ನು ತುಂಬುವ ತವನಿಧಿ ಯಾಗಬೇಕು ಇದನ್ನು ಕನ್ನಡ ಸಾಹಿತ್ಯವು ತಿಳಿಸುತ್ತದೆ ಎಂದರು.

ಕನ್ನಡ ವಿಭಾಗ ಮುಖ್ಯಸ್ಥರಾದ ಡಾ. ಸುಜಾತಾ ಚಲವಾದಿ ಅವರು ಮಾತನಾಡಿ ಶರಣರ ವಚನಗಳಲ್ಲಿ ಶಿಕ್ಷಣದ ಮೌಲ್ಯಗಳಿವೆ ಎಂದು ಬಸವ ಅಲ್ಲಮರ ವಚನಗಳನ್ನು ಉದಾಹರಣೆ ನೀಡಿದ ಅವರು ಶಿಕ್ಷಣದ ಮೌಲ್ಯಗಳ ಕುರಿತು ವಿವರಿಸಿದರು.

ಅಜೇಯ ಅಬ್ಬಾರ ಅವರು ಸ್ವಾಗತಿಸಿದರು. ಶ್ರೀಮತಿ ಎಸ್. ಜಿ. ಕೊಡೆಕಲ್ಲಮಠ ನಿರೂಪಿಸಿದರು. ಕುಮಾರ ಸಾಹೇಬಗೌಡ ಕಡದರಾಳ ವಂದಿಸಿದರು.

## ಬಂಕಾಪುರ ನಗರದ ಸ್ವಚ್ಛತೆ ಕಾಮಗಾರಿಗಳ ಪರಿಶೀಲಿಸಿದ ಜಿಲ್ಲಾಧಿಕಾರಿ



ಹಾವೇರಿ: : ಬಂಕಾಪುರ ಪುರಸಭೆ ಕಾರ್ಯಾಲಯ ಹಾಗೂ ನಾಡಕಚೇರಿಗೆ ಬುಧವಾರ ಜಿಲ್ಲಾಧಿಕಾರಿ ಡಾ. ವಿಜಯಮಹಾಂತೇಶ್ ದಾನಮ್ಮನವರ ಭೇಟಿ ನೀಡಿ ಪರಿಶೀಲಿಸಿದರು.

ಪುರಸಭೆ ಕಾರ್ಯಾಲಯದಲ್ಲಿನ ಸಿಬ್ಬಂದಿಗಳ ಕಾರ್ಯನಿರ್ವಹಣೆ, ಸ್ವಚ್ಛತೆ, ಸಾರ್ವಜನಿಕ ಕುಂದು ಕೊರತೆಯನ್ನು ಜಿಲ್ಲಾಧಿಕಾರಿಗಳು ಆಲಿಸಿದರು ಹಾಗೆಯೇ ಈಗಿರುವ ಹಳೆಯ ನಾಡ ಕಚೇರಿಯನ್ನು ವೀಕ್ಷಿಸಿ ಕಚೇರಿಯ ದುರಸ್ತಿ ಕಾರ್ಯವನ್ನು ಆದಷ್ಟು ಬೇಗನೆ ಮುಗಿಸಿ ಸಿಬ್ಬಂದಿಗಳ ಉಪಯೋಗಕ್ಕೆ ಅನುಕೂಲ ಮಾಡಿಕೊಡುವಂತೆ ಸೂಚಿಸಿದರು. ನಾಡಕಛೇರಿಯ ಕಾರ್ಯವೈಕರಿಯನ್ನು ಪರಿಶೀಲಿಸಿ ಸಾರ್ವಜನಿಕ ಸೇವೆಗಳು ಸಕಾಲದಲ್ಲಿ ಸಿಗುವಂತೆ ಕಾರ್ಯನಿರ್ವಹಿಸಬೇಕು ಎಂದು ಸಿಬ್ಬಂದಿಗಳು ಅಗತ್ಯ ಸಲಹೆ ಸೂಚನೆ ನೀಡಿದರು ಬಳಿಕ ಬಂಕಾಪುರ ನಗರ ಪ್ರಾದೇಶದಲ್ಲಿ ಸುತ್ತಾಡಿ ಚಾಲ್ತಿಯಲಿರುವ ವಿವಿಧ ಕಾಮಗಾರಿಗಳನ್ನು ವೀಕ್ಷಿಸಿ ನಗರದ ಸ್ವಚ್ಛತೆಯನ್ನು ಪರಿಶೀಲಿಸಿ, ನಗರವನ್ನು ಆದಷ್ಟು ಸುಂದರವಾಗಿಟ್ಟುಕೊಳ್ಳಿ ನಗರದ ಸ್ವಚ್ಛತೆಗೆ ಹೆಚ್ಚು ಆದ್ಯತೆ ನೀಡಿ ಎಂದು ಪುರಸಭೆ ಮುಖ್ಯಾಧಿಕಾರಿಗೆ ಸೂಚನೆ ನೀಡಿದರು.

ಈ ಸಂದರ್ಭದಲ್ಲಿ ಬಂಕಾಪುರ ಪುರಸಭೆಯ ಮುಖ್ಯಾಧಿಕಾರಿ ಶಿವಾನಂದ ಅಜ್ಜನವರ, ಉಪ ತಹಸೀಲ್ದಾರ ವೆಂಕಟೇಶ ಕುಲಕರ್ಣಿ ಹಾಗೂ ವಿವಿಧ ಇಲಾಖೆಯ ಅಧಿಕಾರಿಗಳು ಉಪಸ್ಥಿತರಿದ್ದರು.

***

## ಸಮುದಾಯ ಭವನ ನಿರ್ಮಾನ ಕಾಮಗಾರಿಗೆ ಭೂಮಿ ಪೂಜೆ



ಯರಗಟ್ಟಿ : ಸಮುದಾಯ ಭವನಗಳು ಸಾಮಾಜಿಕ ಸಂಘಟನೆ, ಸಮಾಜದ ಏಳಿಗೆಗಾಗಿ ಬಳಕೆಯಾಗಬೇಕು ಎಂದು ಶಾಸಕ ವಿಶ್ವಾಸ ವೈದ್ಯ ಹೇಳಿದರು.
ಸಮೀಪದ ಜೀವಾಪೂರ ಗ್ರಾಮದಲ್ಲಿ ಈಚಗೆ ಹಮ್ಮಿಕೊಂಡಿದ್ದ ಪಂಚಾಯತ್ ರಾಜ ಇಂಜನಿಯರಿಂಗ ಇಲಾಖೆ ಉಪ ವಿಭಾಗ ಸವದತ್ತಿ 2025. 26ನೇ ಸಾಲಿನ ಶಾಸಕರ ಅನುದಾನದಡಿ ಶ್ರೀ ಬಸವೇಶ್ವರ ದೇವಸ್ಥಾನದ ಹತ್ತಿರ ಸಮುದಾಯ ಭವನ ನಿರ್ಮಾನ ಕಾಮಗಾರಿಗೆ ಭೂಮಿ ಪೂಜೆ ನೆರವೇರಿಸಿ ಮಾತನಾಡಿದ ಅವರು, ಯುವ ಮಿತ್ರರು ಸಮಾಜದ ಅಬಿವೃದ್ಧಿಗೆ ಪೂರ್ವಕವಾದ ಕರ್ಯ ಚಟುವಟಿಕೆಗಳನ್ನು ಮಾಡಬೇಕು. ವಿಶ್ವಕ್ಕೆ ಬುಧ್ಧ, ಬಸವ, ಅಂಬೇಡ್ಕರ ಅವರ ಕೊಡುಗೆ ಅಪಾರವಾಗಿದ್ದು, ಅವರ ತತ್ವಾದರ್ಶಗಳನ್ನು ಪಾಲನೆ ಮಾಡಬೇಕು ಎಂದರು.
ಕಾಂಗ್ರೆಸ ಮುಖಂಡ ವೆಂಕಣ್ಣ ಯರಡ್ಡಿ, ಮಾತನಾಡಿ, ಗ್ರಾಮಗಳ ಮೂಲಭೂತ ಸೌಕರ್ಯಗಳ ಅಭಿವೃದ್ಧಿಗೆ ಸಾರ್ವಜನಿಕರ ಸಹಕಾರ ಅತಿ ಮುಖ್ಯವಾಗಿದೆ ಎಂದು ಹೇಳಿದರು.
ಮುನವಳ್ಳಿ ಸೋಮಶೇಖರಮಠದ ಮುರುಘೇಂದ್ರ ಸ್ವಾಮೀಜಿ, ಶಂಕರಯ್ಯ ಹಿರೇಮಠ, ಮುಖಂಡ ಕಲ್ಮೇಶ ಬಾಲರಡ್ಡಿ, ಮುತ್ತನಗೌಡ ನಾಯ್ಕರ, ಗೌಡಪ್ಪ ನಾಯ್ಕರ, ಸದಾಶಿವ ಗೋಪಾಳಿ, ಪುಟ್ಟು ಅರಳಿಕಟ್ಟಿ, ಕೃಷ್ಣ ಅರೆಬೆಂಚಿ, ಸುರೇಶ ಅರಳಿಕಟ್ಟಿ, ಬಸವರಾಜ ಗಿರೆಡ್ಡಿ, ಗಿರೀಶ ಯರಡ್ಡಿ, ಬಸಪ್ಪ ಕಮಕೇರಿ, ಕೃಷ್ಣ ಚೌರಡ್ಡಿ, ಶೇಟ್ಟೆಪ್ಪ ಮಾದರ, ಬಸವರಾಜ ತಳವಾರ, ರಮೇಶ ನರಿ, ಪ್ರವೀಣ ಯರಡ್ಡಿ, ಹನಮಂತ ರಂಗನ್ನವರ, ರಮೇಶ ಅರಳಿಕಟ್ಟಿ, ಸಚೀನ ಅಳಗೋಡಿ, ಯಂಕಣ್ಣಾ ಕಳ್ಳಿಗುದ್ದಿ ಸೇರಿದಂತೆ ಕಾರ್ಯಕರ್ತರು ಇದ್ದರು.

## ಸಾರಿಗೆ ಬಸ್‌ಗೆ ಟಿಪ್ಪರ್ ಡಿಕ್ಕಿ ಪ್ರಯಾಣಿಕರಿಗೆ ಗಂಭೀರ ಗಾಯ



ಯರಗಟ್ಟಿ: ತಾಲೂಕಿನ ಮಬನೂರ ಕ್ರಾಸ್ ಹತ್ತಿರ ಕೆ.ಎಸ್.ಆರ್.ಟಿ.ಸಿ. ಬಸ್ ಗೆ ಟಿಪ್ಪರ್ ಡಿಕ್ಕಿ ಹೊಡೆದ ಪರಿಣಾಮ ಪ್ರಯಾಣಿಕರ ಸ್ಥಿತಿ ಗಂಭೀರವಾಗಿದ್ದು, ಯರಗಟ್ಟಿ, ಗೋಕಾಕ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದಾರೆ.

ಬೆಂಗಳೂರಿನಿಂದ ಸವದತ್ತಿ, ಯರಗಟ್ಟಿ ಮಾರ್ಗವಾಗಿ ಅಥಣಿಗೆ ಹೋಗುತ್ತಿದ್ದ ಸಾರಿಗೆ ಬಸ್ ಗೆ ಹಿಂದಿನಿಂದ ವೇಗವಾಗಿ ಬಂದ್ ಟಿಪ್ಪರ್ ಡಿಕ್ಕಿ ಹೊಡೆದಿದೆ. ಬಸ್ಸಿನಲ್ಲಿದ್ದ 20ಜನ ಪ್ರಯಾಣಿಕರಿ ಸಣ್ಣಪುಟ್ಟ ಗಾಯಗಳಾಗಿವೆ. 7 ಜನರಿಗೆ ತೀವ್ರ ಪೆಟ್ಟಾಗಿದ್ದು, ಹೆಚ್ಚಿನ ಚಿಕಿತ್ಸೆಗಾಗಿ ಗೋಕಾಕ ಆಸ್ಪತ್ರೆಗೆ ದಾಖಲಿಸಲಾಗಿದೆ. ಕೆಲವರನ್ನು ಯರಗಟ್ಟಿ ಸಮುದಾಯ ಆರೋಗ್ಯ ಕೇಂದ್ರದಲ್ಲಿ ಚಿಕಿತ್ಸೆ ಪಡೆಯುತ್ತಿದ್ದಾರೆ..

ಅಪಘಾತ ಕುರಿತು ಮಾಹಿತಿ ನೀಡಿದರುಪೊಲೀಸರು, ಆಂಬುಲೆನ್ಸ್ ಸಿಬ್ಬಂದಿ ಸ್ಪಂದಿಸಿಲ್ಲ. ಗ್ರಾಮಸ್ಥರೇ ತಮ್ಮ ಸ್ವಂತ ವಾಹನಗಳಲ್ಲಿ ಆಸ್ಪತ್ರೆಗೆ ದಾಖಲಿಸಿ ಮಾನವೀಯತೆ ತೋರಿಸಿದ್ದಾರೆ. ಆದರೆ, ಪೊಲೀಸರ ವರ್ತನೆಗೆ



ಗ್ರಾಮಸ್ಥರು ಆಕ್ರೋಸ ಹೊರ ಹಾಕಿದ್ದಾರೆ.ಈ ಕುರಿತು ಸವದತ್ತಿ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

## ನಾಳೆ ಬಾಲಕ-ಬಾಲಕಿಯರ ಖೋ-ಖೋ ಪಂದ್ಯಾವಳಿ

ತಾಳಿಕೋಟೆ, ಜಿಲ್ಲಾ ಪಂಚಾಯತ, ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ, ವಿಜಯಪುರ ಕ್ಷೇತ್ರ ಶಿಕ್ಷಣಾಧಿಕಾರಿಗಳ ಹಾಗೂ ಕ್ಷೇತ್ರ ಸಮನ್ವಯಾಧಿಕಾರಿಗಳ ಕಾರ್ಯಾಲಯ, ಮುದ್ದೇಬಿಹಾಳ ಹಾಗೂ ಬ್ರಿಲಿಯಂಟ್ ಕನ್ನಡ ಮತ್ತು ಆಂಗ್ಲ ಮಾಧ್ಯಮ ಪ್ರಾಥಮಿಕ ಹಾಗೂ ಪ್ರೌಢಶಾಲೆ ಮೈಲೇಶ್ವರ(ತಾಳಿಕೋಟಿ) ಇವರ ಸಹಯೋಗದಲ್ಲಿ ಜಿಲ್ಲಾ ಮಟ್ಟದ ಪ್ರಾಥಮಿಕ ಹಾಗೂ ಪ್ರೌಢಶಾಲೆಗಳ ಬಾಲಕ-ಬಾಲಕಿಯರ ಖೋ-ಖೋ ಪಂದ್ಯಾವಳಿ ನಾಳೆ (ಅ.17)ರಂದು ನಡೆಯಲಿದೆ.
ಅಂದು ಬೆಳಿಗ್ಗೆ 8.30 ಘಂಟೆಗೆ ಮೈಲೇಶ್ವರದ ಬ್ರಿಲಿಯಂಟ್ ಶಾಲಾ ಆವರಣದಲ್ಲಿ ನಡೆಯಲಿರುವ
ಈ ಪಂದ್ಯಾವಳಿಯ ಉದ್ಘಾಟನಾ ಕಾರ್ಯಕ್ರಮದಲ್ಲಿ ಜಿಲ್ಲಾ ದೈಹಿಕ ಶಿಕ್ಷಣ ಪರಿವೀಕ್ಷಕರು ಹಾಗೂ ಜಿಲ್ಲಾ ಮಟ್ಟದ ಅಧಿಕಾರಿಗಳು ಮತ್ತು ಮುದ್ದೇಬಿಹಾಳ ತಾಲೂಕಿನ ಕ್ಷೇತ್ರ ಶಿಕ್ಷಣಾಧಿಕಾರಿಗಳು, ದೈಹಿಕ ಶಿಕ್ಷಣ ಪರಿವೀಕ್ಷಕರು ಹಾಗೂ ಜಿಲ್ಲೆಯ ಎಲ್ಲಾ ತಾಲೂಕುಗಳ ದೈಹಿಕ ಶಿಕ್ಷಣ ಪರಿವೀಕ್ಷಕರು, ಕರ್ನಾಟಕ ರಾಜ್ಯ ದೈಹಿಕ ಶಿಕ್ಷಣ ಶಿಕ್ಷಕರ ಸಂಘದ ಜಿಲ್ಲಾಧ್ಯಕ್ಷರು ಹಾಗೂ ಸರ್ವ ಸದಸ್ಯರು, ಎಲ್ಲಾ ತಾಲೂಕಿನ ದೈಹಿಕ ಶಿಕ್ಷಣ ಶಿಕ್ಷಕರ ಸಂಘದ ಅಧ್ಯಕ್ಷರು ಹಾಗೂ ಸರ್ವ ಸದಸ್ಯರು, ವಿವಿಧ ಸಂಘ ಸಂಸ್ಥೆಗಳ ಅಧ್ಯಕ್ಷರು, ಶ್ರೀ ಮಾರುತಿ ಶಿಕ್ಷಣ ಸಂಸ್ಥೆಯ ಅಧ್ಯಕ್ಷರು ಹಾಗೂ ಆಡಳಿತ ಮಂಡಳಿಯ ಸದಸ್ಯರು, ಶಾಲೆಯ ಮುಖ್ಯೋಪಾಧ್ಯಾಯರು ಸಿಬ್ಬಂದಿ ವರ್ಗ, ಕ್ರೀಡಾಪಟುಗಳು ಹಾಗೂ ತರಬೇತುದಾರರು ಉಪಸ್ಥಿತರಿರುವರು.

## ಅ.17 ರಂದು ಶಿಶಿಕ್ಷು ಮೇಳ

ಹಾವೇರಿ: : ಹಾವೇರಿ ಸರ್ಕಾರಿ ಕೈಗಾರಿಕಾ ತರಬೇತಿ ಸಂಸ್ಥೆಯಿಂದ ಶಿಶಿಕ್ಷು ಮೇಳವನ್ನು ಅಕ್ಟೋಬರ್ 17 ರಂದು ಬೆಳಿಗ್ಗೆ 9 ಗಂಟೆಗೆ ಹಾವೇರಿ ನಗರದ ಸರ್ಕಾರಿ ಕೈಗಾರಿಕಾ ತರಬೇತಿ ಸಂಸ್ಥೆಯಲ್ಲಿ ಆಯೋಜಿಸಲಾಗಿದೆ.
ಈವರೆಗೆ 850 ಶಿಶಿಕ್ಷು(ಅಪ್ರೆಂಟಿಸ್) ತರಬೇತಿದಾರರು ಹಾಗೂ 15 ಉದ್ಯೋಗದಾತರು ನೋಂದಣಿಯಾಗಿರುತ್ತದೆ. ಶಿಶಿಕ್ಷು ತರಬೇತಿ ನೋಂದಣಿಗೆ **https://apprenticeshipindia.org** ಹಾಗೂ ಉದ್ಯೋಗದಾತರು **https://apprenticeshipindia.org**ನಲ್ಲಿ ನೋಂದಾಯಿಸಿಕೊಳ್ಳಬೇಕು. ಹೆಚ್ಚಿನ ಮಾಹಿತಿಗಾಗಿ **pplgovtitihaveri@gmail.com** ಮೊ.98444 78719, 99869 69725 ಹಾಗೂ 98806 23036ಸಂಪರ್ಕಿಸಲು ಸರ್ಕಾರಿ ಕೈಗಾರಿಕಾ ತರಬೇತಿ ಸಂಸ್ಥೆ ಪ್ರಾಚಾರ್ಯರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ವೃದ್ಧ ಕಾಣೆ

ಹಾವೇರಿ: : ಬ್ಯಾಡಗಿ ತಾಲೂಕು ಕದರಮಂಡಲಗಿ ಗ್ರಾಮದ 80 ವರ್ಷದ ಕರಿಯಪ್ಪ ನಿಂಗಪ್ಪ ಅಸುಂಡಿ ಎಂಬ ವೃದ್ಧ 14 ಸೆಪ್ಟೆಂಬರ್ 25 ರಂದು ಮನೆಯಿಂದ ಹೋದವರು ಕಾಣೆಯಾಗಿರುವುದಾಗಿ ಬ್ಯಾಡಗಿ ಪೊಲೀಸ್ ಠಾಣೆಯಲ್ಲಿ ದೂರು ದಾಖಲಿಸಲಾಗಿದೆ.
ಕಾಣೆಯಾದ ವೃದ್ಧ 5.5 ಅಡಿ ಎತ್ತರ, ಸಾಧಾರಣ ಮೈಕಟ್ಟು, ಗೋದಿ ಮೈಬಣ್ಣ, ಕೋಲುಮುಖ ಹೊಂದಿದ್ದು, ಬಿಳಿ ಬಣ್ಣದ ಶರ್ಟ್ ಹಾಗೂ ಬಿಳಿ ಬಣ್ಣದ ಕಚ್ಚೆಪಂಚೆ ಧರಿಸಿದ್ದಾರೆ. ಈ ವ್ಯಕ್ತಿಯ ಮಾಹಿತಿ ದೊರೆತಲ್ಲಿ ಬ್ಯಾಡಗಿ ಪೊಲೀಸ್ ಠಾಣೆ ದೂ.08375-228333 ಅಥವಾ 9480804548 ಅಥವಾ ಕಂಟ್ರೋಲ್ ರೂಂ.ದೂ.112 ಸಂಪರ್ಕಿಸಬಹುದೆಂದು ಬ್ಯಾಡಗಿ ಪೊಲೀಸ್ ಠಾಣೆ ಪೊಲೀಸ್ ಉಪ ನಿರೀಕ್ಷಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ತಂಬಾಕು ಮುಕ್ತ ಯುವ ಅಭಿಯಾನ ಸಮರ್ಪಕ ಅನುಷ್ಠಾನಕ್ಕೆ ಸೂಚನೆ -ಜಿಲ್ಲಾಧಿಕಾರಿ



ಹಾವೇರಿ: ಜಿಲ್ಲೆಯಲ್ಲಿ ತಂಬಾಕು ಮುಕ್ತ ಯುವ ಅಭಿಯಾನ 3.0ನ್ನು ಸಮರ್ಪಕವಾಗಿ ಅನುಸ್ಠಾನ ಮಾಡಬೇಕು ಎಂದು ಅಧಿಕಾರಿಗಳಿಗೆ ಜಿಲ್ಲಾಧಿಕಾರಿ ಡಾ.ವಿಜಯಮಹಾಂತೇಶ ದಾನಮ್ಮನವರ ಅವರು ಸೂಚನೆ ನೀಡಿದರು.
ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಮಂಗಳವಾರ ಜರುಗಿದ ತಂಬಾಕು ಮುಕ್ತ ಯುವ ಅಭಿಯಾನ 3.0ದ ಕುರಿತ ಸಭೆ ಅಧ್ಯಕ್ಷತೆವಹಿಸಿ ಮಾತನಾಡಿದ ಅವರು, ಸಾರ್ವಜನಿಕ ಸ್ಥಳಗಳಲ್ಲಿ, ಬಸ್ ನಿಲ್ದಾಣ, ಶಾಲಾ-ಕಾಲೇಜುಗಳಲ್ಲಿ ತಂಬಾಕು ಉತ್ಪನ್ನಗಳ ದುಷ್ಪರಿಣಾಮ ಕುರಿತು ಜಾಗೃತಿ ಮೂಡಿಸುವ ಮೂಲಕ ಸಮಾಜದಲ್ಲಿ ಬದಲಾವಣೆ ತರಬೇಕು ಎಂದರು.
ಬಸ್ ನಿಲ್ದಾಣ ಹಾಗೂ ಸಿನೆಮಾ ಥೇಟರ್‌ಗಳಿಗೆ ಅನಿರೀಕ್ಷಿತ ಭೇಟಿ ನೀಡಿ, ಪರಿಶೀಲನೆ ನಡೆಸಿ ಸ್ವಚ್ಛತೆಗೆ ಆದ್ಯತೆ ನೀಡುವಂತೆ ನೋಟೀಸ್ ನೀಡಬೇಕು. ಆರೋಗ್ಯ ಇಲಾಖೆ, ಪೊಲೀಸ್, ಶಿಕ್ಷಣ ಇಲಾಖೆ, ಪಂಚಾಯತ್ ರಾಜ್ ಸೇರಿದಂತೆ ವಿವಿಧ ಇಲಾಖೆಗಳು ಸಮನ್ವಯದಿಂದ ಕಾರ್ಯನಿರ್ವಹಿಸಬೇಕು ಎಂದು ಸೂಚಿಸಿದರು. ಜಿಲ್ಲಾ ತಂಬಾಕು ನಿಯಂತ್ರಣ ಕೋಶ ಸಲಹೆಗಾರ ಡಾ.ಸಂತೋಷ ದಡ್ಡಿ ಅವರು ಮಾತನಾಡಿ, ಜಿಲ್ಲೆಯಲ್ಲಿ ತಂಬಾಕು ಮುಕ್ತ ಯುವ ಅಭಿಯಾನ 3.0 ಅಕ್ಟೋಬರ್ 18 ರಿಂದ ಡಿಸೆಂಬರ್ 17ರವರೆಗೆ ಜರುಗಲಿದ್ದು, ಆರೋಗ್ಯ ಶಿಕ್ಷಣ, ಶಾಲಾ ಮಕ್ಕಳಿಂದ ಪ್ರಭಾತಫೇರಿ ಮೂಲಕ ಜಾಗೃತಿ, 400 ತಂಬಾಕು ಮುಕ್ತ ಶಾಲೆ, ಕನಿಷ್ಠ 30 ಗ್ರಾಮಗಳನ್ನು ತಂಬಾಕು ಮುಕ್ತ ಗ್ರಾಮಗಳನ್ನಾಗಿ ಘೋಷಿಸುವುದು, ಗ್ರಾಮ ಪಂಚಾಯತಿ ಮೂಲಕ ಸರಪಂಚರು ಮತ್ತು ಗ್ರಾಮ ಕಾರ್ಯಕರ್ತರಿಗೆ ವಿವಿಧ ಚಟುವಟಿಕೆಗಳ ಮೂಲಕ ಜಾಗೃತಿ ಮೂಡಿಸುವುದು, ಪೊಲೀಸ್ ಇಲಾಖೆ ಮೂಲಕ ಜಾಗೃತಿ ಕಾರ್ಯಕ್ರಮ ಸೇರಿದಂತೆ ವಿವಿಧ ಚಟುವಟಿಕೆಗಳನ್ನು ಹಮ್ಮಿಕೊಳ್ಳಲಾಗುತ್ತಿದೆ. ತಂಬಾಕು ಮುಕ್ತ ಯುವ ಅಭಿಯಾನ 3.0ರ ಕಾರ್ಯ ಚಟುವಟಿಕೆಯನ್ನು ಜಿಲ್ಲಾ ವೆಬ್‌ಸೈಟ್ ಹಾಗೂ ಅಧಿಕಾರಗಳ ವಾಟ್ಸಾಪ್ ಗ್ರೂಪ್‌ನಲ್ಲಿ ಅಪ್‌ಲೋಡ್ ಮಾಡುವ ಮೂಲಕ ವ್ಯಾಪಕ ಪ್ರಚಾರ ಮಾಡಲು ಉದ್ದೇಶಿಸಲಾಗಿದೆ ಎಂದು ಸಭೆಗೆ ಮಾಹಿತಿ ನೀಡಿದರು.
ಸಭೆಯಲ್ಲಿ ಜಿಲ್ಲಾ ಪಂಚಾಯತ್ ಯೋಜನಾ ನಿರ್ದೇಶಕ ಎಚ್.ವೈ.ಮೀಸೆ, ಪದವಿ ಪೂರ್ವ ಶಿಕ್ಷಣ ಇಲಾಖೆ ಉಪನಿರ್ದೇಶಕ ಅಶೋಕ ಶಾಸ್ತ್ರೀ, ತಾಲೂಕಾ ಆರೋಗ್ಯಾಧಿಕಾರಿ ಡಾ.ಪ್ರಭಾಕರ ಕುಂದೂರ, ಹಾವೇರಿ ಗ್ರಾಮೀಣ ವೃತ್ತ ಸಿಪಿಐ ಸಂತೋಷ ಪ್ರವಾರ, ವಿವಿಧ ಇಲಾಖೆ ಅಧಿಕಾರಿಗಳು, ತಾಲೂಕಾ ಆರೋಗ್ಯಾಧಿಕಾರಿಗಳು ಉಪಸ್ಥಿತರಿದ್ದರು.

## ಕೃಷಿ ಸಖಿಯರಿಗೆ ಕೆಎಲ್‌ಇ ಕೃಷಿ ವಿಜ್ಞಾನ ಕೇಂದ್ರದಲ್ಲಿ ನೈಸರ್ಗಿಕ ಕೃಷಿ ತರಬೇತಿ



ನೇಸರಗಿ: ಮತ್ತಿಕೊಪ್ಪದ ಐಸಿಎಆರ್-ಕೆಎಲ್‌ಇ ಕೃಷಿ ವಿಜ್ಞಾನ ಕೇಂದ್ರದಲ್ಲಿ ಸಮೂಹ ಸಂಪನ್ಮೂಲ ವ್ಯಕ್ತಿಗಳಾದ ಕೃಷಿ ಸಖಿಯರಿಗೆ ನೈಸರ್ಗಿಕ ಕೃಷಿ ತರಬೇತಿಯನ್ನು ಹಮ್ಮಿಕೊಂಡಿದ್ದು, ತರಬೇತಿ ಕಾರ್ಯಕ್ರಮವನ್ನು ಬೆಳಗಾವಿ ಜಿಲ್ಲೆಯ ಜಂಟಿ ಕೃಷಿ ನಿರ್ದೇಶಕ ಶ್ರೀ ಹೆಚ್. ಡಿ. ಕೋಳೇಕರ ಉದ್ಘಾಟಿಸಿದರು. ನಂತರ ನೈಸರ್ಗಿಕ ಕೃಷಿಯ ಕುರಿತು ಮಾತನಾಡಿ, ಕೇಂದ್ರದ ಮಹತ್ವಾಕಾಂಕ್ಷಿ ಯೋಜನೆಯಾದ ನೈಸರ್ಗಿಕ ಕೃಷಿ ಅನುಷ್ಠಾನಗೊಳಿಸಲು ಕೃಷಿ ಸಖಿಯರಿಗೆ ಐದು ದಿನಗಳ ತರಬೇತಿ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ. ಬೆಳಗಾವಿ ಜಿಲ್ಲೆಯಲ್ಲಿ 6875 ಎಕರೆ ಕ್ಷೇತ್ರದಲ್ಲಿ ನೈಸರ್ಗಿಕ ಕೃಷಿಯನ್ನು ಅನುಷ್ಠಾನಗೊಳಿಸುವ ಗುರಿಯನ್ನು ಹೊಂದಿದೆ. ನೈಸರ್ಗಿಕ ಕೃಷಿ ರೈತರ ಹೊಲದಲ್ಲಿಯೇ ಲಭ್ಯವಿರುವ ಸಂಪನ್ಮೂಲಗಳನ್ನು ಬಳಸಿ ಕಡಿಮೆ ಖರ್ಚಿನಲ್ಲಿ ಅಳವಡಿಸಬಹುದಾದ ರಾಸಾಯನಿಕ ಮುಕ್ತ ಕೃಷಿ ಪದ್ಧತಿಯಾಗಿದೆ. ಈ ಕೃಷಿಯಲ್ಲಿ ನಾಲ್ಕು ಮೂಲ ತತ್ವಗಳಾದ ಬೀಜಾಮೃತ, ಜೀವಾಮೃತ, ಬೆಳೆಗಳ ಹೊದಿಕೆ ಮತ್ತು ವಾಫಸಾ ಆಧಾರದಲ್ಲಿ ಸಸ್ಯಗಳಿಗೆ ಬೇಕಾಗುವ ಪೋಷಕಾಂಶಗಳನ್ನು ಪೂರೈಸುವ ಸೂಕ್ಷ್ಮಾಣು ಜೀವಿಗಳನ್ನು ಹಾಗೂ ನೈಸರ್ಗಿಕ ಎರೆಹುಳುಗಳ ಅಭಿವೃದ್ಧಿಯನ್ನು ಪ್ರೋತ್ಸಾಹಿಸಲಾಗುವುದು. ನೈಸರ್ಗಿಕ ಕೃಷಿಯಲ್ಲಿ ಹಸು ಮೂಲ ಆಧಾರವಾಗಿದ್ದು ಹಸುವಿನ ಸಗಣಿ ಮತ್ತು ಗಂಜಲುಗಳನ್ನು ಬಳಸಿ ನೈಸರ್ಗಿಕ ಕೃಷಿ ಪರಿಕರಗಳನ್ನು ತಯಾರಿಸಿ ಬಳಸಲಾಗುವುದು. ಆದ್ದರಿಂದ ದೇಸಿ ಹಸುಗಳನ್ನು ಸಂರಕ್ಷಿಸಿ ಪಾಲನೆ ಮಾಡಬೇಕೆಂದು ಕರೆ ನೀಡಿದರು.
ಕೇಂದ್ರದ ಕಾರ್ಯಾಧ್ಯಕ್ಷರಾದ ಶ್ರೀ ಬಿ. ಆರ್. ಪಾಟೀಲ ಕಾರ್ಯಕ್ರಮದ ಅಧ್ಯಕ್ಷತೆಯನ್ನು ವಹಿಸಿ ನಂತರ ಮಾತನಾಡಿದ, ನೈಸರ್ಗಿಕ ಕೃಷಿ ಅನುಸರಣೆಯಿಂದ ರೈತರು ತಮ್ಮ ಕುಟುಂಬದ ಆರೋಗ್ಯವನ್ನು ರಕ್ಷಿಸಿ, ಆರ್ಥಿಕವಾಗಿ ಸಬಲರಾಗುವ ಮೂಲಕ ಆರೋಗ್ಯಕರ ಸಮಾಜ ನಿರ್ಮಾಣಕ್ಕೆ ಸಹಕಾರಿಯಾಗಬೇಕು ಎಂದರು. ಕೃಷಿ ಸಖಿಯರು ಕೃಷಿ ಇಲಾಖೆಯಲ್ಲಿ ವಿಸ್ತರಣಾ ಕಾರ್ಯಕರ್ತೆಯರಾಗಿ ರೈತ ಮತ್ತು ಕೃಷಿ ವಿಜ್ಞಾನ ಕೇಂದ್ರಗಳ ನಡುವೆ ಸೇತುವೆಯಾಗಿ ಕೆಲಸ ನಿರ್ವಹಿಸುತ್ತಿರುವ ಕೃಷಿ ಸಖಿಯರು ಗ್ರಾಮ ಪಂಚಾಯತಿ ಮಟ್ಟದಲ್ಲಿ ನೈಸರ್ಗಿಕ ಕೃಷಿ ಪ್ರಾತ್ಯಕ್ಷಿಕೆಗಳನ್ನು ನಡೆಸುವ ಉಸ್ತುವಾರಿ ಹೊಂದಿರುತ್ತಾರೆ. ಅವರ ಸಾಮರ್ಥ್ಯವನ್ನು ಹೆಚ್ಚಿಸಲು ತರಬೇತಿಯನ್ನು ಹಮ್ಮಿಕೊಳ್ಳಲಾಗಿದೆ. ಕೃಷಿ ಸಖಿಯರು ತರಬೇತಿಯಲ್ಲಿ ಕಲಿತ ವಿಷಯಗಳನ್ನು ರೈತರಿಗೆ ತಿಳಿಸಿ ಈ ಯೋಜನೆಯನ್ನು ಸಮರ್ಥವಾಗಿ ಅಳವಡಿಸಿ ರಾಸಾಯನಿಕ ಮುಕ್ತ ಕೃಷಿಯನ್ನು ಉತ್ತೇಜಿಸಬೇಕು ಎಂದು ಕರೆ ನೀಡಿದರು.
ಕೇಂದ್ರದ ಮುಖ್ಯಸ್ಥ ಡಾ. ಮಂಜುನಾಥ ಚೌರಡ್ಡಿ ಮಾತನಾಡಿ, ರಾಷ್ಟ್ರೀಯ ನೈಸರ್ಗಿಕ ಕೃಷಿಯ ಅಭಿಯಾನದಡಿ ಇಡಿ ಬೆಳಗಾವಿ ಜಿಲ್ಲೆಯಲ್ಲಿ ಕಾರ್ಯಕ್ರಮವನ್ನು ಅನುಷ್ಠಾನಗೊಳಿಸಲು ತರಬೇತಿ ಜವಾಬ್ದಾರಿಯನ್ನು ಕೆಎಲ್‌ಇ ಕೃಷಿ ವಿಜ್ಞಾನ ಕೇಂದ್ರಕ್ಕೆ ನೀಡಲಾಗಿದೆ. ಕಾರ್ಯಕ್ರಮದ ಭಾಗವಾಗಿ ಕೃಷಿ ಸಖಿಯರಿಗೆ ಪ್ರಾಯೋಗಿಕವಾಗಿ ತರಬೇತಿ ನೀಡಲು ಕೇಂದ್ರದಲ್ಲಿ ನೈಸರ್ಗಿಕ ಕೃಷಿ ಪ್ರಾತ್ಯಕ್ಷಿಕೆ ಪರಿಕರಗಳ ಉತ್ಪಾದನೆ ಘಟಕ ಹಾಗೂ ಸಸ್ಯ ಅನುಷ್ಠಾನಗೊಳಿಸಲಾಗಿದೆ.
ಕೇಂದ್ರದ ನೋಡಲ್ ಅಧಿಕಾರಿ ಹಾಗೂ ಮಣ್ಣು (ವಿಜ್ಞಾನಿ) ಎಸ್. ಎಮ್. ವಾರದ, ಕಾರ್ಯಕ್ರಮದಲ್ಲಿ ಎಲ್ಲ ಗಣ್ಯರನ್ನು ಸ್ವಾಗತಿಸಿ ಪ್ರಾಸ್ತಾವಿಕ ಮಾತನಾಡಿ, ಈ ಕೃಷಿಯನ್ನು ವಿಸ್ತರಿಸುವ ಯೋಜನೆಯ ಭಾಗವಾಗಿ ಐದು ದಿನಗಳ ತರಬೇತಿಯನ್ನು ಕೃಷಿ ಸಖಿಯರಿಗೆ ಹಮ್ಮಿಕೊಳ್ಳಲಾಗಿದೆ ಎಂದರು. ನೈಸರ್ಗಿಕ ಕೃಷಿ ಪರಿಕರವಾದ ಜೀವಾಮೃತದ ತಯಾರಿಕೆ ಪದ್ಧತಿ ಪ್ರಾತ್ಯಕ್ಷಿಕೆಯನ್ನು ನೆರವೇರಿಸಲಾಯಿತು. ಕಾರ್ಯಕ್ರಮದಲ್ಲಿ ಕೃಷಿ ಇಲಾಖೆಯ ಉಪ ಜಂಟಿ ಕೃಷಿ ನಿರ್ದೇಶಕ ಶ್ರೀ ಸಲೀಂ ಸಂಗತ್ರಾಸ್, ಸಹಾಯಕ ಕೃಷಿ ನಿರ್ದೇಶಕರಾದ ಸಿ. ಆಯ್. ಹೂಗಾರ ಹಾಗೂ ಬಸವರಾಜ ದಳವಾಯಿ ಉಪಸ್ಥಿತರಿದ್ದರು.
ಕಾರ್ಯಕ್ರಮದಲ್ಲಿ ಕೇಂದ್ರದ ವಿಜ್ಞಾನಿ ಡಾ. ಎಸ್. ಎಸ್. ಹಿರೇಮಠ ವಂದಿಸಿದರು. ಜಿ. ಬಿ. ವಿಶ್ವನಾಥ, ಪ್ರವೀಣ ಯಡಹಳ್ಳಿ, ಡಾ. ಭಾವಿನಿ ಪಾಟೀಲ, ಡಾ. ಗುರುರಾಜ ಕೌಜಲಗಿ, ಶಂಕರಗೌಡ ಪಾಟೀಲ ಹಾಗೂ ವಿನೋದ ಕೋಚಿ ಭಾಗವಹಿಸಿದ್ದರು. ತರಬೇತಿಯಲ್ಲಿ ವಿವಿಧ ತಾಲೂಕುಗಳ 40 ಕೃಷಿ ಸಖಿಯರು ಪಾಲ್ಗೊಂಡಿದ್ದರು.

## ಜಿಲ್ಲಾ ಮಟ್ಟದ ಯುವಜನೋತ್ಸವ: ಅರ್ಜಿ ಆಹ್ವಾನ

ಬೆಳಗಾವಿ, : ಜಿಲ್ಲಾಡಳಿತ, ಜಿಲ್ಲಾ ಪಂಚಾಯತ, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ, ಮೈ ಭಾರತ, ಸಂಗೊಳ್ಳಿ ರಾಯಣ್ಣ ಪ್ರಥಮ ದರ್ಜೆ ಘಟಕ ಮಹಾವಿದ್ಯಾಲಯ ಬೆಳಗಾವಿ ಇವರುಗಳ ಸಂಯುಕ್ತಾಶ್ರಯದಲ್ಲಿ ದಿನಾಂಕ: 29-10-2025 ರಂದು ನಗರದ ಶ್ರೀನಗರದಲ್ಲಿರುವ ಶ್ರೀ ಸಂಗೊಳ್ಳಿ ರಾಯಣ್ಣ ಪ್ರಥಮ ದರ್ಜೆ ಘಟಕ ಮಹಾವಿದ್ಯಾಲಯದಲ್ಲಿ 2025-26ನೇ ಸಾಲಿನ ಜಿಲ್ಲಾ ಮಟ್ಟದ ಯುವಜನೋತ್ಸವವನ್ನು ಆಯೋಜಿಸಲಾಗಿದೆ.
ಸದರಿ ಯುವಜನೋತ್ಸವದಲ್ಲಿ 15 ರಿಂದ 29 ವರ್ಷದೊಳಗಿನ ಯುವಕ/ಯುವತಿಯರಿಗಾಗಿ ಜನಪದ ನೃತ್ಯ (ತಂಡ), ಜನಪದ ಗೀತೆ (ತಂಡ), ಕಥೆ ಬರೆಯುವುದು, ಚಿತ್ರಕಲೆ, **Declamation** (ಘೋಷಣೆ), ಕವಿತೆ ಬರೆಯುವುದು ಹಾಗೂ ಇಥುಭುಣುಠಟಿ ಠಜಿ ಖಭಿಜಟಟಿಭಿಜ ಒಜಟಚಿ ವನ್ನು ನಡೆಸಲಾಗುವುದು.
ಬೆಳಗಾವಿ ಜಿಲ್ಲೆಯ 15 ರಿಂದ 29 ವರ್ಷದೊಳಗಿನ ಕಾಲೇಜು ವಿದ್ಯಾರ್ಥಿಗಳು ಹಾಗೂ ಯುವಕ/ಯುವತಿಯರು ಸ್ಪರ್ಧೆಗಳಲ್ಲಿ ಭಾಗವಹಿಸಬಹುದಾಗಿದೆ. ದಿನಾಂಕ 28-10-2025ರ ಒಳಗಾಗಿ ದೂರವಾಣಿ ಸಂಖ್ಯೆ: 7411144485, 9620646488 ಗಳಿಗೆ ಕರೆಮಾಡಿ ತಮ್ಮ ಹೆಸರನ್ನು ನೋಂದಾಯಿಸಿಕೊಳ್ಳಬಹುದಾಗಿದೆ. ಭಾಗವಹಿಸುವ ಸ್ಪರ್ಧೆಗಳಿಗೆ ಉಚಿತ ಪ್ರವೇಶವಿದ್ದು, ಬೆಳಗಾವಿ ಹೊರತು ಪಡಿಸಿ ಇತರೆ ತಾಲೂಕುಗಳಿಂದ ಬರುವಂತಹ ಸ್ಪರ್ಧಿಗಳಿಗೆ ಪ್ರಯಾಣ ಭತ್ಯೆಯನ್ನು ನೀಡಲಾಗುವುದು ಹಾಗೂ ಭಾಗವಹಿಸುವಂತಹ ಎಲ್ಲ ಸ್ಪರ್ಧಿಗಳಿಗೆ ಲಘು ಊಟೋಪಹಾರದ ವ್ಯವಸ್ಥೆ ಮಾಡಲಾಗಿರುತ್ತದೆ. ವಿಜೇತ ಸ್ಪರ್ಧಾಳುಗಳಿಗೆ ನಗದು ಬಹುಮಾನ ಹಾಗೂ ಪ್ರಮಾಣ ಪತ್ರಗಳನ್ನು ನೀಡಲಾಗುವುದು.
ಹೆಚ್ಚಿನ ಮಾಹಿತಿಗಾಗಿ ದೂರವಾಣಿ ಸಂಖ್ಯೆ. 7411144485, 9620646488 ಗಳಿಗೆ ಸಂಪರ್ಕಿಸಬಹುದಾಗಿದೆ ಎಂದು ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಉಪ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಜಿಲ್ಲಾ ಮಟ್ಟದ ಯುವಜನೋತ್ಸವ : ವಿವಿಧ ಸ್ಪರ್ಧೆ ಆಯೋಜನೆ

# ವಿದ್ಯಾರ್ಥಿಗಳು ಸ್ಪರ್ಧಾತ್ಮಕ ಮನೋಭಾವ ಬೆಳೆಸಿಕೊಳ್ಳಿ : ಮೇಟಿ

ಬಾಗಲಕೋಟೆ : : ವಿದ್ಯಾರ್ಥಿ ಜೀವನದಲ್ಲಿ ಸ್ಪರ್ಧೆಗಳಲ್ಲಿ ಭಾಗವಹಿಸುವ ಮೂಲಕ ವಿದ್ಯಾರ್ಥಿಗಳು ಸ್ಪರ್ಧಾತ್ಮಕ ಮನೋಭಾವ ಬೆಳೆಸಿಕೊಳ್ಳುವದರೊಂದಿಗೆ ಉತ್ಸಾಹದಿಂದ ಎಲ್ಲ ಸ್ಪರ್ಧೆಗಳಲ್ಲಿ ಭಾಗವಹಿಸಬೇಕು ಎಂದು ಶಾಸಕ ಹಾಗೂ ಬಿಟಿಡಿಎ ಅಧ್ಯಕ್ಷ ಎಚ್.ವಾಯ್.ಮೇಟಿ ಹೇಳಿದರು.

ನವನಗರದ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿ, ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಹಾಗೂ ಸರ್ಕಾರಿ ಪ್ರಥಮ ದರ್ಜೆ ಕಾಲೇಜು ನವನಗರ ಇವರ ಸಂಯುಕ್ತ ಆಶ್ರಯದಲ್ಲಿ ನಡೆದ ಜಿಲ್ಲಾ ಮಟ್ಟದ ಯುವಜನೋತ್ಸವ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ವಿದ್ಯಾರ್ಥಿಗಳು ಐಎಎಸ್ ಐಪಿಎಸ್ ನಂತಹ ದೊಡ್ಡ ಮಟ್ಟದ ಕನಸುಗಳನ್ನಿಟ್ಟುಕೊಂಡು ಅದರ ಸಲುವಾಗಿ ನಿರಂತರ ಅಧ್ಯಯನ ಕೈಗೊಳ್ಳಬೇಕು ಎಂದರು.




ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ರಾಜ್ಯಸಭಾ ಸದಸ್ಯ ನಾರಾಯಣಸಾ ಭಾಂಡಗೆ, ಯುವಜನೋತ್ಸವದಲ್ಲಿ ವಿವಿಧ ಸ್ಪರ್ಧೆಗಳನ್ನ ಆಯೋಜಿಸಲಾಗಿದ್ದು, ಅದರಲ್ಲಿ ಸಕ್ರೀಯವಾಗಿ ಪಾಲ್ಗೊಳ್ಳುವಂತೆ ಅದರಲ್ಲೂ, ಭಾಷಣ ಸ್ಪರ್ಧೆ ವಿಷಯವಾದ ತುರ್ತು ಪರಿಸ್ಥಿತಿ ಕುರಿತಂತೆ ವಿದ್ಯಾರ್ಥಿಗಳು ಅರಿತುಕೊಳ್ಳುವುದು ಅವರ ಜ್ಞಾನ ವಿಸ್ತಾರಕ್ಕೆ ಅನುಕೂಲ ಆಗುವುದು ಎಂದರು.

ಜಿಲ್ಲಾಧಿಕಾರಿ ಸಂಗಪ್ಪ ಮಾತನಾಡಿ, ಯುವಜನೋತ್ಸವವು ಕೇವಲ ಸಾಂಸ್ಕೃತಿಕ ಕಾರ್ಯಕ್ರಮವಲ್ಲ. ಇದು ಪ್ರತಿ ವಿದ್ಯಾರ್ಥಿಯಲ್ಲಿರುವ ಪ್ರತಿಭೆಯನ್ನು ಗುರುತಿಸಲು ಮತ್ತು ಅದನ್ನು ಬೆಳಗಿಸಲು ಒಂದು ವೇದಿಕೆ, ನೃತ್ಯ, ಸಂಗೀತ, ನಾಟಕ, ಕ್ರೀಡೆ ಅಥವಾ ತಂತ್ರಜ್ಞಾನ ಯಾವ ಕ್ಷೇತ್ರದಲ್ಲಿದ್ದರೂ ನಿಮ್ಮ ಪ್ರತಿಭೆಯನ್ನು ಹಂಚಿಕೊಳ್ಳಬೇಕು. ಈ ದಿನದಲ್ಲಿ ಗೆಲುವು ಅಥವಾ ಸೋಲು ಮುಖ್ಯವಲ್ಲ. ಭಾಗವಹಿಸುವುದು ಮುಖ್ಯವೆಂದರು.

ಜಿಲ್ಲಾ ಪಂಚಾಯತ್ ಸಿಇಓ ಶಶಿಧರ ಕುರೇರ್ ಮಾತನಾಡಿ ಯುವಜನೋತ್ಸವ ಕಾರ್ಯಕ್ರಮವೂ ವಿದ್ಯಾರ್ಥಿಗಳಲ್ಲಿನ ಪಠ್ಯೇತರ ಕೌಶಲ್ಯಗಳನ್ನ ಗುರುತಿಸಿ, ಬೆಂಬಲಿಸಲು ಆಯೋಜಿಸಲಾಗಿದ್ದು, ಎಲ್ಲರೂ ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಬೇಕು ಎಂದರು.

ಕಾರ್ಯಕ್ರಮದಲ್ಲಿ ನಗರಸಭೆ ಅಧ್ಯಕ್ಷೆ ಸವಿತಾ ಲೆಂಕಣ್ಣವರ, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಸಹಾಯಕ ನಿರ್ದೇಶಕ ಗುರುಪಾದ ಡೂಗನವರ, ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ಪ್ರಾಚಾರ್ಯ ಡಾ. ಅರುಣಕುಮಾರ ಗಾಳಿ ಸೇರಿದಂತೆ ಇನ್ನಿತರರು ಉಪಸ್ಥಿತರಿದ್ದರು.

# ಅ.18 ರಿಂದ ಕಿತ್ತೂರು ಕರ್ನಾಟಕ ನಾಟಕೋತ್ಸವ

ಬೆಳಗಾವಿ, : ಕರ್ನಾಟಕ ನಾಟಕ ಅಕಾಡೆಮಿ, ಕನ್ನಡ ಭವನ ಹಾಗೂ ತೇಜೋಮಯ ಪ್ರದರ್ಶನ ಕಲೆಗಳ ಸಂಘ (ರಿ) ಇವರ ಸಹಕಾರದೊಂದಿಗೆ ಅಕ್ಟೋಬರ್ 18, 19, 20 ರಂದು ನಗರದ ಹೊಟೇಲ ರಾಮದೇವ ಹತ್ತಿರವಿರುವ ಕನ್ನಡ ಭವನದಲ್ಲಿ ಕಿತ್ತೂರು ಕರ್ನಾಟಕ ನಾಟಕೋತ್ಸವ ಜರುಗಲಿದೆ.

ಶನಿವಾರ (ಅ.18) ಸಂಜೆ 6 ಗಂಟೆಗೆ ಕಾರ್ಯಕ್ರಮದ ಉದ್ಘಾಟನೆ ಮತ್ತು ನಾಟಕ ಪ್ರದರ್ಶನಕ್ಕೆ ಚಾಲನೆ ಜರುಗಲಿದೆ. ಲೋಕೋಪಯೋಗಿ ಹಾಗೂ ಜಿಲ್ಲಾ ಉಸ್ತುವಾರಿ ಸಚಿವರಾದ ಸತೀಶ ಜಾರಕಿಹೊಳಿ ಅವರು ಕಾರ್ಯಕ್ರಮ ಉದ್ಘಾಟಿಸಲಿದ್ದಾರೆ. ಬೆಳಗಾವಿ ಉತ್ತರವಲಯ ಶಾಸಕರಾದ ಆಸೀಫ್ (ರಾಜು) ಸೇಠ್ ಅವರು ಅಧ್ಯಕ್ಷತೆ ವಹಸಿಲಿದ್ದಾರೆ.

ಜಿಲ್ಲಾಧಿಕಾರಿ ಮೊಹಮ್ಮದ ರೋಷನ್, ಡಾ.ದ.ರಾ.ಬೇಂದ್ರೆ, ರಾಷ್ಟ್ರೀಯ ಸ್ಮಾರಕ ಟ್ರಸ್ಟ, ಧಾರವಾಡ ಅಧ್ಯಕ್ಷ ಡಾ. ಸರಜೂ ಕಾಟ್ಕರ್, ಬಸವರಾಜ ಕಟ್ಟೀಮನಿ ಪ್ರತಿಷ್ಠಾನದ ಅಧ್ಯಕ್ಷ ಡಾ.ಯಲ್ಲಪ್ಪ ಹಿಮ್ಮಡಿ, ಬೆಳಗಾಔಇ ವಲಯದ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಜಂಟಿ ನಿರ್ದೇಶಕ ಕೆ.ಹೆಚ್. ಚನ್ನೂರ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಉಪ ನಿರ್ದೇಶಕಿ ವಿದ್ಯಾವತಿ ಭಜಂತ್ರಿ, ರಂಗಕರ್ಮಿಗಳು, ಧಾರ್ಮಿಕ ದತ್ತಿ ಇಲಾಖೆ ವಿಶ್ರಾಂತ ಉಪ ಆಯುಕ್ತ ರವಿ ಕೋಟಾರಗಸ್ತಿ, ಚಲನಚಿತ್ರ ನಿರ್ದೇಶಕ ಹಾಗೂ ಕರ್ನಾಟಕ ನಾಟಕ ಅಕಾಡೆಮಿ ಸದಸ್ಯ ರವೀಂದ್ರನಾಥ ಸಿರಿವರ ಅವರುಗಳು ಕಾರ್ಯಕ್ರಮಕ್ಕೆ ಮುಖ್ಯ ಅತಿಥಿಗಳಾಗಿ ಆಗಮಿಸಲಿದ್ದಾರೆ.

ಶನಿವಾರ (ಅ.18) ಸಂಜೆ 7 ಗಂಟೆಗೆ ಸಮುದಾಯ ಧಾರವಾಡ ಪ್ರಸ್ತುತ ಪಡಿಸುವ ಬುದ್ಧ ಪ್ರಬುದ್ಧ ರಂಗ ನಾಟಕ, ರವಿವಾರ (ಅ.19) ದೃಶ್ಯ (ರಿ) ಬೆಂಗಳೂರು ಪ್ರಯೋಗಿಸುತ್ತಿರುವ ತಾಜ್‌ಮಹಲಿನ ಟೆಂಡರ್, ಸೋಮವಾರ (ಅ.20) ಸಂಜೆ 6 ಗಂಟೆಗೆ ಸಮಾರೋಪ ಸಮಾರಂಭ ಜರುಗಲಿದೆ. ಕರ್ನಾಟಕ ನಾಟಕ ಅಕಾಡೆಮಿ ಅಧ್ಯಕ್ಷ ಡಾ.ಕೆ.ವಿ. ನಾಗರಾಜಮೂರ್ತಿ ಸಮಾರೋಪ ಭಾಷಣ ಮಾಡಲಿದ್ದಾರೆ. ಸಮುದಾಯ ಕರ್ನಾಟಕ ರಾಜ್ಯ ಉಪಾಧ್ಯಕ್ಷ ಬಿ.ಐ.ಈಳಿಗೇರಿ ಅಧ್ಯಕ್ಷತೆ ವಹಿಸಲಿದ್ದಾರೆ. ತದನಂತರ ಸಂಜೆ 7 ಗಂಟೆಗೆ ಭಾವೈಕ್ಯ ಸಮರ ಶಿಲ್ಪಿ ಸಂತ ಶಿಶುನಾಳ ಶರೀಫ ನಾಟಕ ನಡೆಯಲಿದೆ ಎಂದು ಪ್ರಕಟಣೆಯಲ್ಲಿ ತಿಳಿಸಲಾಗಿದೆ.

# ಒಂದು ದಿನದ ಚುಟುಕು ಕಮ್ಮಟ

ಬೆಳಗಾವಿ : ನವೆಂಬರ 2 ರಂದು ಜಿಲ್ಲಾ ಚುಟುಕು ಸಾಹಿತ್ಯ ಪರಿಷತ್ ಬೆಳಗಾವಿ ಇವರ ಸಹಯೋಗದಲ್ಲಿ, ಚುಟುಕು ಸಾಹಿತ್ಯ ಪರಿಷತ್ ತಾಲೂಕಾ ಘಟಕ ರಾಯಬಾಗದಿಂದ. ಒಂದು ದಿನದ ಚುಟುಕು ಕಮ್ಮಟ ಏರ್ಪಡಿಸಲಾಗುವುದು. ಇದು ರಾಯಬಾಗ ತಾಲೂಕಿನ ನಾಗರಿಕರಿಕರಿಗೆ ಮಾತ್ರ ಏರ್ಪಡಿಸಲಾಗುವುದು. ಶಿಬಿರದಲ್ಲಿ ಪಾಲ್ಗೊಳ್ಳಲು ಯಾವುದು ವಯಸ್ಸಿನ ಮಿತಿ ಇರುವುದಿಲ್ಲ, ಹಾಗೂ ಲಿಂಗಬೇದವಿಲ್ಲದೆ ತಾಲೂಕಿನ ಯಾರು ಬೇಕಾದರೂ ಕಮ್ಮಟದಲ್ಲಿ ಪಾಲ್ಗೊಳ್ಳಬಹುದು.

ಕಮ್ಮಟವು ಒಂದು ದಿನದಾಗಿದ್ದು ಮುಂಜಾನೆ ಸರಿಯಾಗಿ 10 ಗಂಟೆಗೆ ಪ್ರಾರಂಭವಾಗಿ ಸಂಜೆ 5 ಗಂಟೆಗೆ ಮುಕ್ತಾಯವಾಗುವುದು. ಎಂದು ಚುಟುಕು ಸಾಹಿತ್ಯ ಪರಿಷತ್ ತಾಲೂಕಾ ಘಟಕದ ಅಧ್ಯಕ್ಷ ಶಿರೂರ ಶ್ರೀಶೈಲ ಹಾಗೂ ಪದಾಧಿಕಾರಿಗಳು ಪ್ರಕಟನೆಯಲ್ಲಿ ತಿಳಿಸಿದ್ದಾರೆ.

ಇದೆ ಕಾರ್ಯಕ್ರಮದಲ್ಲಿ ಚುಸಾಪ ಘಟಕದ ಪ್ರಧಾನ ಕಾರ್ಯದರ್ಶಿ ರಾಜೀವ ಎಸ್ ಚೌಗಲಾ ಇವರಿಗೆ ಬೆಂಗಳೂರಿನ ಉತ್ತರದ ಬೆಟ್ಟಹಲಸೂರು ಇವರು ಕೊಡಮಾಡುವ ಸಾಮಾಜಿಕ ಸೇವೆ ಪರಿಗಣಿಸಿ 164 ನೇ ಸರ್ ಎಂ ವಿಶ್ವೇಶ್ವರಯ್ಯ ಸದ್ಭಾವನಾ ಪ್ರಶಸ್ತಿಯನ್ನು ನೀಡಿ ಸಭೆಯಲ್ಲಿ ಗೌರವಿಸಲಾಗುವುದು.

ತಾಲೂಕಿನ ಆಸಕ್ತ ಚುಟುಕು ಕಮ್ಮಟದಲ್ಲಿ ಬಾಗವಹಿಸುವವರು ಈ ಕೆಳಗಿನ ದೂರವಾಣಿ ಮೂಲಕ ಸಂಪರ್ಕಿಸಬೇಕು, ಕೇವಲ 40 ಪ್ರಶಿಕ್ಷಣಾರ್ಥಿಗಳಿಗೆ ಮಾತ್ರ ಅವಕಾಶ ಕಲ್ಪಿಸಲಾಗುವುದು. ಹಾಗೆ ಮೊದಲು ಬಂದವರಿಗೆ ಆದ್ಯತೆ ನೀಡಲಾಗುವುದು. ಕಮ್ಮಟದ ನಂತರ ಪ್ರಮಾಣಪತ್ರ ವಿತರಿಸಲಾಗುವುದು.

ದೂರವಾಣಿ – ಶಿರೂರ ಶ್ರೀಶೈಲ...9686352453. ರಾಜೀವ ಎಸ್ ಚೌಗಲಾ, 9844998855. ಹಾಗೂ ಮೌಲಾಲಿ ಎಂ ಶೇಖ್ ಸಾಹಿತಿ. ಶಿಕ್ಷಕ ಕುಡಚಿ 8722873413 ಇವರನ್ನು ಸಂಪರ್ಕಿಸಲು ವಿನಂತಿಸಿದ್ದಾರೆ,

****

### ಕರ್ನಾಟಕ ವಿಧಾನ ಪರಿಷತ್ತಿನ ಪಶ್ಚಿಮ ಪದವೀಧರರ ಮತಕ್ಷೇತ್ರದ ಮತದಾರರ ಪಟ್ಟಿ ತಯಾರಿಕೆ

## ಅರ್ಹ ಮತದಾರರ ನೋಂದಣಿಗೆ ನವೆಂಬರ 6 ರ ವರೆಗೆ ಅವಕಾಶ

ಬೆಳಗಾವಿ, : ಕರ್ನಾಟಕ ಪಶ್ಚಿಮ ಪದವೀಧರರ ಕ್ಷೇತ್ರ ವ್ಯಾಪ್ತಿಯ ಧಾರವಾಡ, ಹಾವೇರಿ, ಗದಗ ಮತ್ತು ಉತ್ತರಕನ್ನಡ ಜಿಲ್ಲೆಯ ಪದವೀಧರರ ಮತಕ್ಷೇತದ ಮತದಾರರ ಪಟ್ಟಿಯಲ್ಲಿ ಹೆಸರನ್ನು ನೋಂದಾಯಿಸಿಕೊಳ್ಳಬೇಕು. ನೋಂದಣಿ ನಿಯಮಗಳು 1960ಕ್ಕೆ ಲಗತ್ತಿಸಿರುವ ಮತ್ತು ದಿನಾಂಕ 30ನೇ ಸೆಪ್ಟೆಂಬರ್, 2025 ರಂದು ವಿಜಯ ಕರ್ನಾಟಕ ಮತ್ತು ದಿ ಹಿಂದೂ (ಇಂಗ್ಲಿಷ್) ದಿನಪತ್ರಿಕೆಗಳಲ್ಲಿ ಪ್ರಕಟಿಸಲಾಗಿರುವ ಎರಡನೇ ಅನುಸೂಚಿಯಲ್ಲಿ ಪುನರುದ್ಧರಿಸಿರುವ ನಮೂನೆ–18 ರಲ್ಲಿ ಅರ್ಜಿಯನ್ನು 6ನೇ ನವೆಂಬರ್, 2025 ಅಥವಾ ಅದಕ್ಕೂ ಮೊದಲು ಮತದಾರರ ನೋಂದಣಾಧಿಕಾರಿಗಳ/ ಸಂಬಂಧಪಟ್ಟ ಸಹಾಯಕ ಮತದಾರರ ನೋಂದಣಾಧಿಕಾರಿಗಳ/ ನಿಯೋಜಿತ ಅಧಿಕಾರಿಗಳ ಕಚೇರಿಗೆ ಕಳುಹಿಸಲು ಅಥವಾ ತಲುಪಿಸಲು ಕರೆ ನೀಡಲಾಗಿತ್ತು.



ಅರ್ಹ ಮತದಾರರು ತಮ್ಮ ಹೆಸರನ್ನು ಇದುವರೆಗೂ ಸೇರಿಸದೇ ಇದ್ದಲ್ಲಿ ನಿಗದಿತ ನಮೂನೆ 18ರಲ್ಲಿ ದಿನಾಂಕ: 6ನೇ ನವೆಂಬರ್, 2025 ರೊಳಗೆ (ಅಂದರೆ ಅರ್ಜಿ ಸಲ್ಲಿಸುವ ಕೊನೆಯ ದಿನಾಂಕ) ಅಥವಾ ಅದಕ್ಕೂ ಮುಂಚೆ ಅರ್ಜಿಗಳನ್ನು ಸಲ್ಲಿಸಬಹುದಾಗಿದೆ. ಮೇಲ್ಕಂಡ ವಿವರಗಳು ಮುಖ್ಯ ಚುನಾವಣಾಧಿಕಾರಿ, ಕರ್ನಾಟಕ ಇವರ ವೆಬ್ಸೈಟ್ ವಿಳಾಸ: **www.ceokarnataka.kar.nic.in** ರಲ್ಲಿ ಸಹ ಲಭ್ಯವಿರುತ್ತದೆ ಎಂದು ಮತದಾರರ ನೋಂದಣಾಧಿಕಾರಿಗಳು, ಕರ್ನಾಟಕ ಪಶ್ಚಿಮ ಪದವೀಧರರ ಮತಕ್ಷೇತ್ರ ಹಾಗೂ ಪ್ರಾದೇಶಿಕ ಆಯುಕ್ತರು, ಬೆಳಗಾವಿ ವಿಭಾಗ, ಬೆಳಗಾವಿ ಇವರು ಪ್ರಕಟಣೆಯಲ್ಲಿ ತಿಳಿಸಿರುತ್ತಾರೆ.

## 2ನೇ ತ್ರೈಮಾಸಿಕ ದಿಶಾ ಸಭೆ

ಬಾಗಲಕೋಟೆ : : ಪ್ರಸಕ್ತ ಸಾಲಿನ ಎರಡನೇ ತ್ರೈಮಾಸಿಕ ಜಿಲ್ಲಾ ಅಭಿವೃದ್ಧಿ ಸಮನ್ವಯ ಹಾಗೂ ಉಸ್ತುವಾರಿ ಸಮಿತಿಯ ಸಭೆ(ದಿಶಾ) ಯು ಸಂಸದ ಪಿ.ಸಿ.ಗದ್ದಿಗೌಡರ ಅಧ್ಯಕ್ಷತೆಯಲ್ಲಿ ಅಕ್ಟೋಬರ 16 ರಂದು ಬೆಳಿಗ್ಗೆ 9.30 ಗಂಟೆಗೆ ಜಿಲ್ಲಾ ಪಂಚಾಯತ ನೂತನ ಸಭಾಭವನದಲ್ಲಿ ಜರುಗಲಿದೆ ಎಂದು ಜಿ.ಪಂ ಸಿಇಓ ಶಶಿಧರ ಕುರೇರ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಅಕ್ಟೋಬರ ಮಾಹೆಯ ಪಡಿತರ ದಾನ್ಯ ಬಿಡುಗಡೆ

ಬಾಗಲಕೋಟೆ : : ಸಾರ್ವಜನಿಕ ವಿತರಣಾ ಪದ್ಧತಿಯಡಿ ಅಂತ್ಯೋದಯ, ಬಿಪಿಎಲ್ ಪಡಿತರ ಚೀಟಿಯ ಫಲಾನುಭವಿಗಳಿಗೆ ಅಕ್ಟೋಬರ ಮಾಹೆಯಲ್ಲಿ ರಾಷ್ಟ್ರೀಯ ಆಹಾರ ಭದ್ರತಾ ಕಾಯ್ದೆಯನ್ವಯ ಎಎವೈ ಪಡಿತರ ಪಡಿತರ ಚೀಟಿಗೆ 35 ಕೆಜಿ ಅಕ್ಕಿ ಹಾಗೂ ಪಿಎಚ್‌ಎಚ್ ಪ್ರತಿ ಫಲಾನುಭವಿಗೆ 5 ಕೆಜಿ ಅಕ್ಕಿ ಮತ್ತು ರಾಜ್ಯ ಸರ್ಕಾರ ವತಿಯಿಂದ ಅನ್ನಭಾಗ್ಯ ಯೋಜನೆಯಡಿ ಪ್ರತಿ ಸದಸ್ಯರಿಗೆ ಹೆಚ್ಚುವರಿಯಾಗಿ 5 ಕೆಜಿ ಅಕ್ಕಿಯನ್ನು ವಿತರಿಸಲಾಗುತ್ತಿದೆ.

ಅಕ್ಟೋಬರ ತಿಂಗಳು ಪ್ರತಿದಿನ ತಿಂಗಳ ಕೊನೆಯವರೆಗೆ ಬೆಳಿಗ್ಗೆ 8 ರಿಂದ ರಾತ್ರಿ 8 ಗಂಟೆವರೆಗೆ ನ್ಯಾಯಬೆಲೆ ಅಂಗಡಿಯನ್ನು ತೆರೆದು ಸರಿಯಾದ ಪ್ರಮಾಣದಲ್ಲಿ ಪಡಿತರ ವಿತರಣೆ ಮಾಡತಕ್ಕದ್ದು. ಒಂದು ವೇಳೆ ಲೋಪದೋಷಗಳು ಕಂಡುಬಂದಲ್ಲಿ ನ್ಯಾಯಬೆಲೆ ಅಂಗಡಿಕಾರರ ಮೇಲೆ ನಿರ್ದಾಕ್ಷಿಣ್ಯವಾಗಿ ಕ್ರಮಕೈಗೊಳ್ಳಲಾಗುತ್ತದೆ. ಪಡಿತರ ಚೀಟಿದಾರರು ತಮಗೆ ಹಂಚಿಕೆ ಮಾಡಿದ ಆಹಾರಧಾನ್ಯವನ್ನು ಕಾಳಸಂತೆಯಲ್ಲಿ ಮಾರಾಟ ಮಾಡಿದರೆ ಅಂತಹವರ ಪಡಿತರ ಚೀಟಿಯನ್ನು ರದ್ದುಪಡಿಸಲು ಕ್ರಮವಹಿಸಲಾಗುತ್ತದೆ.

ಪಡಿತರ ವಿತರಣೆ ಕುರಿತು ಏನಾದರೂ ದೂರುಗಳು ಇದ್ದಲ್ಲಿ ಪೊಲೀಸ್ ಇಲಾಖೆಯ ಸಹಾಯವಾಣಿ 112, ಮೊನಂ.9480803900 ಹಾಗೂ ಆಹಾರ ಇಲಾಖೆಯ ಸಹಾಯವಾಣಿ 1967, ದೂಸಂ.08354–235094ಗೆ ಕರೆ ಮಾಡಿ ದೂರು ಸಲ್ಲಿಸಬಹುದಾಗಿದೆ ಎಂದು ಜಿಲ್ಲಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಅರ್ಜಿ ಆಹ್ವಾನ

ಬೆಳಗಾವಿ, : ಜಿಲ್ಲಾ ಕಾನೂನು ಸೇವೆಗಳ ಪ್ರಧಿಕಾರದ "ಐಜಾಂಚಿಟ ಯಜ ಅಠಣಾಛಿಜಟ ಖಥಿಣಜಟ" ನಲ್ಲಿ ಖಾಲಿ ಇರುವ ಡೆಪ್ಯುಟಿ ಲೀಗಲ್ ಏಡ ಡಿಫೆನ್ಸ್ ಕೌನ್ಸಿಲ್ **(Deputy Legal Defense Counsel)** ತಾತ್ಕಾಲಿಕ ಹುದ್ದೆಗೆ ವಕೀಲರ ನೇಮಕಾತಿಗಾಗಿ ಅರ್ಜಿ ಆಹ್ವಾನಿಸಲಾಗಿದೆ. ಆಸಕ್ತರು ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಬೆಳಗಾವಿ ಇಲ್ಲಿ ಅರ್ಜಿಯನ್ನು ಪಡೆದು ತಮ್ಮ ವಯಕ್ತಿಕ ವಿವರಗಳೊಂದಿಗೆ ಸ್ವ ಅಕ್ಷರದಿಂದ ಭರ್ತಿ ಮಾಡಿ ದಿನಾಂಕ: 25–10–2025ರ ಒಳಗಾಗಿ ಸದಸ್ಯ ಕಾರ್ಯದರ್ಶಿಗಳು, ಜಿಲ್ಲಾ ಕಾನೂನು ಸೇವೆಗಳ ಪ್ರಧಿಕಾರ, ಎ.ಡಿ.ಆರ್.ಕಟ್ಟಡ, ಹೊಸ ನ್ಯಾಯಾಲಯ ಆವರಣ ಬೆಳಗಾವಿ ಇಲ್ಲಿಗೆ ಸಲ್ಲಿಸಬಹುದಾಗಿದೆ ಎಂದು ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಭಾಗ್ಯಲಕ್ಷ್ಮೀ ಯೋಜನೆ ಫಲಾನುಭವಿಗಳ ಗಮನಕ್ಕೆ

ಬೆಳಗಾವಿ, 2006–07 ನೇ ಸಾಲಿಗೆ ಜನಿಸಿದ ಹೆಣ್ಣು ಮಕ್ಕಳಿಗೆ 18 ವರ್ಷ ತುಂಬಿದವರಾಗಿದ್ದು, ಭಾಗ್ಯಲಕ್ಷ್ಮೀ ಯೋಜನೆ ಫಲಾನುಭವಿಗಳಾದ ಅವರು, ಪರಿಪಕ್ವ ಮೊತ್ತ ಪಡೆಯಲು 31 ಅಕ್ಟೋಂಬರ 2025 ರ ಒಳಗಾಗಿ ಫಲಾನುಭವಿಗಳು ಯೋಜನೆಗೆ ಸಂಬಂಧಿಸಿದ ಎಲ್ಲಾ ದಾಖಲೆಗಳನ್ನು ಬೆಳಗಾವಿ (ನಗರ) ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳ ಕಛೇರಿಗೆ ಅಥವಾ ತಮ್ಮ ವ್ಯಾಪ್ತಿಯ ಅಂಗನವಾಡಿ ಕೇಂದ್ರಗಳಿಗೆ ಸಲ್ಲಿಸಬಹುದಾಗಿದೆ. ನಿಗದಿತ ದಿನಾಂಕದೊಳಗೆ ಪ್ರಸ್ತಾವಣೆ ಸಲ್ಲಿಸದಿದ್ದಲ್ಲಿ ಅಂತವರು ಯೋಜನೆಯಿಂದ ವಂಚಿತರಾಗುತ್ತೀರಿ ಎಂದು ಬೆಳಗಾವಿ (ನಗರ) ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳು ಪ್ರಕಟಣೆಯಲ್ಲಿ ಕೋರಿದ್ದಾರೆ.

## ಹೆಚ್ಚುವರಿ ಬಸ್ ಕಾರ್ಯಾಚರಣೆ

ಬೆಳಗಾವಿ, : ಪ್ರಸಕ್ತ ಸಾಲಿನ ದೀಪಾವಳಿ ಹಬ್ಬದ ಪ್ರಯುಕ್ತ ಬೆಂಗಳೂರು, ಮುಂಬಯಿ, ಪೂನಾ ಹಾಗೂ ಪಣಜಿಯಿಂದ ಬೆಳಗಾವಿ ಕಡೆಗೆ ಬರಲು ಹಾಗೂ ಮರಳಿ ಸದರಿ ಪ್ರದೇಶಕ್ಕೆ ಹೋಗಲು ಅಕ್ಟೋಬರ, 17, 2025 ರಿಂದ ಅಕ್ಟೋಬರ, 26, 2025 ರವರೆಗೆ ಹೆಚ್ಚುವರಿ ಸಾರಿಗೆ ಕಾರ್ಯಾಚರಣೆಯನ್ನು ಯೋಜಿಸಲಾಗಿದೆ.

ಸಾರ್ವಜನಿಕರು ಹೆಚ್ಚುವರಿ ಸಾರಿಗೆ ಕಾರ್ಯಾಚರಣೆಯ ಸದುಪಯೋಗವನ್ನು ಪಡೆದುಕೊಳ್ಳಬಹುದಾಗಿದೆ ಎಂದು ಬೆಳಗಾವಿ ವಿಭಾಗದ ವಾ.ಕ.ರ.ಸಾ. ಸಂಸ್ಥೆ ವಿಭಾಗೀಯ ನಿಯಂತ್ರಣಾಧಿಕಾರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

*****

## ಅತಿವೃಷ್ಟಿಗೆ ಹಾನಿಯಾದ ಬೆಳೆಗಳಿಗೆ ಸರಕಾರದಿಂದ ಸೂಕ್ತ ಪರಿಹಾರ ಕೊಡಿಸುವ ಬರವಸೆ : ಸಿ ಎಸ್ ನಾಡಗೌಡ



ಮುದ್ದೇಬಿಹಾಳ : ಕಳೆದ ಎರಡು ಮೂರು ತಿಂಗಳಲ್ಲಿ ನಿರಂತರ ಮಳೆಯಿಂದ ಅತಿವೃಷ್ಟಿಗೆ ಹಾನಿಯಾದ ತೊಗರಿ, ಹತ್ತಿ ಈರುಳ್ಳಿ ಇನ್ನಿತರ ಬೆಳೆಗಳು ಸಂಪೂರ್ಣ ಹಾನಿಯಾಗಿದ್ದರಿಂದ ನಮ್ಮ ತಾಲ್ಲೂಕಿನ ರೈತರು ಸಂಕಷ್ಟಕ್ಕೆ ಒಳಗಾಗಿದ್ದು, ಸರಕಾರವು ಒಣ ಬೇಸಾಯ, ನೀರಾವರಿ ಪ್ರದೇಶದ ರೈತರಿಗೆ ಎನ್ ಡಿ ಅರ್ ಎಫ್,ಎಸ್ ಡಿ ಅರ್ ಎಫ್ ಮಾರ್ಗದ ಪ್ರಕಾರ ಸರಕಾರವು ರೈತರಿಗೆ ನೇರವಾಗಿ ತಮ್ಮ ಖಾತೆಗೆ ಹಣವನ್ನು ಜಮಾ ಮಾಡಲಾಗುವುದು ಎಂದು ಕರ್ನಾಟಕ ಸಾಬೂನು ಮಾರ್ಜಕ ನಿಗಮದ ಅಧ್ಯಕ್ಷ ಹಾಗೂ ಶಾಸಕ ಸಿ ಎಸ್ ನಾಡಗೌಡ (ಅಪ್ಪಾಜಿ) ಹೇಳಿದರು.

ತಾಲ್ಲೂಕಿನ ಬಿಜ್ಜೂರ,ಇಂಗಳಗಿ,ಟಕ್ಕಳಕಿ ಘಾಳಪೂಜಿ,ಬಂಗಾರಗುಂಡ ರಕ್ಕಸಗಿ ತೊಗರಿ, ಹತ್ತಿ, ಈರುಳ್ಳಿ, ಸೂರ್ಯಕಾಂತಿ, ಮೆಕ್ಕೆಜೋಳ, ಇನ್ನಿತರ ಬೆಳೆದು ರೈತರ ಜಮೀನಿನುಗಳಿಗೆ ಶಾಸಕರು ಭೇಟಿ ನೀಡಿ ಬೆಳೆಗಳನ್ನು

ಪರಿಶೀಲನೆ ನಡೆಸಿ ಗ್ರಾಮದ ರೈತರ ಜೊತೆಗೆ ಸಮಾಲೋಚನೆ ಸಭೆ ನಡೆಸಿ ಅವರು ಮಾತನಾಡಿದರು.ಸಂಕಷ್ಟದಲ್ಲಿ ಇರುವ ನಮ್ಮ ತಾಲ್ಲೂಕಿನ ರೈತರಿಗೆ ಸೂಕ್ತ ಪರಿಹಾರ ಕೊಡಿಸುವ ಭರವಸೆಯನ್ನು ನೀಡಿದರು.

ಯಾರಾದರೂ ನಿಮಗೆ ಹೆಚ್ಚಿನ ಪರಿಹಾರ ಕೊಡುಸುತ್ತೇವೆ ಎಂದು ನಿಮ್ಮ ಹತ್ತಿರ ಬಂದು ಎಳೆದರೆ ನೀವು ನಂಬಿ ರೈತರು ಮೊಸಹೋಗಬಾರದು ತಿಳಿಸಿದರು.

ಕೇಂದ್ರ, ರಾಜ್ಯ ಸರ್ಕಾರವು ಎನ್ ಡಿ ಅರ್ ಎಫ್,ಎಸ್ ಡಿ ಅರ್ ಎಫ್ ಮಾರ್ಗದ ಪ್ರಕಾರ ಸರಕಾರ ಸೂಕ್ತ ಪರಿಹಾರವನ್ನು ಕೊಡುತ್ತದೆ ಎಂದು ರೈತರಿಗೆ ಶಾಸಕರು ಮಾಹಿತಿ ನೀಡಿದರು.

ಈ ಸಂದರ್ಭದಲ್ಲಿ ಕೃಷಿ ಇಲಾಖೆ ಸಹಾಯಕ ನಿರ್ದೇಶಕ ಎಸ್ ಡಿ ಬಾವಿಕಟ್ಟಿ,ನಾಲತವಾಡ ರೈತ ಸಂಪರ್ಕ ಕೇಂದ್ರ ಕೃಷಿ ಅಧಿಕಾರಿ ಅಶೋಕ ಕಾಂಬಳೆ, ನಾಲತವಾಡ ಹೋಬಳಿ ಕಂದಾಯ ನಿರೀಕ್ಷಕ ವೆಂಕಟೇಶ್ ಅಂಬಿಗೇರ, ಗ್ರಾಮಢಳಿತಧಿಕಾರಿ ದೇವರಾಜ ಗುರಿಕಾರ,ಗ್ರಾಮ ಸಹಾಯಕ ಮುತ್ತಣ್ಣ ತಳವಾರ,ಪೃಥ್ವಿರಾಜ ಎಸ್ ನಾಡಗೌಡ,ಶ್ರೀಕಾಂತ್ ನಾಡಗೌಡ, ಸಂಗಣ್ಣ ನಾಡಗೌಡ, ಮುತ್ತಿನಶೆಟ್ಟಿ ಗೂಳಿ,ಗುಡದಪ್ಪ ಕಮರಿ,ಗ್ರಾಮಸ್ಥರು ಸೇರಿದಂತೆ ಉಪಸ್ಥಿತರಿದ್ದರು.

## ವೃತ್ತಿ ರಂಗಭೂಮಿಗೆ ದಿ.ರಾಜು ತಾಳಿಕೋಟೆಯವರ ಕೊಡುಗೆ ಅನನ್ಯವಾದದ್ದು: ಸಂಗಮೇಶ ಬಬಲೇಶ್ವರ

ಧಾರವಾಡ : ನಾಟಕ ಕ್ಷೇತ್ರದಲ್ಲಿ ತಮ್ಮ ಅಪರೂಪದ ಅಭಿನಯದ ಮೂಲಕ ನಾಡಿನ ಜನರ ಹೃದಯ ಗೆದ್ದಿದ್ದ ಖ್ಯಾತ ಹಾಸ್ಯ ನಟ ಹಾಗೂ ರಂಗಾಯಣದ ನಿರ್ದೇಶಕರಾಗಿದ್ದ ರಾಜು ತಾಳಿಕೋಟೆ ಅವರ ಕೊಡುಗೆ ನಾಡಿನ ಕಲಾಕ್ಷೇತ್ರಕ್ಕೆ ಅನನ್ಯವಾದದ್ದು. ಅವರಿಗೆ ಅವರೇ ಸರಿಸಾಟಿ. ಅವರ ಅಕಾಲಿನ ನಿಧನದಿಂದ ಸರ್ವ ಶ್ರೇಷ್ಠ ಹಾಸ್ಯ ನಟನನ್ನು ಕಳೆದುಕೊಂಡು ನಾಡಿನ ಸಾಂಸ್ಕೃತಿಕ ಕ್ಷೇತ್ರ ಬಡವಾಗಿದೆಯೆಂದು ಕರ್ನಾಟಕ ಬಾಲವಿಕಾಸ ಅಕಾಡೆಮಿ ಅಧ್ಯಕ್ಷರಾದ ಸಂಗಮೇಶ ಬಬಲೇಶ್ವರ ಹೇಳಿದರು.

ಅವರು ಇಂದು (ಅ.15) ಕರ್ನಾಟಕ ಬಾಲವಿಕಾಸ ಅಕಾಡೆಮಿ ಕೇಂದ್ರ ಕಚೇರಿಯಲ್ಲಿ ಆಯೋಜಿಸಿದ್ದ ದಿ.ರಾಜು ತಾಳಿಕೋಟಿ ಅವರ ಶ್ರದ್ಧಾಂಜಲಿ ಸಭೆಯನ್ನು ಉದ್ದೇಶಿಸಿ, ಅವರು ಮಾತನಾಡಿದರು.

ರಾಜು ತಾಳಿಕೋಟಿ ವೃತ್ತಿ ರಂಗಭೂಮಿಯನ್ನು ಚಲನಚಿತ್ರ ಕ್ಷೇತ್ರಕ್ಕೆ ಕೊಂಡಿಯಾಗಿ ಬೆಸೆದಿದ್ದರು. ಉತ್ತರ ಕರ್ನಾಟಕದ ಕನ್ನಡ ಭಾಷೆಗೆ ಎಲ್ಲೆಡೆ ಮನ್ನಣೆ ಸಿಗುವಂತೆ ಮಾಡಿದ್ದರು. ಅವರ ಅಗಲಿಕೆ ರಂಗಭೂಮಿಗೆ, ಉತ್ತರ ಕರ್ನಾಟಕದ ಕಲಾಕ್ಷೇತ್ರಕ್ಕೆ ತುಂಬಲಾರದ ನಷ್ಟ



ಉಂಟು ಮಾಡಿದೆ ಎಂದರು.

ರಾಜು ತಾಳಿಕೋಟಿ ಅವರ ಇಡೀ ಕುಟುಂಬ ರಂಗಭೂಮಿಗೆ ಬಲ ತುಂಬಿದೆ. ಅವರ ಕೊಡೆಗೆ ಅಪಾರವಾಗಿದೆ ಎಂದು ಅವರು ಹೇಳಿದರು.

ಈ ಸಂದರ್ಭದಲ್ಲಿ ಅಕಾಡೆಮಿಯ ಅಧಿಕಾರಿಗಳಾದ ಅನ್ನಪೂರ್ಣ ಸಂಗಳದ, ಪುಷ್ಪಾ ಹಂಜಗಿ, ಸುಭಾಸ ಚಂದ್ರಗಿರಿ, ಸರ್ವಣಲತಾ ಮಠದ, ಪದ್ಮಶ್ರೀ ಮೇಟಿ, ಅರ್ಪಿತಾ, ಶಿವಕುಮಾರ, ಸ್ವಾಯನ್ನಿಲೂಥರ, ಅಶೋಕ ಇತರರು ಉಪಸ್ಥಿತರಿದ್ದರು

# ರೈತರು ಕೃಷಿ ಸಂಸ್ಕರಣಾ ಘಟಕ ತರಬೇತಿಯ ಸದುಪಯೋಗ ಪಡೆದುಕೊಳ್ಳಬೇಕು- ಕೇಂದ್ರ ಸಚಿವೆ ನಿರ್ಮಲಾ ಸೀತಾರಾಮನ್

ಕೊಪ್ಪಳ : ಕೊಪ್ಪಳ ಜಿಲ್ಲೆಯ ರೈತ ಸಹೋದರ ಮತ್ತು ಸಹೋದರಿಯರು ಕೃಷಿ ಸಂಸ್ಕರಣಾ ಘಟಕ ತರಬೇತಿ ಕೇಂದ್ರದ ಸದುಪಯೋಗವನ್ನು ಪಡೆದುಕೊಳ್ಳಬೇಕು. ಇದರ ಉದ್ದೇಶ ರೈತರನ್ನು ಆರ್ಥಿಕವಾಗಿ ಸಬಲರನ್ನಾಗಿಸುವುದರ ಜೊತೆಗೆ ಅವರು ಬೆಳೆದ ಬೆಳೆಗಳಿಗೆ ಮೌಲ್ಯವರ್ಧಿತ ಬೆಲೆ ಸಿಗಬೇಕಿದೆ ಎಂದು ಭಾರತ ಸರ್ಕಾರದ ಹಣಕಾಸು ಮತ್ತು ಕಾರ್ಪೊರೇಟ್ ವ್ಯವಹಾರಗಳ ಸಚಿವರಾದ ನಿರ್ಮಲಾ ಸೀತಾರಾಮನ್ ಹೇಳಿದರು.

ಅವರು ಬುಧವಾರ ಕೃಷಿ ಮತ್ತು ಗ್ರಾಮೀಣಾಭಿವೃದ್ಧಿ ರಾಷ್ಟ್ರೀಯ ಬ್ಯಾಂಕ್ (ನಬಾರ್ಡ್) ಇವರ ಸಹಯೋಗದಲ್ಲಿ ಕೊಪ್ಪಳ ಜಿಲ್ಲೆಯ ಗಂಗಾವತಿ ವಿಧಾನಸಭಾ ಕ್ಷೇತ್ರದ ಆದಿಬಸವೇಶ್ವರ ದೇವಸ್ಥಾನ ಹತ್ತಿರದ ಮೆತ್ತಗಲ್ಲ ಗ್ರಾಮದಲ್ಲಿ ಕೃಷಿ ಸಂಸ್ಕರಣಾ ಘಟಕಕ್ಕಾಗಿ ತರಬೇತಿ ಮತ್ತು ಸಾಮಾನ್ಯ ಸೌಲಭ್ಯ ಕೇಂದ್ರದ ಉದ್ಘಾಟನೆ ನೆರವೇರಿಸಿ ಮಾತನಾಡಿದರು.

ರೈತ ತರಬೇತಿ ಕೇಂದ್ರದಿಂದ ಸಾವಿರಾರು ರೈತರಿಗೆ ಉಪಯೋಗವಾಗುತ್ತದೆ. ಒಳ್ಳೆಯ ಮಾರುಕಟ್ಟೆ ಸಂಪರ್ಕ, ಅವರು ಬೆಳೆದ ಬೆಳೆಗಳ ಮೌಲ್ಯವರ್ಧನೆ ಹೇಗೆ ಮಾಡಬೇಕು ಎಂಬುದು ಸೇರಿದಂತೆ ಇತರೆ ಹಲವಾರು ಮಾಹಿತಿಯನ್ನು ನೀಡಲಾಗುತ್ತದೆ. ಮಳೆ ಸರಿಯಾಗಿ ಆಗದಿದ್ದರೆ ಈ ಭಾಗದ ಜನರು ಬೆಂಗಳೂರು, ಮಂಗಳೂರಿಗೆ ಗೂಳೆ ಹೋಗುತ್ತಾರೆ ಇಂತಹ ತರಬೇತಿ ಕೇಂದ್ರಗಳಿಂದ ಅವರಿಗೆ ಅನುಕೂಲವಾಗಲಿದೆ. ನಮ್ಮ ಪ್ರಧಾನ ಮಂತ್ರಿಗಳು ಹೇಳುವ ಹಾಗೆ ವೋಕಲ್ ಫಾರ್ ಲೋಕಲಗೆ ಇದೊಂದು ಒಳ್ಳೆಯ ಉದಾಹರಣೆಯಾಗಿದೆ ಎಂದರು.

ಪ್ರಧಾನ ಮಂತ್ರಿಗಳ ನಿರ್ದೇಶನದಂತೆ ರೈತರ ಕೃಷಿ ಉಪಕರಣ ತೆರಿಗೆ ಈ ಹಿಂದೆ ಇದ್ದ 12 ಪ್ರತಿಶತದಿಂದ ಈಗ 5 ಪ್ರತಿಶತ ಮಾಡಲಾಗಿದೆ. ಇದರಿಂದ ಅವರ ಟ್ರ್ಯಾಕ್ಟರ್, ಟಿಲ್ಲರ್ ಸೇರಿದಂತೆ ಇತರೆ ಕೃಷಿ ಉಪಕರಣಗಳ ಖರೀದಿಗೆ ಅನುಕೂಲವಾಗಲಿದೆ. ರೈತರ ಬಲವರ್ಧನೆಗಾಗಿ ಇವುಗಳನ್ನು ಕಡಿಮೆ ಮಾಡಿದ್ದೇವೆ. ಪ್ರಧಾನಮಂತ್ರಿಗಳ ಧನ ಧಾನ್ಯ ಯೋಜನೆಯಿಂದ ಆಹಾರ ಸಂಸ್ಕರಣೆ, ಮೌಲ್ಯವರ್ಧನೆ ಜೊತೆಗೆ ರೈತರ ಆರ್ಥಿಕ ಬೆಳವಣಿಗೆಗೆ ಸಹಕಾರಿಯಾಗಲಿದೆ. ಈ ಯೋಜನೆ ಅಡಿಯಲ್ಲಿ ದೇಶದ 100 ಜಿಲ್ಲೆಗಳು ಆಯ್ಕೆಯಾಗಿದ್ದು, ಅವುಗಳಲ್ಲಿ ಕೊಪ್ಪಳ ಜಿಲ್ಲೆಯು ಒಂದಾಗಿದೆ ಇದಕ್ಕಾಗಿ ಬಜೆಟನಲ್ಲಿ 255 ಕೋಟಿ ಅನುದಾನ ನೀಡಲಾಗಿದೆ. ಇದರ ಉದ್ದೇಶ ರೈತರಿಗೆ ಗುಣಮಟ್ಟದ ಬೀಜದ ಜೊತೆಗೆ ಹೊಸ ತಂತ್ರಜ್ಞಾನ ಅವರಿಗೆ ತಲುಪಿಸುವುದಾಗಿದೆ ಎಂದರು.

ಈ ಕಾರ್ಯಕ್ರಮದಲ್ಲಿ ಭಾಗವಹಿಸಿರುವುದಕ್ಕೆ ನನಗೆ ಅತ್ಯಂತ ಸಂತೋಷವಾಗುತ್ತಿದೆ. ಕೊಪ್ಪಳ ಜಿಲ್ಲೆ ಹನುಮ ಜನ್ಮಸ್ಥಳ ಅಂಜನಾದ್ರಿ, ಕಿನ್ನಾಳ ಕಲೆಗಳ ತವರು, ಕೊಪ್ಪಳದ ಜನರಿಗೆ ಇಂದು ಒಳ್ಳೆಯ ಅವಕಾಶ ಸಿಕ್ಕಿದೆ. ಕರ್ನಾಟಕದಿಂದಲೇ ನಾನು ರಾಜ್ಯಸಭಾ ಸದಸ್ಯಯಾಗಿದ್ದೆನೆ. ಕಲ್ಯಾಣ ಕರ್ನಾಟಕದ 7 ಜಿಲ್ಲೆಗಳಲ್ಲಿ ಈ ತರಬೇತಿ ಕೇಂದ್ರಗಳನ್ನು ಮಾಡಲಾಗಿದೆ. ಇದರಿಂದ ರೈತರಿಗೆ ಫುಡ್ ಪ್ರೊಸೆಸಿಂಗ್, ಪ್ಯಾಕೇಜ್ ಜೊತೆಗೆ ಮಾರ್ಕೆಟಿಂಗ್ ಸೌಲಭ್ಯಕ್ಕೆ ಅನುಕೂಲವಾಗಲಿದೆ. ನಮ್ಮೊಂದಿಗೆ ನಬಾರ್ಡ್ ಪರಿಣಿತರು ಇದ್ದಾರೆ. ಅನ್ನದಾತರ ಭವಿಷ್ಯಕ್ಕಾಗಿ ನಾವು ಈ ಕೆಲಸ ಮಾಡಬೇಕಿದೆ. ಕಲ್ಯಾಣ ಕರ್ನಾಟಕ ಭಾಗವನ್ನು ಕರ್ನಾಟಕದ ಅಕ್ಷಯ ಪಾತ್ರೆ ಎಂದು ಕರೆಯುತ್ತಾರೆ. ಗಂಗಾವತಿ ಭಾಗದಲ್ಲಿ ತುಂಗಭದ್ರಾ ನದಿಯಿಂದ ಹೆಚ್ಚಿನ ನೀರಾವರಿ ಇದೆ. ಈ ತರಬೇತಿ ಕೇಂದ್ರಗಳ ಸದುಪಯೋಗವನ್ನು ರೈತರು, ಮಹಿಳೆಯರು ಹಾಗೂ ಸಾರ್ವಜನಿಕರು ಪಡೆದುಕೊಳ್ಳಬೇಕು. ಅವಶ್ಯಕತೆ ಇರುವಲ್ಲಿ ಇಂತಹ ಇನ್ನಷ್ಟು ತರಬೇತಿ ಕೇಂದ್ರಗಳನ್ನು ನಬಾರ್ಡ್ ನವರು ಸ್ಥಾಪಿಸಬೇಕು. ರಾಜ್ಯ ಸರ್ಕಾರಕ್ಕು ಧನ್ಯವಾದಗಳನ್ನು ತಿಳಿಸುತ್ತೇನೆ. ಜಿಲ್ಲಾಡಳಿತದಿಂದಲು ಒಳ್ಳೆಯ ಸಹಕಾರ ಸಿಕ್ಕಿದೆ. ರೈತರ ಲಾಭಕ್ಕಾಗಿ ಈ ಕೆಲಸ ಆಗಬೇಕಿದೆ ಎಂದು ಹೇಳಿದರು.



ಗಂಗಾವತಿ ವಿಧಾನಸಭಾ ಕ್ಷೇತ್ರದ ಶಾಸಕರಾದ ಜಿ.ಜನಾರ್ಧನರೆಡ್ಡಿ ಅವರು ಮಾತನಾಡಿ, ಇಂದು ಇಡೀ ಕಲ್ಯಾಣ ಕರ್ನಾಟಕ ಭಾಗಕ್ಕೆ ಹಬ್ಬದ ದಿನವಾಗಿದ್ದು, ಬೀದರ್, ಕಲಬುರಗಿ, ರಾಯಚೂರು, ಯಾದಗಿರಿ, ಕೊಪ್ಪಳ, ಬಳ್ಳಾರಿ ಮತ್ತು ವಿಜಯನಗರ ಸೇರಿ ಏಳು ಜಿಲ್ಲೆಗಳಲ್ಲಿ ಕೇಂದ್ರ ಸರ್ಕಾರದ ಹಣಕಾಸು ಮತ್ತು ಕಾರ್ಪೊರೇಟ್ ವ್ಯವಹಾರಗಳ ಸಚಿವರು ಈ ಕಾರ್ಯಕ್ರಮ ಹಮ್ಮಿಕೊಂಡಿರುವುದಾಗಿದೆ. ವಿಶೇಷವಾಗಿ ಇದರ ಭಾಗವಾಗಿ ಕೊಪ್ಪಳ ಜಿಲ್ಲೆಯ ಗಂಗಾವತಿ ವಿಧಾನಸಭಾ ಕ್ಷೇತ್ರದ ಅತ್ಯಂತ ಹಿಂದುಳಿದ ಭಾಗವಾದ ಮೆತಗಲ್ಲ ಗ್ರಾಮದಲ್ಲಿ ಕೃಷಿ ಸಂಸ್ಕರಣಾ ಘಟಕಕ್ಕಾಗಿ ತರಬೇತಿ ಮತ್ತು ಸಾಮಾನ್ಯ ಸೌಲಭ್ಯ ಕೇಂದ್ರವು ಉದ್ಘಾಟನೆಯಾಗಿದೆ. ರೈತರ ಹಿತಕ್ಕಾಗಿ, ರೈತರ ಆದಾಯವನ್ನು ಹೆಚ್ಚಿಸುವ ಸಲುವಾಗಿ ಈ ತರಬೇತಿ ಮತ್ತು ಸಾಮಾನ್ಯ ಸೌಲಭ್ಯ ಕೇಂದ್ರವು ಸಹಕಾರಿಯಾಗಲಿದೆ. ಇದರಿಂದ ರೈತರ ಕೌಶಲ್ಯಾಭಿವೃದ್ಧಿ, ಸಬಲೀಕರಣ, ಉದ್ಯೋಗ ಸೃಷ್ಟಿ ಮತ್ತು ಮಹಿಳಾ ಸಬಲೀಕರಣವಾಗಲಿದೆ. ಜಿಲ್ಲೆಯಲ್ಲಿ ಅವಕಾಶವಿರುವ ಕಡೆ ಇಂತಹ ತರಬೇತಿ ಕೇಂದ್ರಗಳನ್ನು ಸ್ಥಾಪನೆ ಮಾಡಬೇಕು ಎಂದರು.

ಕೇಂದ್ರ ಸಚಿವರಾದ ನಿರ್ಮಲಾ ಸೀತಾರಾಮನ್ ರವರು ನಮ್ಮ ದೇಶದಲ್ಲಿ ಸತತವಾಗಿ 8 ಬಾರಿ ಬಜೆಟ್ ಮಂಡಿಸಿ, ಇತಿಹಾಸ ಸೃಷ್ಟಿಸಿರುವ ನಮ್ಮ ದೇಶದ ಹೆಮ್ಮೆಯ ಮಹಿಳೆಯಾಗಿದ್ದಾರೆ. ಪ್ರಧಾನಿ ನರೇಂದ್ರ ಮೋದಿಜಿಯವರ ಕನಸನ್ನು ನನಸಾಗಿಸುವ ದಿಶೇಯಲ್ಲಿ ಮತ್ತು ದೇಶದ ಆರ್ಥಿಕತೆಗೆ ಶಕ್ತಿಯಾಗಿ ಅವರು ಶ್ರಮಿಸುತ್ತಿದ್ದಾರೆ. ಹನುಮನ ಜನ್ಮಸ್ಥಳವಾದ ಅಂಜನಾದ್ರಿ ಬೆಟ್ಟಕ್ಕೆ ದೇಶದ ವಿವಿಧೆಡೆಯಿಂದ ಜನರು ಬರುತ್ತಾರೆ. ಇದರ ಅಭಿವೃದ್ಧಿಗಾಗಿ 1350 ಕೋಟಿ ರೂ. ಮೊತ್ತದ ಪ್ರಸ್ತಾವನೆಯನ್ನು ಸಿದ್ಧಪಡಿಸಿ ರಾಜ್ಯ ಸರ್ಕಾರದ ಮೂಲಕ ಕೇಂದ್ರಕ್ಕೆ ಸಲ್ಲಿಸಲಾಗುವುದು. ಇದಕ್ಕಾಗಿ ಅನುಮೋದನೆ ನೀಡಿ, ರಾಜ್ಯ ಮತ್ತು ಕೇಂದ್ರ ಸರ್ಕಾರದ ಸಹಭಾಗಿತ್ವದಲ್ಲಿ ಅಂಜನಾದ್ರಿ ಬೆಟ್ಟವನ್ನು ಅಭಿವೃದ್ಧಿ ಮಾಡಬೇಕು ಎಂದು ಕೇಂದ್ರ ಸಚಿವರಲ್ಲಿ ಮನವಿ ಮಾಡಿದರು.

ರಾಷ್ಟ್ರೀಯ ಕೃಷಿ ಮತ್ತು ಗ್ರಾಮೀಣಾಭಿವೃದ್ಧಿ ಬ್ಯಾಂಕ್ (ನಬಾರ್ಡ್)ನ ಅಧ್ಯಕ್ಷರಾದ ಕೆ.ವಿ. ಶಾಜಿ ಅವರು ಮಾತನಾಡಿ, ಕೃಷಿ ತರಬೇತಿ ಕೇಂದ್ರ ರೈತರ ಜೀವನದಲ್ಲಿ ಪರಿವರ್ತನೆ ತರಲು ನಬಾರ್ಡ್ ಕೈಗೊಂಡ ಪ್ರಮುಖ ಹೆಜ್ಜೆಯಾಗಿದೆ. ಹಣಕಾಸು ಸಚಿವರಾದ ನಿರ್ಮಲಾ ಸೀತಾರಾಮನ್ ಅವರು ಈ ಹಿಂದೆ ಕಲ್ಯಾಣ ಕರ್ನಾಟಕ ಪ್ರದೇಶದ ರೈತರಿಗಾಗಿ ಈ ಯೋಜನೆಯ ಕನಸು ಕಂಡಿದ್ದರು. ಇಂದು ಅದು ನಿಜವಾಗುತ್ತಿದೆ. ಅವರ ಆಶಯದಂತೆ ನಬಾರ್ಡ್ ಈ ಯೋಜನೆಯನ್ನು ಯಶಸ್ವಿಯಾಗಿ ಜಾರಿಗೊಳಿಸುತ್ತಿದೆ. ರೈತರು ಭಾರತವನ್ನು ಆಹಾರದ ಕಣಜವನ್ನಾಗಿ ಮಾಡುತ್ತಿದ್ದಾರೆ. ಈ ಯೋಜನೆಯ ಉದ್ದೇಶ ಕೃಷಿಯನ್ನು ಅಗ್ರೋಬಿಜಿನೆಸ್ ಆಗಿ ರೂಪಾಂತರಿಸುವುದಲ್ಲದೆ, ಗ್ರಾಮೀಣ ಪ್ರದೇಶಗಳಲ್ಲಿ ಉದ್ಯೋಗ ಸೃಷ್ಟಿಗೂ ಸಹಕಾರ ನೀಡುವುದಾಗಿದೆ. ಕಲ್ಯಾಣ ಕರ್ನಾಟಕ ಭಾಗದ ಅನೇಕ ಜಿಲ್ಲೆಗಳಲ್ಲಿ ಅಗ್ರೋ ಪ್ರೊಸೆಸಿಂಗ್ ಕೇಂದ್ರಗಳನ್ನು ಸ್ಥಾಪಿಸಲು ಹಣಕಾಸು ಸಚಿವರು ಎಂ.ಪಿ.ಎಲ್.ಎ.ಡಿ.ಎಸ್ ನಿಧಿಯಿಂದ ಹಣ ನೀಡಿರುವುದು ಪ್ರಶಂಸನೀಯವಾಗಿದೆ. ಕೊಪ್ಪಳದಲ್ಲಿನ ಈ ಕೇಂದ್ರವು ರೈತರ ಕೌಶಲ್ಯಾಭಿವೃದ್ಧಿ, ಸಾಮರ್ಥ್ಯ ನಿರ್ಮಾಣ ಹಾಗೂ ಮೂಲಸೌಕರ್ಯಕ್ಕೆ ಸಹಾಯಕವಾಗಲಿದೆ ಎಂದರು.

ಸಮಾರಂಭದಲ್ಲಿ ವಿಧಾನ ಪರಿಷತ್ ಸದಸ್ಯರಾದ ಹೇಮಲತಾ ನಾಯಕ, ಕರ್ನಾಟಕ ಸರ್ಕಾರದ ಹಣಕಾಸು ಇಲಾಖೆಯ ಕಾರ್ಯದರ್ಶಿಗಳಾದ ಡಾ. ವಿಶಾಲ ಆರ್., ನಬಾರ್ಡ್ ಡೆಪ್ಯುಟಿ ಡೈರೆಕ್ಟರ್ ಎ.ಕೆ ಸೂದ್, ವನಬಳ್ಳಾರಿ ಗ್ರಾಮ ಪಂಚಾಯತಿ ಅಧ್ಯಕ್ಷರಾದ ಅಂಬಮ್ಮ ಶ್ರೀಕಂಠ ಹುಲಸನಹಟ್ಟಿ, ಕೊಪ್ಪಳ ಜಿಲ್ಲಾಧಿಕಾರಿ ಡಾ. ಸುರೇಶ ಬಿ. ಇಟ್ನಾಳ್, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ವರ್ಣಿತ್ ನೇಗಿ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ.ರಾಮ್ ಎಲ್. ಅರಸಿದ್ಧಿ, ಅಪರ ಜಿಲ್ಲಾಧಿಕಾರಿ ಸಿದ್ರಾಮೇಶ್ವರ ಸೇರಿದಂತೆ ಹಲವು ಜನಪ್ರತಿನಿಧಿಗಳು, ಕೃಷಿ & ಗ್ರಾಮೀಣಾಭಿವೃದ್ಧಿ ರಾಷ್ಟ್ರೀಯ ಬ್ಯಾಂಕ್ (ನಬಾರ್ಡ್) ಬೆಂಗಳೂರಿನ ಅಧಿಕಾರಿಗಳು, ಇರಕಲ್ಲಗಡದ ಗವಿಸಿದ್ದೇಶ್ವರ ರೈತ ಉತ್ಪಾದಕರ ಕಂಪನಿ ಲಿಮಿಟೆಡ್ ಪದಾಧಿಕಾರಿಗಳು ಮತ್ತು ವಿವಿಧ ಇತರೆ ಇಲಾಖೆಗಳ ಅಧಿಕಾರಿಗಳು, ರೈತರು, ಮೆತಗಲ್ ಗ್ರಾಮಸ್ಥರು ಹಾಗೂ ಮತ್ತಿತರರಿದ್ದರು.

## ಕೊಡ್ಲಿಕಾರ ವಿಶ್ವವಿದ್ಯಾಲಯದ ಬ್ಲೂ ಆಗಿ ಆಯ್ಕೆ



ಮೂಡಲಗಿ : ರಾಣಿ ಚೆನ್ನಮ್ಮ ವಿಶ್ವ ವಿದ್ಯಾಲಯದ ಸಹಯೋಗದಲ್ಲಿ ಮೂಡಲಗಿಯ ದೈಹಿಕ ಶಿಕ್ಷಣ ಮಹಾವಿದ್ಯಾಲಯದಲ್ಲಿ ನಿನ್ನೆ ಜರುಗಿದ ಅಂತರ್ ಕಾಲೇಜ್ ಏಕವಲಯ ಯೋಗಾ ಸ್ಪರ್ಧೆಯಲ್ಲಿ ಕಲ್ಲೋಳಿಯ ಬಸವೇಶ್ವರ ಶಿಕ್ಷಣ ಸಂಸ್ಥೆಯ ಕಲಾ ಮಹಾವಿದ್ಯಾಲಯದ ವಿದ್ಯಾರ್ಥಿನಿ ಸವಿತಾ ಭೀಮಪ್ಪ ಕೊಡ್ಲಿಕಾರ ರಾಣಿ ಚೆನ್ನಮ್ಮ ವಿಶ್ವವಿದ್ಯಾಲಯದ ಬ್ಲೂ ಆಗಿ ಆಯ್ಕೆ ಆಗಿರುವುದಕ್ಕೆ ಸಂಸ್ಥೆಯ ಸಂಸ್ಥಾಪಕ ಅಧ್ಯಕ್ಷ ಈರಣ್ಣ ಬೆಳಕೂಡ, ಚೇರ್ಮನರಾದ ರಮೇಶ ಬೆಳಕೂಡ, ಕಾರ್ಯದರ್ಶಿ ಡಾ. ಬೋಜರಾಜ ಬೆಳಕೂಡ, ಆಡಳಿತ ಅಧಿಕಾರಿ ಪ್ರಕಾಶ್ ಗರಗಟ್ಟಿ,ಪ್ರಾಚಾರ್ಯ ಡಾ ಎಸ್ ಎಸ್ ಹೂಗಾರ ಹಾಗೂ ಸಂಸ್ಥೆಯ ಸಿಬ್ಬಂದಿ ವರ್ಗದವರು ಅಭಿನಂದನೆ ಸಲ್ಲಿಸಿದ್ದಾರೆ,

## ಆದಾಯ ಹೆಚ್ಚಳ: ಬೆಳಗಾವಿ ವಿಭಾಗದ ಸಾರಿಗೆ ಸಂಸ್ಥೆ ಅಧಿಕಾರಿಗಳಿಗೆ ಪ್ರಶಂಸಾ ಪತ್ರ

ಬೆಳಗಾವಿ, ಹೊಸದಾಗಿ ಇ-ಮಳಿಗೆ ಆನ್ ಲೈನ್ ತಂತ್ರಾಂಶ ಬಳಸಿಕೊಂಡು ವಾಣಿಜ್ಯ ಆದಾಯವನ್ನು ಹೆಚ್ಚಿಸಿದ ಬೆಳಗಾವಿ ವಿಭಾಗೀಯ ಸಾರಿಗೆ ನಿಯಂತ್ರಣಾಧಿಕಾರಿ ಕೆ.ಎಲ್. ಗುಡೆನ್ನವರ ಹಾಗೂ ವಿಭಾಗದ ಸಾರಿಗೆ ಅಧಿಕಾರಿ ದೇವಕ್ಕ ನಾಯಕ ಅವರಿಗೆ ಪ್ರಶಂಸಾ ಪತ್ರ ನೀಡಿ ಗೌರವಿಸಲಾಗಿದೆ.

ವಾಕರಸಾ ಸಂಸ್ಥೆ ಬೆಳಗಾವಿ ವಿಭಾಗದ ವ್ಯಾಪ್ತಿಯಲ್ಲಿ ಬರುವ ವಾಣಿಜ್ಯ ಮಳಿಗೆಗಳ ಪರವಾನಿಗೆದಾರರಿಂದ ಸೆಪ್ಟೆಂಬರ್-2025 ರ ಮಾಹೆಯಲ್ಲಿ ನೂತನವಾಗಿ ಪರಿಚಯಿಸಿರುವ ಜ-ಒಚಿಟುರಜ ಆಟಿಟುಟಜ ತಂತ್ರಾಂಶದ ಮೂಲ ಹೆಚ್ಚಿನ ವಾಣಿಜ್ಯ ಆದಾಯವನ್ನು ಭರಿಸಿಕೊಳ್ಳುವ ಗುರಿ ಸಾಧನೆಗೈದಿರುತ್ತಾರೆ.

ಇದನ್ನು ಪರಿಗಣಿಸಿ ಇಬ್ಬರು ಅಧಿಕಾರಿಗಳಿಗೆ ವಾಯವ್ಯ ಸಾರಿಗೆ ಸಂಸ್ಥೆಯ ವ್ಯವಸ್ಥಾಪಕ ನಿರ್ದೇಶಕರಾದ ಪ್ರಿಯಾಂಗಾ ಎಂ. ಅವರು ಪ್ರಶಂಸಾ ಪತ್ರವನ್ನು ನೀಡಿ ಗೌರವಿಸಿದರು.

## "ಗ್ರಾಮ ಸ್ವರಾಜ್ಯ ದಾರಿ" ಕೈಪಿಡಿ ಬಿಡುಗಡೆ ಕಾರ್ಯಕ್ರಮ

ಬೆಳಗಾವಿ, : ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಬೆಳಗಾವಿ, ಮಹಾತ್ಮ ಗಾಂಧಿ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ ರಾಜ್ ವಿಶ್ವವಿದ್ಯಾಲಯ ಗದಗ ಹಾಗೂ ಸ್ಪಂದನ ಸಂಸ್ಥೆ (ರಿ) ಇವರ ಸಹಯೋಗದಲ್ಲಿ ಸಾಮಾಜಿಕ ನ್ಯಾಯ ಮತ್ತು ಹೊಣೆಗಾರಿಕೆಯತ್ತ ಸ್ಥಳೀಯ ಆಡಳಿತ ವ್ಯವಸ್ಥೆಯನ್ನು ಬಲಪಡಿಸುವ ಕುರಿತು ಗ್ರಾಮ ಪಂಚಾಯತಿ ಚುನಾಯಿತ ಸದಸ್ಯರ ಸಮಾವೇಶ ಹಾಗೂ ಗ್ರಾಮ ಸ್ವರಾಜ್ಯದ ದಾರಿ ಕೈಪಿಡಿ ಬಿಡುಗಡೆ ಕಾರ್ಯಕ್ರಮವು ಅಕ್ಟೋಬರ, 17, 2025 ರಂದು ಬೆಳಿಗ್ಗೆ 10.30 ಗಂಟೆಗೆ ಕಣಬರ್ಗಿ ರಸ್ತೆಯಲ್ಲಿನ ಮಾಲಿಯಾನ್ ಬಾಕ್ವೆಟ್ ಹಾಲ್‌ನಲ್ಲಿ ಜರುಗಲಿದೆ.

## ಭಾಗ್ಯಲಕ್ಷ್ಮೀ ಯೋಜನೆ ಫಲಾನುಭವಿಗಳ ಗಮನಕ್ಕೆ

ಬೆಳಗಾವಿ, : 2006-07 ನೇ ಸಾಲಿಗೆ ಜನಿಸಿದ ಹೆಣ್ಣು ಮಕ್ಕಳಿಗೆ 18 ವರ್ಷ ತುಂಬಿದವರಾಗಿದ್ದು, ಭಾಗ್ಯಲಕ್ಷ್ಮೀ ಯೋಜನೆ ಫಲಾನುಭವಿಗಳಾದ ಅವರು, ಪರಿಪಕ್ವ ಮೊತ್ತ ಪಡೆಯಲು 31 ಅಕ್ಟೋಬರ 2025 ರ ಒಳಗಾಗಿ ಫಲಾನುಭವಿಗಳು ಯೋಜನೆಗೆ ಸಂಬಂಧಿಸಿದ ಎಲ್ಲಾ ದಾಖಲೆಗಳನ್ನು ಬೆಳಗಾವಿ (ಗ್ರಾಮೀಣ) ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳ ಕಛೇರಿಗೆ ಅಥವಾ ತಮ್ಮ ವ್ಯಾಪ್ತಿಯ ಅಂಗನವಾಡಿ ಕೇಂದ್ರಗಳಿಗೆ ಸಲ್ಲಿಸಬಹುದಾಗಿದೆ.
ನಿಗದಿತ ದಿನಾಂಕದೊಳಗೆ ಪ್ರಸ್ತಾವಣೆ ಸಲ್ಲಿಸದಿದ್ದಲ್ಲಿ ಅಂತವರು ಯೋಜನೆಯಿಂದ ವಂಚಿತರಾಗುತ್ತೀರಿ ಎಂದು ಬೆಳಗಾವಿ (ಗ್ರಾಮೀಣ) ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳು ಪ್ರಕಟಣೆಯಲ್ಲಿ ಕೋರಿದ್ದಾರೆ.

## ಅಪರಿಚಿತ ವ್ಯಕ್ತಿ ಶವ ಪತ್ತೆ

ಬೆಳಗಾವಿ, : ಹುಕ್ಕೇರಿ ತಾಲೂಕಿನ ಘೋಡಗೇರಿ ಗ್ರಾಮದ ಬಳಿ ಸುಮಾರು 35 ರಿಂದ 40 ವರ್ಷ ವಯಸ್ಸಿನ ಅಪರಿಚಿತ ವ್ಯಕ್ತಿ ಘಟಪ್ರಭ ನದಿಯ ಬಲದಂಡೆ ಕಾಲುವೆಯ ನೀರಲ್ಲಿ ಬಿದ್ದು ಮರಣ ಹೊಂದಿರುತ್ತಾನೆ ಹೊರತಾಗಿ ಅವನ ಸಾವಿನಲ್ಲಿ ಬೇರೆ ಯಾವುದೇ ಸಂಶಯ ಇರುವುದಿಲ್ಲ ಎಂದು ಯಮಕನಮರಡಿ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿರುತ್ತದೆ.
ಸುಮಾರು 30 ರಿಂದ 40 ವರ್ಷ ವಯಸ್ಸಿನ ಅಪರಿಚಿತ ವ್ಯಕ್ತಿಯು 5.5 ಅಡಿ ಎತ್ತರ, ಸಧೃಢ ಮೈಕಟ್ಟು, ಗೋದಿ ಬಣ್ಣ, ಕಪ್ಪು ಕೂದಲು, ಬಿಳಿ ಬಣ್ಣದ ಶರ್ಟ, ಕಪ್ಪು ಬಣ್ಣದ ಬಣಿಯನ್, ನೀಲಿ ಬಣ್ಣದ ಪ್ಯಾಂಟ್ ಧರಿಸಿರುತ್ತಾನೆ. ಬಲಗೈಯಲ್ಲಿ ಸುರುಳಿಯಾಗಿ ಸುತ್ತಿರುವ ಕೇಸರಿ ಬಣ್ಣದ ದಾರ ಇರುತ್ತದೆ.
ಅಪರಿಚಿತ ವ್ಯಕ್ತಿಯ ವಾರಸುದಾರರ ಬಗ್ಗೆ ಮಾಹಿತಿ ದೊರೆತಲ್ಲಿ ಯಮಕನಮರಡಿ ಪೊಲೀಸ ಠಾಣೆ ದೂರವಾಣಿ ಸಂಖ್ಯೆ: 8277967404, 9480804073 ಅಥವಾ ಜಿಲ್ಲಾ ಕಂಟ್ರೋಲ್ ರೂಮ್ ಸಂಖ್ಯೆ: 0831-2405231 ಗೆ ಸಂಪರ್ಕಿಸಬಹುದಾಗಿದೆ ಎಂದು ಪ್ರಕಟಣೆಯಲ್ಲಿ ತಿಳಿಸಲಾಗಿದೆ.

## ಕಾರ್ಮಿಕರ ಭವಿಷ್ಯ ನಿಧಿ ಹಿಂಪಡೆಯುವಿಕೆ ಸರಳೀಕರಿಸಿ ಕೇಂದ್ರ ಸರ್ಕಾರ-ಸಂಸದ ಈರಣ್ಣ ಕಡಾಡಿ

ಮೂಡಲಗಿ : ಕೇಂದ್ರ ಸರ್ಕಾರವು ಕಾರ್ಮಿಕರ ಭವಿಷ್ಯ ನಿಧಿ (ಇಪಿಎಫ್‌ಒ) ಹಿಂಪಡೆಯುವ 13 ಕಠಿಣ ನಿಯಮ ಸರಳೀಕರಿಸಿ ಶೇ.100ರಷ್ಟು ಇಪಿಎಫ್ ಹಣ ಹಿಂಪಡೆಯುವಿಕೆಗೆ ಅವಕಾಶ ನೀಡಿದೆ ಈ ಹೊಸ ನಿಯಮದಿಂದ ಸುಮಾರು 7 ಕೋಟಿ ಉದ್ಯೋಗಿಗಳಿಗೆ ಅನುಕೂಲವಾಗಲಿದೆ ಎಂದು ರಾಜ್ಯಸಭಾ ಸಂಸದ ಈರಣ್ಣ ಕಡಾಡಿ ಅವರು ಸರ್ಕಾರದ ಕ್ರಮವನ್ನು ಸ್ವಾಗತಿಸಿದ್ದಾರೆ.
ಪತ್ರಿಕಾ ಹೇಳಿಕೆ ನೀಡಿದ ಅವರು ಕಾರ್ಮಿಕರ ಭವಿಷ್ಯ ನಿಧಿ ಯೋಜನೆಯಡಿ ಈಗ 'ಅತ್ಯವಶ್ಯಕ ಅಗತ್ಯಗಳು', 'ವಸತಿ ಅಗತ್ಯಗಳು' ಮತ್ತು 'ವಿಶೇಷ ಸಂದರ್ಭಗಳು' ಎಂಬ ಮೂರು ವಿಭಾಗಗಳಾಗಿ ವಿಂಗಡಿಸಲಾಗಿದೆ. ಶಿಕ್ಷಣಕ್ಕಾಗಿ ಪಿಎಫ್ ಹಣವನ್ನು ಭಾಗಶಃ ಹಿಂಪಡೆಯಲು ಈಗ 10 ಬಾರಿ ಅವಕಾಶವಿದೆ. ಮದುವೆಗಾಗಿ ಹಣ ತೆಗೆಯಲು 5 ಬಾರಿ ಅವಕಾಶ ನೀಡಲಾಗಿದೆ. ಈ ಮೊದಲು



ಶಿಕ್ಷಣ ಮತ್ತು ಮದುವೆಗೆ ಕೇವಲ 3 ಬಾರಿ ಮಾತ್ರ ಹಣ ಹಿಂಪಡೆಯಲು ಸಾಧ್ಯವಿತ್ತು. ಪಿಎಫ್ ಖಾತೆಯಿಂದ ಹಣವನ್ನು ಭಾಗಶಃ ಹಿಂಪಡೆಯಲು ಕನಿಷ್ಠ ಸೇವಾ ಅವಧಿಯನ್ನು 12 ತಿಂಗಳಿಗೆ ಇಳಿಕೆ ಮಾಡಲಾಗಿದೆ ಎಂದರು.
'ವಿಶೇಷ ಸಂದರ್ಭಗಳು' ಎಂಬ ವಿಭಾಗದ ಅಡಿಯಲ್ಲಿ, ಪ್ರಕೃತಿ ವಿಕೋಪ, ಕಾರ್ಖಾನೆ ಲಾಕೌಟ್, ನಿರಂತರ ನಿರುದ್ಯೋಗ ಅಥವಾ ಸಾಂಕ್ರಾಮಿಕ ರೋಗಗಳಂತಹ ಕಾರಣಗಳನ್ನು ನೀಡದೆಯೇ ಹಣವನ್ನು ಹಿಂಪಡೆಯಲು ಈಗ ಅವಕಾಶವಿದೆ. ಈ ಸರಳೀಕರಣದಿಂದಾಗಿ ಉದ್ಯೋಗಿಗಳಿಗೆ ತಮ್ಮ ಹಣವನ್ನು ಅಗತ್ಯ ಸಂದರ್ಭಗಳಲ್ಲಿ ಸುಲಭವಾಗಿ ಬಳಸಿಕೊಳ್ಳಲು ಅನುಕೂಲವಾಗಲಿದೆ. ಈ ಹೊಸ ನಿಯಮಗಳು ಉದ್ಯೋಗಿಗಳ ಆರ್ಥಿಕ ಭದ್ರತೆಗೆ ಇನ್ನಷ್ಟು ಬಲ ತುಂಬಲಿವೆ ಎಂದು ಹರ್ಷ ವ್ಯಕ್ತ ಪಡಿಸಿದರು.
ಈ ಮಹತ್ವದ ನಿರ್ಧಾರ ಕೈಗೊಂಡ ಪ್ರಧಾನಿ ನರೇಂದ್ರ ಮೋದಿ ಅವರಿಗೆ ಹಾಗೂ ಕಾರ್ಮಿಕ ಸಚಿವ ಮನ್ಸುಖ್ ಮಾಂಡವಿಯಾ ಅವರಿಗೆ ದೇಶದ ಜನತೆಯ ಪರವಾಗಿ ಹೃತ್ಪೂರ್ವಕ ಧನ್ಯವಾದಗಳನ್ನು ಸಲ್ಲಿಸಲಾಗುವುದು ಎಂದು ಸಂಸದ ಈರಣ್ಣ ಕಡಾಡಿ ಹೇಳಿದ್ದಾರೆ.

# ಡಿ.13 ರಂದು ಲೋಕ ಅದಾಲತ

ಬೆಳಗಾವಿ, : ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಅಧ್ಯಕ್ಷರು ಹಾಗೂ ಪ್ರಭಾರಿ ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರಾದ ಗಂಗಾಧರ ಕೆ.ಎನ್ ಇವರ ಮಾರ್ಗದರ್ಶನದಲ್ಲಿ ಬೆಳಗಾವಿಯ ಎಲ್ಲಾ ನ್ಯಾಯಾಲಯಗಳಲ್ಲಿ ಹಾಗೂ ಎಲ್ಲಾ ತಾಲೂಕುಗಳ ನ್ಯಾಯಾಲಯಗಳಲ್ಲಿ ಜಿಲ್ಲೆಯ ಎಲ್ಲಾ ನ್ಯಾಯಾಧೀಶರ ಹಾಗೂ ವಕೀಲರ ಸಹಯೋಗದಲ್ಲಿ ದಿನಾಂಕ: 13-12-2025 ರಂದು ಬೆಳಿಗ್ಗೆ 11 ಗಂಟೆಗೆ ಲೋಕ ಅದಾಲತ ಹಮ್ಮಿಕೊಳ್ಳಲಾಗಿದೆ.
ರಾಷ್ಟ್ರೀಯ ಕಾನೂನು ಸೇವೆಗಳ ಪ್ರಾಧಿಕಾರ ಹಾಗೂ ಕರ್ನಾಟಕ ರಾಜ್ಯ ಕಾನೂನು ಸೇಗಳ ಪ್ರಾಧಿಕಾರದ ಆದೇಶದ ಮೇರೆಗೆ ವೈವಾಹಿಕ, ಕೌಟುಂಬಿಕ ಮತ್ತು ಪಾಲು ವಿಭಾಗಕ್ಕೆ, ಬ್ಯಂಕುಗಳಿಗೆ ಸಂಬಂಧಪಟ್ಟ ಪ್ರಕರಣಗಳು ಹಾಗೂ ಚೆಕ್ ಬೌನ್ಸ್, ಭಾರತ ದಂಡ ಸಂಹಿತೆಯ ರಾಜಿಯಾಗಬಲ್ಲ ಪ್ರಕರಣಗಳು, ಹಣಕಾಸಿನ ದಾವೆಗಳು, ಸಿವಿಲ್ ವ್ಯಜ್ಯಗಳು, ಮೋಟಾರ ವಾಹನ ಅಪಘಾತಕ್ಕೆ ಪರಿಹಾರಕ್ಕೆ ಸಂಬಂಧಪಟ್ಟ ಪ್ರಕರಣಗಳು, ಕಂದಾಯ ಪ್ರಕರಣಗಳು, ಮತ್ತು ಇತರೆ ಎಲ್ಲಾರೀತಿಯ ರಾಜಿಯಾಗಬಹುದಾದಂತಹ ಪ್ರಕರಣಗಳ ಕುರಿತು ಹಾಗೂ ನ್ಯಾಯಾಲಯಗಳಲ್ಲಿ ತನಿಖೆಗೆ ಬಾಕಿ ಇರುವ ಪ್ರಕರಣಗಳನ್ನು ಪರಿಹರಿಸಿಕೊಳ್ಳಬಹುದಾಗಿದೆ.
ಸದರಿ ಪ್ರಕರಣಗಳನ್ನು ಹಾಗೂ ವ್ಯಾಜ್ಯ ಪೂರ್ವ ಪ್ರಕರಣಗಳನ್ನು ತೆಗೆದುಕೊಂಡು ರಾಜಿ ಸಂಧಾನದ ಮುಖಾಂತರ ಇತ್ಯರ್ಥಪಡಿಸಲಾಗುವುದು. ಬ್ಯಾಂಕುಗಳ, ಕಕ್ಷಿದಾರರು ಹಾಗೂ ಜನ ಸಾಮಾನ್ಯರು ಈ ಅವಕಾಶವನ್ನು ಸದುಪಯೋಗ ಪಡೆದುಕೊಳ್ಳಬಹುದಾಗಿದೆ. ಹೆಚ್ಚಿನ ಮಾಹಿತಿಗಾಗಿ ಸಂಬಂಧಪಟ್ಟ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಬೆಳಗಾವಿ/ತಾಲೂಕಾ ಕಾನೂನು ಸೇವಾ ಸಮಿತಿಗಳನ್ನು ಸಂಪಕಿಸಬಹುದಾಗಿದೆ ಎಂದು ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ದೀಪಾವಳಿ ಹಬ್ಬದ ಪ್ರಯುಕ್ತ ದೀಪ ಸಂಜೀವಿನಿ ಕಾರ್ಯಕ್ರಮ ದೀಪಗಳ ಮಾರಾಟ ಮೇಳಕ್ಕೆ ಸಿಇಓ ಕುರೇರ ಚಾಲನೆ



ಬಾಗಲಕೋಟೆ: : ನವನಗರದ ಬಸ್ ನಿಲ್ದಾಣದಲ್ಲಿ ದೀಪಾವಳಿ ಹಬ್ಬದ ನಿಮಿತ್ಯವಾಗಿ ಸ್ವ-ಸಹಾಯ ಸಂಘಗಳ ಸದಸ್ಯರು ಉತ್ಪಾದಿಸಿದ ದೀಪಗಳ ಮಾರಾಟ ಮೇಳಕ್ಕೆ ಜಿ.ಪಂ ಮುಖ್ಯ ಕಾರ್ಯನಿವಾಹಕ ಅಧಿಕಾರಿ ಶಶಿಧರ ಕುರೇರ್ ಚಾಲನೆ ನೀಡಿದರು.

ಜಿಲ್ಲಾ ಪಂಚಾಯತ, ತಾಲೂಕಾ ಪಂಚಾಯತ, ಸಂಜೀವಿನಿ ಕರ್ನಾಟಕ ರಾಜ್ಯ ಗ್ರಾಮೀಣ ಜೀವನೋಪಾಯ ಸಂವರ್ಧನ ಅಭಿಯಾನ, ಕೌಶಲ್ಯಾಭಿವೃದ್ದಿ ಉದ್ಯಮಶೀಲತೆ ಹಾಗೂ ಜೀವನೋಪಾಯ ಇಲಾಖೆ ಸಹಯೋಗದಲ್ಲಿ ಹಮ್ಮಿಕೊಂಡ ದೀಪ ಸಂಜೀವಿನಿ ವಿವಿಧ ದೀಪಗಳ ಮಾರಾಟ ಮೇಳಕ್ಕೆ ಚಾಲನೆ ನೀಡಿ ಮಾತನಾಡಿದ ಅವರು ಗ್ರಾಮೀಣ ಭಾಗದ ಮಹಿಳೆಯರನ್ನು ಸ್ವಾವಲಮಬಿಗಳನ್ನಾಗಿ ಮಾಡುವ ಉದ್ದೇಶದಿಂದ ದೀಪ ಸಂಜೀವಿನಿ ಕಾರ್ಯಕ್ರಮ ಆರಂಭಿಸಲಾಗಿದೆ. ಸ್ವ-ಸಹಾಯ ಗುಂಪುಗಳ ಬಲವರ್ಧನೆಗೆ ಇದು ಒಂದು ಪ್ರಮುಖ ಹಂತವಾಗಿದೆ ಎಂದರು.
ಗ್ರಾಮೀಣ ಮಹಿಳೆಯ ಕೈಯಿಂದ ತಯಾರಾದ ಅಕ್ಕಾ ಬ್ರ್ಯಾಂಡ್ ಉತ್ಪನ್ನಗಳು ಗುಣಮಟ್ಟ ಮತ್ತು ವಿಶ್ವಾಸಕ್ಕೆ ಹೆಸರಾಗಿವೆ. ದೀಪಾವಳಿ ಹಬ್ಬದ ನಿಮಿತ್ಯ ವಿವಿಧ ಮಾದರಿಯ ಹಾಗೂ ವಿನ್ಯಾಸವುಳ್ಳ ದೀಪಗಳನ್ನು ತಯಾರಿಸಿ ಮಾರಾಟ ಮಾಡಲು ಮೇಳ ಹಮ್ಮಿಕೊಳ್ಳಲಾಗಿದೆ ಎಂದು ಹೇಳಿದರು. ನಂತರ ಸ್ವ-ಸಹಾಯ ಗುಂಪುಗಳ ಸದಸ್ಯರು ತಯಾರಿಸಿರುವ ವಿವಿಧ ವಿನ್ಯಾಸಗಳ ದೀಪಗಳನ್ನು ವೀಕ್ಷಣೆ ಮಾಡಿದರು.
ಕಾರ್ಯಕ್ರಮದಲ್ಲಿ ಜಿ.ಪಂ ಉಪ ಕಾರ್ಯದರ್ಶಿ ಎನ್. ವಾಯ್.ಬಸರಿಗಿಡದ, ಸಹಾಯಕ ಯೋಜನಾಧಿಕಾರಿ ಭೀಮಪ್ಪ ತಳವಾರ, ಬಾಗಲಕೋಟೆ ಘಟಕ ವ್ಯವಸ್ಥಾಪಕ ಕೃಷ್ಣಪ್ಪ ಚವ್ಹಾಣ ಸೇರಿದಂತೆ ಸ್ವ-ಸಹಾಯ ಗುಂಪಿನ ಸದಸ್ಯರು ಉಪಸ್ಥಿತರಿದ್ದರು.
ಕಾರ್ಯಕ್ರಮದಲ್ಲಿ ಮಹಿಳಾ ಸ್ವಸಹಾಯ ಗುಂಪಿನ ಸದಸ್ಯರು ತಮ್ಮ ಯಶೋಗಾಥೆಗಳನ್ನು ಹಂಚಿಕೊಂಡರು. ತರಬೇತಿ, ಉಳಿತಾಯ, ಸ್ವ ಉದ್ಯೋಗ ಮತ್ತು ಸಣ್ಣ ಕೈಗಾರಿಕಾ ಚಟುವಟಿಕೆಗಳ ಕುರಿತು ಮಾಹಿತಿ ನೀಡಿದರು.

## ಬನಹಟ್ಟಿ ಎಸ್‌ಆರ್‌ಎ ವಿದ್ಯಾರ್ಥಿಗಳು ರಾಜ್ಯಮಟ್ಟಕ್ಕೆ ಆಯ್ಕೆ



ರಬಕವಿ-ಬನಹಟ್ಟಿ,ಅ16: ಬನಹಟ್ಟಿಯ ಎಸ್ ಆರ್ ಎ ಪ. ಪೂ. ಕಾಲೇಜು ವಿದ್ಯಾರ್ಥಿಗಳು ಇತ್ತಿಚಿಗೆ ಮುಕ್ತಾಯಗೊಂಡ ಜಿಲ್ಲಾ ಮಟ್ಟದ ವಿವಿಧ ಸ್ಪರ್ಧೆಗಳಲ್ಲಿ ವಿಜೇತರಾಗಿ ರಾಜ್ಯಮಟ್ಟಕ್ಕೆ ಆಯ್ಕೆಯಾಗಿದ್ದಾರೆ ಎಂದು ಪ್ರಾಚಾರ್ಯ ಬಿ.ಆರ್ ಗೊಡ್ಡಾಳೆ ತಿಳಿಸಿದರು.
ಎಂ.ಆರ್.ದೊಡ್ಡಪ್ಪಗೋಳ ಎತ್ತರ ಜಿಗಿತ ದ್ವಿತೀಯ, ಬಿ.ಪಿ. ಧೋತ್ರ. 72 ಕೆ.ಜಿ.ವಿಭಾಗದ ರೋಮನ್ ಕುಸ್ತಿಯಲ್ಲಿ ಪ್ರಥಮ ಮತ್ತು ಗುಂಡು ಎಸೆತದಲ್ಲಿ ದ್ವಿತೀಯ, 60 ಕೆ.ಜಿ. ಜೂಡೋದಲ್ಲಿ ಕಲ್ಮೇಶ ಹನಗಂಡಿ ಪ್ರಥಮ, ಪ್ರಜ್ವಲ ಸಣಕಲ್ ಚೆಸ್ ನಲ್ಲಿ ಪ್ರಥಮ, ಅಪೂರ್ವಾ ಜಾಧವ 57 ಕೆ.ಜಿ. ಫ್ರೀಸ್ಟೈಲ್ ಕುಸ್ತಿಯಲ್ಲಿ ಪ್ರಥಮ, ಅನುಷಾ ಬಿರಾದಾರಪಾಟೀಲ: 70 ಕೆ.ಜಿ.ಜುಡೋ ವಿಭಾಗದಲ್ಲಿ ದ್ವಿತೀಯ ಸ್ಥಾನ ಪಡೆದುಕೊಂಡಿದ್ದಾರೆ.
ಅದೇ ರೀತಿ ಗುಂಪು ಸ್ಪರ್ಧೆಗಳಲ್ಲಿ ಸುದೀಪ ಈಟಿ, ಸುಮೀತ ಈಟಿ ಮತ್ತು ಆಕಾಶ ಮುಂಡಾಸರನ್ನು ಒಳಗೊಂಡ ಟೇಬಲ್ ಟೆನ್ನಿಸ್ ತಂಡ ಪ್ರಥಮ ಸ್ಥಾನ, ಎಫ್.ಆರ್.ತಾಂಬೋಳಿ, ಓ.ಎ.ಪತ್ತಾರ, ಎ.ಜೆ.ಉಮರಾಣಿ ವಿದ್ಯಾರ್ಥಿಗಳು ಖೋಖೋದಲ್ಲಿ ಜಿಲ್ಲಾ ತಂಡಕ್ಕೆ ಮತ್ತು ಎಸ್.ಜಿ.ಬೆಂಡವಾಡ, ಪಿ.ಕೆ.ಕೋಪರ್ಡೆ, ಆಯ್.ಆರ್.ಸಿಂದೂರ, ಎಸ್.ಎಂ.ಹಿಪ್ಪರಗಿ, ಎಂ.ಕೆ.ಜನವಾಡ ಮತ್ತು ಎಸ್.ಆರ್.ಅಬಕಾರ ಜಿಲ್ಲಾ ಹಾಕಿ ತಂಡಕ್ಕೆ ಆಯ್ಕೆಯಾಗಿದ್ದು ಇವರು ರಾಜ್ಯ ಮಟ್ಟದಲ್ಲಿ ಸ್ಪರ್ಧೆ ಮಾಡಲಿದ್ದಾರೆ. ಇವರ ಸಾಧನೆಗೆ ಜನತಾ ಶಿಕ್ಷಣ ಸಂಘದ ಚೇರಮನ್ನರು, ಸರ್ವ ಸದಸ್ಯರು, ಕಾಲೇಜಿನ ದೈಹಿಕ ನಿರ್ದೇಶಕ ಶಂಕರ ಸೊಲ್ಲಾಪುರ, ಸಿಬ್ಬಂದಿ ವರ್ಗ ಹರ್ಷ ವ್ಯಕ್ತ ಪಡಿಸಿದ್ದಾರೆ.


## ಕೊಪ್ಪಳದಲ್ಲೇ ಪ್ರಪ್ರಥಮ ಬಾರಿಗೆ ಗಾಳಿಪಟ ಸ್ಪರ್ಧೆ



ಕೊಪ್ಪಳ : ವಿಶ್ವ ಹೃದಯ ದಿನಾಚರಣೆಯ ಅಂಗವಾಗಿ ಕೆ.ಎಸ್. ಆಸ್ಪತ್ರೆ ವತಿಯಿಂದ ಅಕ್ಟೋಬರ್ 18ರಂದು ಜಿಲ್ಲಾ ಮೈದಾನದಲ್ಲಿ ಗಾಳಿಪಟ ಸ್ಪರ್ಧೆ ಹಾಗೂ ಗಾಳಿಪಟ ಪ್ರದರ್ಶನ ಕಾರ್ಯಕ್ರಮವನ್ನು ಭವ್ಯವಾಗಿ ಹಮ್ಮಿಕೊಳ್ಳಲಾಗಿದೆ.
ಕಾರ್ಯಕ್ರಮದಲ್ಲಿ ಅತಿಥಿಗಳಾಗಿ ಡಾ. ರಾಮ್ ಎಲ್. ಅರಸಿದ್ದಿ(ಪೊಲೀಸ್ ವರಿಷ್ಠಾಧಿಕಾರಿ (ಎಸ್.ಪಿ.) ಕೊಪ್ಪಳ ಜಿಲ್ಲೆ, ಡಾ. ಬಸವರಾಜ ಎಸ್. ಕ್ಯಾವಟರ್ (ಮುಖ್ಯಸ್ಥರು, ಕೆ ಎಸ್ ಆಸ್ಪತ್ರೆ ಕೊಪ್ಪಳ), ಡಾ. ಲಿಂಗರಾಜು ಟಿ. (ಜಿಲ್ಲಾ ಆರೋಗ್ಯಾಧಿಕಾರಿ), ಡಾ. ಕೆ.ಜಿ. ಕುಲಕರ್ಣಿ (ಹಿರಿಯ ಕುಟುಂಬ ವೈದ್ಯರು), ಡಾ. ಧನ್ ರೆಡ್ಡಿ (ನಿವೃತ್ತ ಜಿಲ್ಲಾ ಆರೋಗ್ಯಾಧಿಕಾರಿ), ಡಾ. ರುದ್ರೇಶ್ (ಕಾರ್ಡಿಯಾಲಜಿಸ್ಟ್) ಹಾಗೂ ಡಾ. ಗಗನ (ಇಂಟೆನ್ಸಿವಿಸ್ಟ್) ಉಪಸ್ಥಿತರಿರಲಿದ್ದಾರೆ.
ಈ ಸಂದರ್ಭದಲ್ಲಿ ಹೃದಯದ ಆರೋಗ್ಯ ಜಾಗೃತಿ ಕುರಿತು ಉಪನ್ಯಾಸ ಹಾಗು ಅಕಖ **(Cardio Pulmonary Resuscitation)** ಪ್ರಾಯೋಗಿಕ ಪ್ರದರ್ಶನ ನೀಡಲಿದ್ದಾರೆ.
ಕಾರ್ಯಕ್ರಮದ ಭಾಗವಾಗಿ ಮೂರು ವಿಭಾಗಗಳಲ್ಲಿ ಗಾಳಿಪಟ ಸ್ಪರ್ಧೆ ನಡೆಯಲಿದ್ದು, ಜೊತೆಗೆ ಟೀಮ್ ಮಂಗಳೂರು ವತಿಯಿಂದ ಅಂತರಾಷ್ಟ್ರೀಯ ಖ್ಯಾತಿಯ ಗಾಳಿಪಟ ಪ್ರದರ್ಶನವೂ ನಡೆಯಲಿದೆ

# ಲಕ್ಷ್ಮೀ ದೇವಿ ಜಾತ್ರಾಮಹೋತ್ಸವ

ಜಮಖಂಡಿ : ಶಿರೋಳ ಗ್ರಾಮದಲ್ಲಿ ಭಕ್ತಿ ಭಾವದೊಂದಿಗೆ ಲಕ್ಷ್ಮೀ ದೇವಿ ಜಾತ್ರಾಮಹೋತ್ಸವ ವನ್ನು ಹಮ್ಮಿಕೊಳ್ಳಲಾಗಿದೆ ಎಂದು ಮಹಾಲಕ್ಷ್ಮೀ ಗದ್ದುಗೆ ಪೂಜಾರಿ ಬಸವರಾಜ ಮಹಾಲಿಂಗಪುರ ಹೇಳಿದರು.
ತೋಟದಲ್ಲಿರುವ ಲಕ್ಷ್ಮೀ ದೇವಿ ದೇವಸ್ಥಾನದಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಜಾತ್ರೆಯು ಧಾರ್ಮಿಕ ಉತ್ಸವವಾಗಿದ್ದು ಸುತ್ತಮುತ್ತಲಿನ ಗ್ರಾಮಗಳಿಂದ ಭಕ್ತರು ಭಾರೀ ಸಂಖ್ಯೆಯಲ್ಲಿ ಆಗಮಿಸುವ ನಿರೀಕ್ಷೆಯಿದೆ ಎಂದು ತಿಳಿಸಿದರು.
ಜಾತ್ರೆಯು ಅಕ್ಟೋಬರ್ 17ರಂದು ಬೆಳಗ್ಗೆ 6 ಗಂಟೆಯಿಂದ 11 ಗಂಟೆಯವರೆಗೆ ನಡೆಯಲಿದ್ದು, ಈ ವೇಳೆ ಯಜ್ಞ ಹೋಮ ಹಾಗೂ ರುದ್ರಾಭಿಷೇಕ ಪೂಜೆಯು ವಿಜೃಂಭಣೆಯಿಂದ ಜರುಗಲಿದೆ. ಇದೇ ಸಂದರ್ಭದಲ್ಲಿ 501 ಮುತ್ತೈದೆಯರಿಗೆ ಉಡಿತುಂಬುವ ಧಾರ್ಮಿಕ ಕಾರ್ಯಕ್ರಮವನ್ನು ಆಯೋಜಿಸಲಾಗಿದೆ. ನಂತರ ಮಧ್ಯಾಹ್ನ 12 ಗಂಟೆಗೆ ಅನ್ನಪ್ರಸಾದ ವಿತರಣೆ ನಡೆಯಲಿದೆ ಎಂದರು



ಧಾರ್ಮಿಕ ಕಾರ್ಯಕ್ರಮದ ಜೊತೆಗೆ ಜನಮನ ಸೆಳೆಯುವ ಜಿದ್ದಾ ಜಿದ್ದಿ ಟಗರಿನ ಕಾಳಗ ಸ್ಪರ್ಧೆಗಳು ಕೂಡ ಆಯೋಜಿಸಲ್ಪಟ್ಟಿವೆ. ಹಾಲಲ್ಲಿ ಟಗರಿನ ಕಾಳಗ, ಎರಡು ಹಲ್ಲಿನ ಟಗರಿನ ಕಾಳಗ, ನಾಲ್ಕು ಹಲ್ಲಿನ ಟಗರಿನ ಕಾಳಗ, ಆರು ಹಲ್ಲಿನ ಟಗರಿನ ಕಾಳಗ ಹಾಗೂ ಮುಕ್ತ ಓಪನ್ ಹಲ್ಲಿನ ಟಗರಿನ ಕಾಳಗ ಹೀಗೆ ವಿವಿಧ ಹಂತದ ಸ್ಪರ್ಧೆಗಳು ನಡೆಯಲಿವೆ ಎಂದರು
ಈ ಪತ್ರಿಕಾಗೋಷ್ಠಿಯಲ್ಲಿ ಸೋಮಲಿಂಗ ಕರಗೋಲಿ, ಲಕ್ಷ್ಮಣ ಕವಲಿ, ರಾಚಯ್ಯ ಮಠಪತಿ, ಬಸವರಾಜ ಕೊಳಲಿ, ಗಂಗಪ್ಪ ಜಕನೂರ, ಸಿದ್ದರಾಮ ಸಂಕ, ಕಮಾನ ಮಾಲಿಂಗಪುರ ಮುಂತಾದವರು ಭಾಗವಹಿಸಿದರು.

## ಸಾಮಾಜಿಕ ಮತ್ತು ಆರ್ಥಿಕ ಸರ್ವೆ ಕಾರ್ಯಕ್ರಮ




ರಾಯಬಾಗ : ಕರ್ನಾಟಕ ರಾಜ್ಯ ಸರ್ಕಾರದ ಮಹತ್ವಕಾಂಕ್ಷೆ ಯೋಜನೆ ಸಾಮಾಜಿಕ ಮತ್ತು ಆರ್ಥಿಕ ಸರ್ವೆ ಕಾರ್ಯಕ್ರಮ ವನ್ನು. ರಾಯಬಾಗ್ ಗ್ರಾಮೀಣ ಗ್ರಾಮ ಪಂಚಾಯಿತಿ ಸಭಾ.ಭವನದಲ್ಲಿ ಪ್ರಾಥಮಿಕ್ ಶಾಲಾ ಶಿಕ್ಷಕರು ಅಂಗನವಾಡಿ ಶಿಕ್ಷಕರು ಆಶಾ ಕಾರ್ಯಕರ್ತೆಯರು ಸಭೆಯನ್ನು. ಆಯೋಜಿಸಲಾಗಿತ್ತುದಿ. 7/10/2025 ರಿಂದ.18/10/2025 ವರೆಗೆ ಸಂಪೂರ್ಣ ಈ ಸರ್ವೆ ಕಾರ್ಯಕ್ರಮವನ್ನು ಮುಗಿಸಬೇಕಾಗಿದ್ದ ಕಾರಣ ಇನ್ನೂ 5.. ರಿಂದ 10. ಪರ್ಸೆಂಟ್ ಸರ್ವೆ ಉಳಿದ್ದ ಕಾರಣದಿಂದ ಅತಿ ಜರೂರಾಗಿ ಸರ್ವೆ ಕಾರ್ಯಕ್ರಮವನ್ನು ಮುಗಿಸಿಕೊಡಬೇಕು ಎಂದು ನೋಡಲು ಅಧಿಕಾರಿಯವರಾದ ಶ್ರೀಮತಿ ನೇತ್ರಾ ಬೋಸ್ಲೆ ಸಹಾಯಕ ನಿರ್ದೇಶಕರು ತೋಟಗಾರಿಕೆ ಇಲಾಖೆ ರಾಯಬಾಗ್ ಇವರ ಅಧ್ಯಕ್ಷತೆಯಲ್ಲಿ ಸಭೆಯನ್ನು ಆಯೋಜಿಸಲಾಗಿತ್ತು ಈ ಸಂದರ್ಭದಲ್ಲಿ ರಾಯಬಾಗ್ ಗ್ರಾಮೀಣ ಪಂಚಾಯಿತಿಯ ಅಭಿವೃದ್ಧಿ ಅಧಿಕಾರಿಯಾಗಿ ಶ್ರೀ ಹನುಮಂತ್ ಕಿಲಾರಿ ಶಾಲಾ ಶಿಕ್ಷಕರಾದ ವಿಷ್ಣು ಅರಿಗೆ ವಿನೋದ್ ಚೌಹಾನ್ ಬಿ ಆರ್ ಸಿ ಯ ಹುಲ್ಲುಗ ಬಳ್ಳಿ ಸರ್ ವಸಂತ್ ಕಾಂಬಳೆ ಗ್ರಾಮ ಪಂಚಾಯತ್ ಸದಸ್ಯರು ರಾಯಬಾಗ್ ಗ್ರಾಮೀಣ್ ಇವರು ಉಪಸ್ಥಿತರಿದ್ದರು

## ವಿಶ್ವ ಹಿರಿಯ ನಾಗರಿಕರ ದಿನಾಚರಣೆ



ಬೆಳಗಾವಿ, : ವಿಶ್ವ ಹಿರಿಯ ನಾಗರಿಕರ ದಿನಾಚರಣೆ-2025 ಪ್ರಯುಕ್ತ ಅಕ್ಟೋಬರ, 15, 2025 ರಂದು ಬೆಳಿಗ್ಗೆ 11 ಗಂಟೆಯಿಂದ ನಗರದ ಶ್ರೀ ಎಸ್. ಜಿ. ಬಾಳೇಕುಂದ್ರಿ ಇಂಜಿನೀಯರಿಂಗ್ ಕಾಲೇಜು ಮೈದಾನದಲ್ಲಿ ಹಿರಿಯ ನಾಗರಿಕರಿಗಾಗಿ ಕ್ರೀಡಾ ಸ್ಪರ್ಧೆಗಳನ್ನು ಹಾಗೂ ಆಡಿಟೋರಿಯಂ ಹಾಲ್‌ದಲ್ಲಿ ಸಾಂಸ್ಕೃತಿಕ ಸ್ಪರ್ಧೆಗಳನ್ನು ಹಮ್ಮಿಕೊಳ್ಳಲಾಗಿತ್ತು.
ನಾಗನೂರ ಮಠ ಶ್ರೀ ಡಾ. ಅಲ್ಲಮಪ್ರಭು ಮಹಾಸ್ವಾಮಿಗಳು ಕ್ರೀಡಾಕೂಟವನ್ನು ಉದ್ಘಾಟಿಸಿ ಚಾಲನೆ ನೀಡಿದರು. ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಉಪನಿರ್ದೇಶಕರಾದ ಚೇತನಕುಮಾರ್. ಎಮ್.ಎನ್ ಅವರು ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದರು, ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರ ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಸದಸ್ಯ ಕಾರ್ಯದರ್ಶಿ ಸಂದೀಪ ಪಾಟೀಲ್ ಮುಖ್ಯ ಅತಿಥಿಗಳಾಗಿ ಆಗಮಿಸಿದ್ದರು.
ಕಾರ್ಯಕ್ರಮದಲ್ಲಿ ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿಗಳಾದ ನಾಮದೇವ ಬೀಲ್ಕರ್, ಹಿರಿಯ ನಾಗರಿಕರ ಸಂಘಗಳ ಪದಾಧಿಕಾರಿಗಳಾದ ವೈ. ಎಂ. ಬೆಂಡಿಗೇರಿ, ಎಸ್.ಬಿ. ಸಿದ್ನಾಳ, ಮಹಾಂತೇಶ ಹಿರೇಮಠ, ವಿರುಪಾಕ್ಷಿ ಜಿ. ಹಿರೇಮಠ, ಹಾಗೂ ಹಿರಿಯ ನಾಗರಿಕರು ಮತ್ತು ಹಿರಿಯ ನಾಗರಿಕರಿಗಾಗಿ ಕಾರ್ಯ ನಿರ್ವಹಿಸುತ್ತಿರುವ ಹಲವಾರು ಸ್ವಯಂ ಸೇವಾ ಸಂಸ್ಥೆಗಳ ಪದಾಧಿಕಾರಿಗಳು, ಸಿಬ್ಬಂದಿಗಳು ಉಪಸ್ಥಿತರಿದ್ದರು.
***

# ವಿದ್ಯೆ ಕಲಿಸಿದ ಗುರು ಶ್ರೇಷ್ಠ



ರಬಕವಿ-ಬನಹಟ್ಟಿ,ಅ16: ಪ್ರತಿಯೊಬ್ಬರಿಗೂ ಜೀವನದಲ್ಲಿ ಮೂರು ರೀತಿಯ ಗುರುಗಳು ದೊರೆಯುತ್ತಾರೆ. ಪ್ರಾರಂಭದಲ್ಲಿ ತಂದೆ ತಾಯಿ, ನಂತರ ವಿದ್ಯೆ ಕಲಿಸುವ ಗುರು ಮತ್ತು ಆಧ್ಯಾತ್ಮಿಕ ಗುರು. ಇವರಲ್ಲಿ ವಿದ್ಯೆ ಕಲಿಸಿದ ಗುರುವಿಗೆ ಶ್ರೇಷ್ಠ ಸ್ಥಾನವಿದೆ ಎಂದು ಇಲ್ಲಿನ ಹಿರೇಮಠದ ಶರಣಬಸವ ಶಿವಾಚಾರ್ಯರು ನುಡಿದರು.
ಅವರು ಈಚೇಗೆ ಇಲ್ಲಿಯ ಎಸ್‌ಟಿಸಿ ಕಾಲೇಜಿನಲ್ಲಿ 2005 ರಲ್ಲಿ ವಾಣಿಜ್ಯ ವಿಭಾಗದಲ್ಲಿ ಪದವಿ ಪಡೆದುಕೊಂಡ ವಿದ್ಯಾರ್ಥಿಗಳು ಹಮ್ಮಿಕೊಂಡ ಗುರುವಂದನೆ ಮತ್ತು ಸ್ನೇಹ ಸಂಗಮ ಕಾರ್ಯಕ್ರಮದಲ್ಲಿ ಮಾತನಾಡಿದರು.
ನಿವೃತ್ತ ಪ್ರಾಚಾರ್ಯ ಎಸ್.ಎಸ್.ಹೂಲಿ ಮಾತನಾಡಿ, ವಿದ್ಯಾರ್ಥಿಗಳು ಸತತವಾದ ಪ್ರಯತ್ನದ ಮೂಲಕ ಶ್ರೇಷ್ಠ ಸಾಧನೆ ಮಾಡಲು ಸಾಧ್ಯ. ತಮ್ಮ ಮಕ್ಕಳಿಗೆ ಉತ್ತಮ ಸಂಸ್ಕಾರ ನೀಡುವುದರ ಜೊತೆಗೆ ಉತ್ತಮ ಶಿಕ್ಷಣವನ್ನು ನೀಡಬೇಕು. ಕಲಿತ ಶಿಕ್ಷಣ ಸಂಸ್ಥೆಗೆ ಕೀರ್ತಿ ತರುವ ಕಾರ್ಯವನ್ನು ಮಾಡಬೇಕು ಎಂದು ತಿಳಿಸಿದರು.
ಆನಂದ ಹಾರೂಗೇರಿ, ವಿಜಯ ಪೂಜಾರಿ, ಗೀತಾ ಪಟ್ಟಣ, ಲಕ್ಷ್ಮಿ ಹಂಜಿ ಮಾತನಾಡಿದರು. ಕಾರ್ಯಕ್ರಮದಲ್ಲಿ ಗುರುಗಳಾದ ಬಿ.ಆರ್. ಬಿರಾದಾರ, ಸಂಗಮೇಶ ಮಟೋಳಿ, ವೈ.ಡಿ.ಬಾಗಿ, ಅಶೋಕ ಜಾಧವ, ಪ್ರಾಚಾರ್ಯ ಜಿ.ಆರ್.ಜುನ್ನಾಯ್ಕರ್, ವಿಶ್ವಜ ಕಾಡದೇವರ, ಗೋಕುಲ ಕಾಬರಾ, ಶೋಭಾ ಪಿಟಗಿ, ಹಳೆಯ ವಿದ್ಯಾರ್ಥಿ ರಮೇಶ ಸವದಿಯವರನ್ನು ಸನ್ಮಾನಿಸಿದರು.
ಶಿವು ಇಟ್ನಾಳ, ರವಿ ಹಾರೂಗೇರಿ, ರಾಜು ಆಸಂಗಿ, ಶಂಕರ ನ್ಯಾಮಗೌಡ, ಚಂದ್ರ ಹನಗಂಡಿ, ಮಹೇಶ ಧಡೂತಿ, ಮಹಾಂತೇಶ ಬಂಗಿ, ಶಿವಾನಂದ ಜಾಲಿಗಿಡದ, ಮಹಾಂತೇಶ ಚನಪ್ಪಗೋಳ, ರಾಗೂ ಜಮಖಂಡಿ, ಈರಪ್ಪ ಚಿಂಚಖಂಡಿ,, ರಾಹುಲ ಶಿರಹಟ್ಟಿ ಸೇರಿದಂತೆ ಅನೇಕರು ಇದ್ದರು.
****

BELAGINA SURYODHYA KANNADA DAILY MORNING Editor, Printer, PUblisher and Owned By GURURAJ IRAPPA KADAM Plot No.2743 NEAR KEB POWER HOUSE RAMTEERTH NAGAR, SHIVAJI NAGAR BELAGAVI-590016
DIST-BELAGAVI,STATE KARNATAKA PRINTED At M/S LAXMI PRINTERS, No. 627,Auto Nagar,Belagavi,Dist- Belagavi Karnataka, RNI No. KARKAN/2019/77640, Volume : 07, Issue : 215, Postal Reg No. PMG/KA/NK/BM/135/25-27 / POST AT Vantamury Colony Post Office